VOLUME: 16 | 02 JUNE 2026 | ಭಾನುವಾರ | RS: 2 | PAGE: 06 ISSUE: 112 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಐಪಿಎಲ್‌ನಲ್ಲಿ ಆರ್‌ಸಿಬಿ ಸತತ ಎರಡನೇ ಬಾರಿಗೆ ಟ್ರೋಫಿ ಗೆದ್ದ ಬೆನ್ನಲ್ಲೇ, ನಟಿ ಅನುಷ್ಕಾ ಶರ್ಮಾ ಅವರನ್ನು ಅಭಿಮಾನಿಗಳು ತಂಡದ 'ಲಕ್ಕಿ ಚಾರ್ಮ್' ಎಂದು ಕೊಂಡಾಡುತ್ತಿದ್ದಾರೆ. ಈ ಹಿಂದೆ ವಿರಾಟ್ ಕೊಹ್ಲಿ ಕಳಪೆ ಪ್ರದರ್ಶನ ನೀಡಿದಾಗಲೆಲ್ಲಾ ಅನುಷ್ಕಾ ಅವರನ್ನೇ ಗುರಿ ಮಾಡಿ ತೀವ್ರವಾಗಿ ಟ್ರೋಲ್ ಮಾಡಲಾಗುತ್ತಿತ್ತು. ಆದರೆ, ಈಗ ಕಾಲ ಬದಲಾಗಿ ಹೊಗಳುತ್ತಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ರಾಜ್ಯದ ಪ್ರಮುಖ ನಾಯಕರಲ್ಲಿ ಒಬ್ಬರಾಗಿರುವ ಡಾ. ಜಿ. ಪರಮೇಶ್ವರ್ ಅವರಿಗೆ ಸಚಿವ ಸಂಪುಟದಲ್ಲಿ ಪ್ರಮುಖ ಜವಾಬ್ದಾರಿ ಮುಂದುವರಿಯುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಹಿರಿಯ ನಾಯಕತ್ವ ಮತ್ತು ಆಡಳಿತಾತ್ಮಕ ಅನುಭವ ಅವರ ಪರವಾಗಿದೆ. ಅದೇ ರೀತಿ ಎಂ.ಬಿ. ಪಾಟೀಲ ಅವರಿಗೂ ಪ್ರಮುಖ ಖಾತೆ ನೀಡುವ ಸಾಧ್ಯತೆಗಳ ಬಗ್ಗೆ ಪಕ್ಷದ ವಲಯದಲ್ಲಿ ಚರ್ಚೆ ನಡೆಯುತ್ತಿದೆ. ಸತೀಶ್ ಜಾರಕಿಹೊಳಿ ಹೆಸರು ಕೂಡ ಪ್ರಮುಖವಾಗಿ ಕೇಳಿಬರುತ್ತಿದೆ. ಉತ್ತರ ಕರ್ನಾಟಕದಲ್ಲಿ ಪ್ರಭಾವ ಹೊಂದಿರುವ ಅವರು ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ಕಾರಣದಿಂದ ಸಚಿವ ಸಂಪುಟದಲ್ಲಿ ಮಹತ್ವದ ಸ್ಥಾನ ಪಡೆಯುವ ಸಾಧ್ಯತೆಗಳಿವೆ.

# ಡಿ.ಕೆ.ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಯಾರಿಗೆ ಅವಕಾಶ?

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತ ಚರ್ಚೆಗಳು ಮತ್ತೆ ಜೋರಾಗಿರುವ ಬೆನ್ನಲ್ಲೇ, ಒಂದು ವೇಳೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ಸಿಕ್ಕರೆ ಅವರ ಸಚಿವ ಸಂಪುಟದಲ್ಲಿ ಯಾರಿಗೆ ಅವಕಾಶ ಸಿಗಬಹುದು ಎಂಬ ಬಗ್ಗೆ ಕಾಂಗ್ರೆಸ್ ವಲಯದಲ್ಲಿ ಕುತೂಹಲ ಹೆಚ್ಚಾಗಿದೆ. ಪಕ್ಷದ ಒಳವಲಯದಲ್ಲಿ ನಡೆಯುತ್ತಿರುವ ಚರ್ಚೆಗಳು, ಪ್ರಾದೇಶಿಕ ಸಮತೋಲನ, ಜಾತಿ ಸಮೀಕರಣ ಹಾಗೂ ಆಡಳಿತಾತ್ಮಕ ಅನುಭವದ ಆಧಾರದ ಮೇಲೆ ಹಲವು ನಾಯಕರ ಹೆಸರುಗಳು ಕೇಳಿಬರುತ್ತಿವೆ.

ಕಾಂಗ್ರೆಸ್ ಪಕ್ಷವು ಸಾಮಾನ್ಯವಾಗಿ ಸಚಿವ ಸಂಪುಟ ರಚನೆ ವೇಳೆ ಪ್ರದೇಶವಾರು, ಸಮುದಾಯವಾರು ಹಾಗೂ ರಾಜಕೀಯ ಪ್ರಭಾವವನ್ನು ಗಮನದಲ್ಲಿಟ್ಟುಕೊಳ್ಳುತ್ತದೆ. ಹೀಗಾಗಿ ಹಳೆಯ ಮೈಸೂರು ಭಾಗ, ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ, ಕರಾವಳಿ ಹಾಗೂ ಬೆಂಗಳೂರು ಭಾಗಗಳಿಗೆ ಸಮರ್ಪಕ ಪ್ರಾತಿನಿಧ್ಯ ನೀಡುವ ಸಾಧ್ಯತೆಗಳಿವೆ.

ರಾಜ್ಯದ ಪ್ರಮುಖ ನಾಯಕರಲ್ಲಿ ಒಬ್ಬರಾಗಿರುವ ಡಾ. ಜಿ. ಪರಮೇಶ್ವರ್



ಅವರಿಗೆ ಸಚಿವ ಸಂಪುಟದಲ್ಲಿ ಪ್ರಮುಖ ಜವಾಬ್ದಾರಿ ಮುಂದುವರಿಯುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಹಿರಿಯ ನಾಯಕತ್ವ ಮತ್ತು ಆಡಳಿತಾತ್ಮಕ ಅನುಭವ ಅವರ ಪರವಾಗಿದೆ. ಅದೇ ರೀತಿ ಎಂ.ಬಿ. ಪಾಟೀಲ ಅವರಿಗೂ ಪ್ರಮುಖ ಖಾತೆ ನೀಡುವ ಸಾಧ್ಯತೆಗಳ ಬಗ್ಗೆ ಪಕ್ಷದ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಸತೀಶ್ ಜಾರಕಿಹೊಳಿ ಹೆಸರು ಕೂಡ ಪ್ರಮುಖವಾಗಿ ಕೇಳಿಬರುತ್ತಿದೆ. ಉತ್ತರ ಕರ್ನಾಟಕದಲ್ಲಿ ಪ್ರಭಾವ ಹೊಂದಿರುವ ಅವರು ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ಕಾರಣದಿಂದ ಸಚಿವ ಸಂಪುಟದಲ್ಲಿ ಮಹತ್ವದ ಸ್ಥಾನ ಪಡೆಯುವ ಸಾಧ್ಯತೆಗಳಿವೆ. ಇದೇ ರೀತಿ ಕೆ.ಜೆ. ಜಾರ್ಜ್ ಅವರ ಅನುಭವವೂ ಪಕ್ಷಕ್ಕೆ ನೆರವಾಗುವ ಅಂಶವಾಗಿ ಪರಿಗಣಿಸಲಾಗುತ್ತಿದೆ.

ಅಲ್ಪಸಂಖ್ಯಾತ ಸಮುದಾಯದ ಪ್ರಾತಿನಿಧ್ಯದ ದೃಷ್ಟಿಯಿಂದ ಜಮೀರ್ ಅಹ್ಮದ್ ಖಾನ್ ಹಾಗೂ ರಹೀಂ ಖಾನ್ ಮೊದಲಾದ ನಾಯಕರ ಹೆಸರುಗಳು ಚರ್ಚೆಯಲ್ಲಿವೆ. ದಲಿತ ಸಮುದಾಯದಿಂದ ಹಿರಿಯ ಮತ್ತು ಯುವ ನಾಯಕರಿಗೆ ಅವಕಾಶ ನೀಡುವ ಪ್ರಯತ್ನ ನಡೆಯಬಹುದು ಎಂಬ ಮಾತುಗಳೂ ಕೇಳಿಬರುತ್ತಿವೆ.

ಮಹಿಳಾ ಪ್ರಾತಿನಿಧ್ಯಕ್ಕೂ ಕಾಂಗ್ರೆಸ್ ಮಹತ್ವ ನೀಡುವ ಸಾಧ್ಯತೆ ಇದೆ. ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಹಲವು ಮಹಿಳಾ ನಾಯಕಿಯರ ಹೆಸರುಗಳು ಪಕ್ಷದ ಒಳವಲಯದಲ್ಲಿ ಕೇಳಿಬರುತ್ತಿವೆ. ಮಹಿಳೆಯರಿಗೆ ಹೆಚ್ಚಿನ ಅವಕಾಶ ನೀಡುವ ಮೂಲಕ ರಾಜಕೀಯ ಸಂದೇಶ ರವಾನಿಸುವ ಪ್ರಯತ್ನವೂ ಇರಬಹುದು ಎನ್ನಲಾಗುತ್ತಿದೆ.

ಯುವ ನಾಯಕರಿಗೆ ಸಚಿವ ಸಂಪುಟದಲ್ಲಿ ಹೆಚ್ಚಿನ ಸ್ಥಾನ ನೀಡುವ ಸಾಧ್ಯತೆಗಳ ಕುರಿತು ಸಹ ಚರ್ಚೆ ನಡೆಯುತ್ತಿದೆ. ಮುಂದಿನ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಹೊಸ ಮುಖಗಳಿಗೆ ಜವಾಬ್ದಾರಿ ನೀಡುವ ಮೂಲಕ ಪಕ್ಷದ ಭವಿಷ್ಯದ ನಾಯಕತ್ವವನ್ನು ರೂಪಿಸುವ ಪ್ರಯತ್ನವಾಗಬಹುದು ಎಂಬ ವಿಶ್ಲೇಷಣೆಗಳು ವ್ಯಕ್ತವಾಗಿವೆ.

ಇದರ ಜೊತೆಗೆ ಲೋಕಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಉತ್ತಮ ಪ್ರದರ್ಶನ ನೀಡಿರುವ ಜಿಲ್ಲೆಗಳಿಗೆ ಹೆಚ್ಚಿನ ಪ್ರಾತಿನಿಧ್ಯ ಸಿಗುವ ಸಾಧ್ಯತೆಗಳಿವೆ. ಪಕ್ಷದ ಸಂಘಟನೆಯಲ್ಲಿ ಸಕ್ರಿಯವಾಗಿ ಕೆಲಸ ಮಾಡಿದ ಶಾಸಕರಿಗೆ ಸಚಿವ ಸ್ಥಾನ ನೀಡುವ ಒತ್ತಡವೂ ಹೆಚ್ಚಿದೆ ಎಂದು ಹೇಳಲಾಗುತ್ತಿದೆ.

ಆದರೆ ಸಚಿವ ಸಂಪುಟ ರಚನೆ ಎಂಬುದು ಕೇವಲ ರಾಜ್ಯ ನಾಯಕತ್ವದ ನಿರ್ಧಾರವಾಗಿರುವುದಿಲ್ಲ. ಪಕ್ಷದ ಹೈಕಮಾಂಡ್, ಚುನಾವಣಾ ಲೆಕ್ಕಾಚಾರಗಳು, ಪ್ರಾದೇಶಿಕ ಸಮತೋಲನ ಮತ್ತು ಸಾಮಾಜಿಕ ಸಮೀಕರಣಗಳು ಅಂತಿಮ ನಿರ್ಧಾರದಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಹೀಗಾಗಿ ಪ್ರಸ್ತುತ ಕೇಳಿಬರುತ್ತಿರುವ ಹೆಸರುಗಳೆಲ್ಲವೂ ಕೇವಲ ಊಹಾಪೋಹಗಳಾಗಿದ್ದು, ಅಧಿಕೃತ ಘೋಷಣೆ ಬಳಿಕವೇ ನಿಖರ ಚಿತ್ರಣ ಹೊರಬರಲಿದೆ.

ರಾಜಕೀಯ ವಲಯದಲ್ಲಿ ನಡೆಯುತ್ತಿರುವ ಚರ್ಚೆಗಳು ಮತ್ತು ಊಹಾಪೋಹಗಳ ನಡುವೆಯೇ, ಕಾಂಗ್ರೆಸ್ ಕಾರ್ಯಕರ್ತರು ಹಾಗೂ ನಾಯಕರು ಮುಂದಿನ ಬೆಳವಣಿಗೆಗಳತ್ತ ಗಮನ ಹರಿಸಿದ್ದಾರೆ. ಮುಖ್ಯಮಂತ್ರಿ ಸ್ಥಾನ ಹಾಗೂ ಸಚಿವ ಸಂಪುಟ ಪುನಾರಚನೆ ಕುರಿತ ಯಾವುದೇ ನಿರ್ಧಾರ ರಾಜ್ಯ ರಾಜಕೀಯದ ಮೇಲೆ ಮಹತ್ವದ ಪರಿಣಾಮ ಬೀರುವ ಸಾಧ್ಯತೆ ಇದೆ. ಹೀಗಾಗಿ ಮುಂದಿನ ದಿನಗಳಲ್ಲಿ ಪಕ್ಷದ ಹೈಕಮಾಂಡ್ ಹಾಗೂ ರಾಜ್ಯ ನಾಯಕತ್ವದ ನಡೆ ಎಲ್ಲರ ಕುತೂಹಲಕ್ಕೆ ಕಾರಣವಾಗಿದೆ.

## ಜಮೀರ್ ಆಡಿಯೋ ವೈರಲ್

ಬೆಂಗಳೂರು: ದಾವಣಗೆರೆ ದಕ್ಷಿಣ ಮತ ಕ್ಷೇತ್ರದ ಉಪಚುನಾವಣೆ ವೇಳೆ ಮಾತನಾಡಿದ್ದಾರೆ ಎನ್ನಲ್ಲಾದ ಆಡಿಯೋವೊಂದು ವೈರಲ್ ಆಗಿದೆ. ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ಕೆಎಂಡಿಸಿ ಮಾಜಿ ನಿರ್ದೇಶಕ ಮೊಹಮ್ಮದ್ ಸಿರಾಜ್ ಅವರ ನಡುವೆ ನಡೆದಿದೆ ಎನ್ನಲಾದ ಸಂಭಾಷಣೆ ರಾಜ್ಯ ರಾಜಕೀಯದಲ್ಲಿ ಬಿರುಗಾಳಿ ಎಬ್ಬಿಸಿದೆ.

ಈ ಕುರಿತು ಕೆಎಂಡಿಸಿ ಮಾಜಿ ನಿರ್ದೇಶಕ ಮೊಹಮ್ಮದ್ ಸಿರಾಜ್ ಮಾತನಾಡಿ, "ಮಾಧ್ಯಮದಲ್ಲಿ ಬಂದ ಬಳಿಕವೇ ನನಗೆ ಗೊತ್ತಾಗಿದೆ. ಸಾಮಾಜಿಕ ಜಾಲತಾಣದಲ್ಲಿ ಆಡಿಯೋ ವೈರಲ್ ಆಗಿದೆ. ಇದು ಸತ್ಯಕ್ಕೆ ದೂರವಾದ ಮಾತು.

ಇದರ ಬಗ್ಗೆ ನಾನು ಜಮೀರ್ ಸಾಹೇಬ್ರು ಯಾವಾಗಲು ಮಾತನಾಡಿಲ್ಲ. ಜಮೀರ್ ಸಾಹೇಬ್ರ ಜೊತೆ ದಾವಣಗೆರೆ ದಕ್ಷಿಣ ಟಿಕೆಟ್ ಬಗ್ಗೆ ಮೂಡಿದ್ದ ಭಿನ್ನಮತವನ್ನು ಸರಿ ಮಾಡುವ ಬಗ್ಗೆ ಮಾತನಾಡಿದ್ದೆವು. ಇದರ ಹಿಂದೆ ಯಾರ ಕೈವಾಡ ಇದೆ. ಯಾರು ವೈರಲ್ ಮಾಡಿದ್ದಾರೆ ಎಂಬುದು ಇವತ್ತಿಲ್ಲ, ನಾಳೆ ತಿಳಿದು ಬರಲಿದೆ. ನಾನು ಯಾವಾಗಲೂ ಈ ರೀತಿ ಮಾತನಾಡಿಲ್ಲ, ಜಮೀರ್ ಸಾಹೇಬ್ರು ಕೂಡ ಈ ರೀತಿ ಯಾವಾಗಲೂ ನನಗೂ ಕೇಳಿಲ್ಲ. ಶೇ.100% ಸತ್ಯಕ್ಕೆ ದೂರವಾದ ಮಾತು. ಮೇಲ್ನೋಟಕ್ಕೆ ಇದರ ಹಿಂದೆ ಷಡ್ಯಂತ್ರ ಮಾಡಿದ್ದಾರೆ ಎಂದು ಗೊತ್ತಾಗುತ್ತಿದೆ ಎಂದು ಶಂಕೆ ವ್ಯಕ್ತಪಡಿಸಿದರು.

ಜಮೀರ್ ವಿರುದ್ಧ ಏನೇ ಷಡ್ಯಂತ್ರ ಮಾಡಿದ್ರು ನಡೆಯಲ್ಲ: "ದಾವಣಗೆರೆ ದಕ್ಷಿಣ ಉಪಚುನಾವಣೆಯ ಬಳಿಕ ನಮ್ಮ ವಿರುದ್ಧ ಸಾಕಷ್ಟು ಷಡ್ಯಂತ್ರಗಳು ನಡೆದಿವೆ. ನನ್ನ ವಿರುದ್ಧ ಜಬ್ಬಾರ್ ಹಾಗೂ ನಸೀರ್ ಸಾಹೇಬ್ರು ಅವರನ್ನು ಷಡ್ಯಂತ್ರ ಮಾಡಿ ಪಕ್ಷದಿಂದ ಹೊರಹಾಕಿದ್ರು. ಅಂದಿನಿಂದ ನಮ್ಮ ವಿರುದ್ಧ ಪಿತೂರಿ ನಡೆಯುತ್ತಲೇ ಇದೆ. ಯಾರು ಇದನ್ನು ವೈರಲ್ ಮಾಡಿದ್ರು ಅನ್ನೋದನ್ನು ಬಹಿರಂಗಪಡಿಸಲಿ ಎಂದು ಅವರು ಒತ್ತಾಯಿಸಿದರು.

ಜಮೀರ್ ಅಹ್ಮದ್ ಅವರ ವಿರುದ್ಧ ಏನೇ ಷಡ್ಯಂತ್ರ ಮಾಡಿದ್ರೂ ಏನೂ ನಡೆಯಲ್ಲ. ನಮ್ಮ ಸಮಾಜ ಎಲ್ಲವನ್ನು ನೋಡುತ್ತಿದೆ. ಅವರ ವಿರುದ್ಧ ಏನ್ ಷಡ್ಯಂತ್ರ ಮಾಡಿದ್ರು ಅವರಿಗೆ ಹಿನ್ನಡೆ ಆಗಲ್ಲ. ಇನ್ನು ಆಡಿಯೋದಲ್ಲಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸಕರಿಯಪ್ಪ ಬಗ್ಗೆ ಪ್ರಸ್ತಾಪ ಮಾಡಿರುವ ಬಗ್ಗೆ ಮಾತನಾಡಿ, ಅವರು ನನಗೆ ಬಹಳ ಅತ್ಯಾಪ್ತ. ನಾನಲ್ಲ ನಮ್ಮ ಮಂತ್ರಿಯಾಗಿದ್ದ ಎಸ್.ಎಸ್ ಮಲ್ಲಿಕಾರ್ಜುನ ಅವರೇ ಹೇಳಿದ್ದಾರೆ.

## ಭಾರೀ ಮಳೆ ಎಚ್ಚರಿಕೆ

ಬೆಂಗಳೂರು: ರಾಜ್ಯದ ಕರಾವಳಿ ಹಾಗೂ ಒಳನಾಡು ಜಿಲ್ಲೆಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಹವಾಮಾನ ಇಲಾಖೆಯ ವರದಿಯ ಪ್ರಕಾರ, ಜೂನ್ 1 ರಿಂದ 4ರವರೆಗೆ ರಾಜ್ಯದ ಒಳನಾಡು ಜಿಲ್ಲೆಗಳ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಇದೇ ರೀತಿಯಾಗಿ ಜೂನ್ 3 ರಿಂದ 5ರವರೆಗೆ ಕರಾವಳಿ ಜಿಲ್ಲೆಗಳಲ್ಲೂ ಸಹ ಮಳೆಯಾಗುವ ಸಾಧ್ಯತೆ ಇದೆ.

ಈ ದಿನಗಳಂದು ರಾಜ್ಯದ ಪ್ರತ್ಯೇಕ ಪ್ರದೇಶಗಳಲ್ಲಿ ಸುಮಾರು 64.5 ಮಿ.ಮೀನಿಂದ 115.5 ಮಿ.ಮೀ ನಷ್ಟು ಭಾರೀ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಹವಾಮಾನ ಇಲಾಖೆಯು ಯೆಲ್ಲೋ ಅಲರ್ಟ್ ಘೋಷಿಸಿದೆ. ಮಳೆಯ ತೀವ್ರತೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಹಾಗೂ ರೈತರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಮತ್ತು ಸುರಕ್ಷಿತವಾಗಿರುವಂತೆ ಕೋರಲಾಗಿದೆ.



**ತುಮಕೂರು ತಾಲ್ಲೂಕಿನ ಮಲ್ಲಸಂದ್ರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹೆಚ್.ಪಿ.ವಿ ಲಸಿಕಾ ಅಭಿಯಾನ-2026ಕ್ಕೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ, ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಸುರೇಶ್ ಗೌಡರವರು, ಬಿಜೆಪಿ ಜಿಲ್ಲಾಧ್ಯಕ್ಷ ರವಿ ಹೆಬ್ಬಾಕರವರು, ತುಮಕೂರು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಅಶ್ವಜ ಅಶೋಕ್ ಅವರು, ಮುಖಂಡ ಹುಚ್ಚಯ್ಯರವರು ಹಾಗೂ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.**

## ಲೋಕಾ ಬಲೆಗೆ ಬಿದ್ದ ಪಬ್ಲಿಕ್ ಪ್ರಾಸಿಕ್ಯೂಟರ್

ಬೆಂಗಳೂರು: ಜಾಮೀನು ಅರ್ಜಿಗೆ ತಕರಾರು ಅರ್ಜಿ ಸಲ್ಲಿಸಲು ದೂರುದಾರರಿಂದ ಬೇಡಿಕೆಯಿಟ್ಟಿದ್ದ 5 ಸಾವಿರ ಲಂಚ ಪಡೆಯುವಾಗ ಮಹಿಳಾ ಪಬ್ಲಿಕ್ ಪ್ರಾಸಿಕ್ಯೂಟರ್ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿರುವ ಪ್ರಕರಣ ನಗರದಲ್ಲಿ ನಡೆದಿದೆ.

ಸವಿತಾ ನವೀನ್ ಪಾಟೀಲ್ ಸಿಕ್ಕಿಬಿದ್ದಿರುವ ಸರ್ಕಾರಿ ಅಭಿಯೋಜಕಿ. ನಗರದ ಸಿಸಿಹೆಚ್–54ರ ನ್ಯಾಯಾಲಯದಲ್ಲಿ ಎಸ್‌ಪಿಪಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಇಂದು ಬೆಳಗ್ಗೆ ದೂರುದಾರರಿಂದ 5 ಸಾವಿರ ರೂಪಾಯಿ ಲಂಚ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ. ಸದ್ಯ ಎಸ್‌ಪಿಪಿಯನ್ನು ಬಂಧಿಸಿ ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅತ್ಯಾಚಾರ ಪ್ರಕರಣ ಸಂಬಂಧ ಆರೋಪಿ ವಿರುದ್ಧ ಚೆನ್ನಮ್ಮನಕೆರೆ ಅಚ್ಚುಕಟ್ಟು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಇತ್ತೀಚೆಗೆ ಜಾಮೀನು ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದ. ಈ ಬಗ್ಗೆ ಆಕ್ಷೇಪಣೆ ಸಲ್ಲಿಸಲು ಎಸ್‌ಪಿಪಿಗೆ ಕೋರ್ಟ್ ತಿಳಿಸಿತ್ತು. ಪ್ರಕರಣದ ವಿಚಾರಣೆ ಮುಂದುವರೆಸಲು ಸಂತ್ರಸ್ತೆ ಬಳಿ ಸವಿತಾ ಅವರು ಲಂಚ ಕೇಳಿದ್ದರು.

ಟೈಪಿಂಗ್ ಸೇರಿದಂತೆ ಇನ್ನಿತರ ಖರ್ಚಿಗಾಗಿ ರೂ.5 ಸಾವಿರ ನೀಡುವಂತೆ ಬೇಡಿಕೆಯಿಟ್ಟಿದ್ದರು. ಈ ಸಂಬಂಧ ಸಂತ್ರಸ್ತೆ ಪರವಾಗಿ ಮಂಜುನಾಥ್ ಎಂಬುವರು ನೀಡಿದ ದೂರಿನ ಮೇರೆಗೆ ಲೋಕಾಯುಕ್ತ ಡಿವೈಎಸ್ಪಿ ಬ್ರಿಜೇಶ್ ಮ್ಯಾಥ್ಯೂ ನೇತೃತ್ವದಲ್ಲಿ ಇನ್‌ಸ್ಪೆಕ್ಟರ್ ಶ್ರೀಕಾಂತ್ ತಂಡವು ಕಾರ್ಯಾಚರಣೆ ನಡೆಸಿ ಬಂಧಿಸಲಾಗಿದೆ ಎಂದು ಅಧಿಕಾರಿಗಳುತಿಳಿಸಿದ್ಧಾರೆ.

ಭಾನುವಾರ ಹಳೇ ವಿಮಾನ ನಿಲ್ದಾಣ ರಸ್ತೆಯ ಒಂದು ಭಾಗದಲ್ಲಿ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು. ಈ ಪ್ರದೇಶದಲ್ಲಿ ಅಂಡರ್‌ಪಾಸ್ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದರಿಂದ ವಾಹನಗಳ ಓಡಾಟ ಈಗಾಗಲೇ ಇಕ್ಕಟ್ಟಿನ ಪರಿಸ್ಥಿತಿಯಲ್ಲಿತ್ತು. ಅದರ ಮಧ್ಯೆ ಹೇರಲಾದ ನಿರ್ಬಂಧದಿಂದ ಸಂಚಾರ ದಟ್ಟಣೆ ಮತ್ತಷ್ಟು ಹೆಚ್ಚಾಗಿ ನೂರಾರು ಪ್ರಯಾಣಿಕರು ಪರದಾಡಬೇಕಾಯಿತು.

## ಝೀರೋ ಟ್ರಾಫಿಕ್‌ಗೆ ಆಕ್ರೋಶ

ಬೆಂಗಳೂರು: ರಾಜ್ಯಪಾಲರ ವಾಹನ ಸಂಚಾರಕ್ಕೆ ಅನುವು ಮಾಡಿಕೊಡುವ ಉದ್ದೇಶದಿಂದ ನಗರದ ಹಳೇ ವಿಮಾನ ನಿಲ್ದಾಣ ರಸ್ತೆಯಲ್ಲಿ ಭಾನುವಾರ ಸುಮಾರು 30 ನಿಮಿಷಗಳ ಕಾಲ ಸಾರ್ವಜನಿಕ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದ್ದು, ಈ ವೇಳೆ ಗರ್ಭಿಣಿ ಪತ್ನಿಯೊಂದಿಗೆ ವಾಹನದಲ್ಲಿ ಸಿಲುಕಿಕೊಂಡ ವ್ಯಕ್ತಿಯೊಬ್ಬರು ರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದ ಘಟನೆ ಗಮನ ಸೆಳೆದಿದೆ.

ಸಂಬಂಧಿತ ವ್ಯಕ್ತಿ ರಸ್ತೆಯಲ್ಲಿ ಕುಳಿತು ಸಂಚಾರ ಪೊಲೀಸರೊಂದಿಗೆ ವಾಗ್ವಾದ ನಡೆಸುತ್ತಿರುವ ದೃಶ್ಯಗಳಿರುವ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡಿದ್ದು, ಸಾರ್ವಜನಿಕ ವಲಯದಲ್ಲಿ ಪರ–ವಿರೋಧ ಚರ್ಚೆಗೆ ಕಾರಣವಾಗಿದೆ. ಈಗಾಗಲೇ ನಗರದಲ್ಲಿ ವಿಐಪಿ ಸಂಸ್ಕೃತಿಯಿಂದ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ ಎಂದು ಹಲವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಭಾನುವಾರ ಹಳೇ ವಿಮಾನ ನಿಲ್ದಾಣ ರಸ್ತೆಯ ಒಂದು ಭಾಗದಲ್ಲಿ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು. ಈ ಪ್ರದೇಶದಲ್ಲಿ ಅಂಡರ್‌ಪಾಸ್ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದರಿಂದ ವಾಹನಗಳ ಓಡಾಟ ಈಗಾಗಲೇ ಇಕ್ಕಟ್ಟಿನ ಪರಿಸ್ಥಿತಿಯಲ್ಲಿತ್ತು. ಅದರ ಮಧ್ಯೆ ಹೇರಲಾದ ನಿರ್ಬಂಧದಿಂದ ಸಂಚಾರ ದಟ್ಟಣೆ ಮತ್ತಷ್ಟು ಹೆಚ್ಚಾಗಿ ನೂರಾರು ಪ್ರಯಾಣಿಕರು ಪರದಾಡಬೇಕಾಯಿತು.

ವ್ಯಕ್ತಿಯೊಬ್ಬರು, "ನನ್ನ ಪತ್ನಿ ಗರ್ಭಿಣಿ. ಅವರು ಕಾರಿನೊಳಗೆ ತೊಂದರೆ ಅನುಭವಿಸುತ್ತಿದ್ದಾರೆ. ದಯವಿಟ್ಟು ದಾರಿ ಬಿಡಿ" ಎಂದು ಪೊಲೀಸರನ್ನು ಮನವಿ ಮಾಡುತ್ತಿರುವುದು ಕಾಣಿಸುತ್ತದೆ. ಇದಕ್ಕೆ ಪ್ರತಿಯಾಗಿ ಪೊಲೀಸರು, "ಎರಡು ನಿಮಿಷ ಹೊರಗೆ ನಿಲ್ಲಿ" ಎಂದು ಹೇಳಿರುವ ದೃಶ್ಯವೂ ದಾಖಲಾಗಿದೆ.



ಇನ್ನೊಂದೆಡೆ, ರಸ್ತೆ ಮಧ್ಯೆ ಕುಳಿತುಕೊಂಡ ವ್ಯಕ್ತಿಯನ್ನು ಎಬ್ಬಿಸಲು ಪೊಲೀಸರು ಪ್ರಯತ್ನಿಸಿದಾಗ ಮಾತಿನ ಚಕಮಕಿ ನಡೆದಿರುವುದೂ ವಿಡಿಯೊದಲ್ಲಿ ಕಂಡುಬಂದಿದೆ. ಸಂಬಂಧಿತ ವ್ಯಕ್ತಿ ರಸ್ತೆಯಲ್ಲಿ ಕುಳಿತು ಸಂಚಾರ ಪೊಲೀಸರೊಂದಿಗೆ ವಾಗ್ವಾದ ನಡೆಸುತ್ತಿರುವ ದೃಶ್ಯಗಳಿರುವ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡಿದ್ದು, ಸಾರ್ವಜನಿಕ ವಲಯದಲ್ಲಿ ಪರ–ವಿರೋಧ ಚರ್ಚೆಗೆ ಕಾರಣವಾಗಿದೆ. ಈಗಾಗಲೇ ನಗರದಲ್ಲಿ ವಿಐಪಿ ಸಂಸ್ಕೃತಿಯಿಂದ ಸಂಚಾರ ದಟ್ಟಣೆ ಹೆಚ್ಚಾಗುತ್ತಿದೆ ಎಂದು ಹಲವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಭಾನುವಾರ ಹಳೇ ವಿಮಾನ ನಿಲ್ದಾಣ ರಸ್ತೆಯ ಒಂದು ಭಾಗದಲ್ಲಿ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು. ಈ ಪ್ರದೇಶದಲ್ಲಿ ಅಂಡರ್‌ಪಾಸ್ ನಿರ್ಮಾಣ ಕಾಮಗಾರಿ ನಡೆಯುತ್ತಿರುವುದರಿಂದ ವಾಹನಗಳ ಓಡಾಟ ಈಗಾಗಲೇ ಇಕ್ಕಟ್ಟಿನ ಪರಿಸ್ಥಿತಿಯಲ್ಲಿತ್ತು. ಅದರ ಮಧ್ಯೆ ಹೇರಲಾದ ನಿರ್ಬಂಧದಿಂದ ಸಂಚಾರ ದಟ್ಟಣೆ ಮತ್ತಷ್ಟು ಹೆಚ್ಚಾಗಿ ನೂರಾರು ಪ್ರಯಾಣಿಕರು ಪರದಾಡಬೇಕಾಯಿತು.

ವ್ಯಕ್ತಿಯೊಬ್ಬರು, "ನನ್ನ ಪತ್ನಿ ಗರ್ಭಿಣಿ. ಅವರು ಕಾರಿನೊಳಗೆ ತೊಂದರೆ ಅನುಭವಿಸುತ್ತಿದ್ದಾರೆ. ದಯವಿಟ್ಟು ದಾರಿ ಬಿಡಿ" ಎಂದು ಪೊಲೀಸರನ್ನು ಮನವಿ ಮಾಡುತ್ತಿರುವುದು ಕಾಣಿಸುತ್ತದೆ. ಇದಕ್ಕೆ ಪ್ರತಿಯಾಗಿ ಪೊಲೀಸರು, "ಎರಡು ನಿಮಿಷ ಹೊರಗೆ ನಿಲ್ಲಿ" ಎಂದು ಹೇಳಿರುವ ದೃಶ್ಯವೂ ದಾಖಲಾಗಿದೆ.

ಇನ್ನೊಂದೆಡೆ, ರಸ್ತೆ ಮಧ್ಯೆ ಕುಳಿತುಕೊಂಡ ವ್ಯಕ್ತಿಯನ್ನು ಎಬ್ಬಿಸಲು ಪೊಲೀಸರು ಪ್ರಯತ್ನಿಸಿದಾಗ ಮಾತಿನ ಚಕಮಕಿ ನಡೆದಿರುವುದೂ ವಿಡಿಯೊದಲ್ಲಿ ಕಂಡುಬಂದಿದೆ.

ಈ ಘಟನೆ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿದ್ದು, ವೈದ್ಯಕೀಯ ತುರ್ತು ಪರಿಸ್ಥಿತಿ ಇರುವ ಸಂದರ್ಭಗಳಲ್ಲಿಯೂ ರಸ್ತೆ ನಿರ್ಬಂಧಿಸುವುದು ಸಮಂಜಸವೇ ಎಂಬ ಪ್ರಶ್ನೆಯನ್ನು ಹಲವರು ಎತ್ತಿದ್ದಾರೆ.

ಸಾರ್ವಜನಿಕರ ಅನುಕೂಲತೆ ಮತ್ತು ಗಣ್ಯರ ಭದ್ರತೆ ನಡುವಿನ ಸಮತೋಲನವನ್ನು ಕಾಪಾಡುವ ಅಗತ್ಯವಿದೆ ಎಂದು ಅಭಿಪ್ರಾಯಗಳು ವ್ಯಕ್ತವಾಗಿವೆ. ಈ ಘಟನೆ ಕುರಿತು ಸಂಚಾರ ನಿರ್ವಹಣೆಯ ಕ್ರಮಗಳ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ ಮುಂದುವರಿದಿದೆ.

## ಅಧ್ಯಕ್ಷ ಸ್ಥಾನ ಕೇಳಿಲ್ಲ: ಸತೀಶ್‌ಜಾರಕಿಹೊಳಿ

ಬೆಳಗಾವಿ: ರಾಜ್ಯದಲ್ಲಿ ನಾಯಕತ್ವ ಬದಲಾವಣೆ ನಂತರ ಕೆಪಿಸಿಸಿ ಪುನಾರಚನೆ ಬಗ್ಗೆ ಹರಿದಾಡುತ್ತಿರುವ ಊಹಾಪೋಹಗಳ ನಡುವೆ, ಸತೀಶ್ ಜಾರಕಿಹೊಳಿ ತಾವು ಪಕ್ಷದ ನಿಷ್ಠಾವಂತ, ಶಿಸ್ತಿನ ಸಿಪಾಯಿ ಎಂದು ಬಿಂಬಿಸಿಕೊಳ್ಳಲು ಪ್ರಯತ್ನಿಸಿದ್ದಾರೆ. ಪಕ್ಷದ ಪ್ರಮುಖ ಹುದ್ದೆಗಳನ್ನು ಭರ್ತಿ ಮಾಡುವ ಅಂತಿಮ ನಿರ್ಧಾರವು ಸಂಪೂರ್ಣವಾಗಿ ಹೈ ಕಮಾಂಡ್ ಗೆ ಬಿಟ್ಟ ವಿಷಯ ಎಂದಿದ್ದಾರೆ.

**ಕಾಂಗ್ರೆಸ್ ಹೈ ಕಮಾಂಡ್ ಸರ್ಕಾರ ರಚನೆಗೆ ಸಂಬಂಧಿಸಿದ ಚರ್ಚೆಗಳಲ್ಲಿ ನಿರತರಾಗಿರುವುದರಿಂದ ಈ ವಿಷಯದ ಬಗ್ಗೆ ಪಕ್ಷದ ನಾಯಕತ್ವದೊಂದಿಗೆ ಮಾತನಾಡಿಲ್ಲ ಎಂದು ಜಾರಕಿಹೊಳಿ ಹೇಳಿದರು. ಕೆಪಿಸಿಸಿ ಉನ್ನತ ಹುದ್ದೆಗೆ ಲಾಬಿ ಮಾಡುತ್ತಿದ್ದಾರೆ ಎಂಬ ಊಹಾಪೋಹಗಳನ್ನು ತಳ್ಳಿಹಾಕಿದ ಅವರು,ಹೈಕಮಾಂಡ್ ಮುಂದೆ ಯಾವುದೇ ಬೇಡಿಕೆ ಇಟ್ಟಿಲ್ಲ ಎಂದು ಹೇಳಿದರು.**

ಕಾಂಗ್ರೆಸ್ ಹೈ ಕಮಾಂಡ್ ಸರ್ಕಾರ ರಚನೆಗೆ ಸಂಬಂಧಿಸಿದ ಚರ್ಚೆಗಳಲ್ಲಿ ನಿರತರಾಗಿರುವುದರಿಂದ ಈ ವಿಷಯದ ಬಗ್ಗೆ ಪಕ್ಷದ ನಾಯಕತ್ವದೊಂದಿಗೆ ಮಾತನಾಡಿಲ್ಲ ಎಂದು ಜಾರಕಿಹೊಳಿ ಹೇಳಿದರು. ಕೆಪಿಸಿಸಿ ಉನ್ನತ ಹುದ್ದೆಗೆ ಲಾಬಿ ಮಾಡುತ್ತಿದ್ದಾರೆ ಎಂಬ ಊಹಾಪೋಹಗಳನ್ನು ತಳ್ಳಿಹಾಕಿದ ಅವರು,ಹೈಕಮಾಂಡ್ ಮುಂದೆ ಯಾವುದೇ ಬೇಡಿಕೆ ಇಟ್ಟಿಲ್ಲ ಎಂದು ಹೇಳಿದರು.

ನಾನು ಯಾವುದೇ ಬೇಡಿಕೆ ಇಟ್ಟಿಲ್ಲ. ಪಕ್ಷದ ದೃಷ್ಟಿಕೋನದಿಂದ, ನಾನು ಅಧ್ಯಕ್ಷನಾಗುವುದು ಅನಿವಾರ್ಯವಲ್ಲ. ಹೈಕಮಾಂಡ್ ತೆಗೆದುಕೊಳ್ಳುವ ಯಾವುದೇ ನಿರ್ಧಾರ ಅಂತಿಮವಾಗಿರುತ್ತದೆ" ಎಂದು ಅವರು ಹೇಳಿದರು. ಮುಖ್ಯಮಂತ್ರಿ ಹುದ್ದೆಯ ಬದಲಾವಣೆಯ ನಂತರ ಸರ್ಕಾರ ಮತ್ತು ಸಂಘಟನೆಯ ನಡುವೆ ಸಮತೋಲನ ಕಾಪಾಡಲು ಹೈಕಮಾಂಡ್ ಪ್ರಯತ್ನಿಸುತ್ತಿರುವ ಸಮಯದಲ್ಲಿ ಸತೀಶ್ ಜಾರಕೀಹೊಳಿ ಈ ಹೇಳಿಕೆ ನೀಡಿದ್ದಾರೆ. ಭವಿಷ್ಯದ ಚುನಾವಣೆಗಳಿಗೆ ಮುಂಚಿತವಾಗಿ ಕೆಪಿಸಿಸಿ ಅಧ್ಯಕ್ಷರ ಆಯ್ಕೆ ಪಕ್ಷದ ಅಧಿಕಾರ ರಚನೆಯನ್ನು ರೂಪಿಸುವ ನಿರ್ಣಾಯಕ ವಿಷಯವೆಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯ ಪಟ್ಟಿದ್ದಾರೆ. ಸಂಘಟನಾ ಒಗ್ಗಟ್ಟನ್ನು ಖಚಿತಪಡಿಸಿಕೊಳ್ಳಲು ಹಿರಿಯ ನಾಯಕರನ್ನು ಒಳಗೊಂಡ ಸಮನ್ವಯ ಅಥವಾ ಕೋರ್ ಸಮಿತಿಯನ್ನು ರಚಿಸುವ ಪ್ರಸ್ತಾಪದ ವರದಿಗಳ ಕುರಿತು ಮಾತನಾಡಿದ ಜಾರಕಿಹೊಳಿ, ಈ ಕಲ್ಪನೆಯು ಹೊಸದಲ್ಲ ಮತ್ತು ಕಳೆದ ಮೂರು ವರ್ಷಗಳಿಂದ ಚರ್ಚೆಯಲ್ಲಿದೆ ಎಂದು ಹೇಳಿದರು. ಈ ಪ್ರಸ್ತಾಪವು ಮೊದಲೇ ಇತ್ತು, ಆದರೆ ಅದನ್ನು ಎಂದಿಗೂ ಜಾರಿಗೆ ತರಲಾಗಿಲ್ಲ. ಈಗ ಅದನ್ನು ಮತ್ತೆ ಚರ್ಚಿಸಲಾಗುತ್ತಿದೆ. ನಾಯಕತ್ವ ಏನು ನಿರ್ಧರಿಸುತ್ತದೆ ಎಂಬುದನ್ನು ನಾವು ಕಾಯಬೇಕು ಎಂದು ಅವರು ಹೇಳಿದರು.

ಸಂಪುಟ ವಿಸ್ತರಣೆ ಮತ್ತು ಪುನರ್ರಚನೆಯ ಬಗ್ಗೆ ಮಾತನಾಡಿದ ಜಾರಕಿಹೊಳಿ, ಈಗ ಹೊಸ ಮುಖ್ಯಮಂತ್ರಿ ಇದ್ದಾರೆ, ಸಿದ್ದರಾಮಯ್ಯ ಕೂಡ ಇದ್ದಾರೆ. ಸಂಪುಟ ರಚನೆ ಎರಡು ಹಂತಗಳಲ್ಲಿ ಆಗಬಹುದು. ಹಿರಿಯ ನಾಯಕರು ಮೊದಲ ಪಟ್ಟಿಯಲ್ಲಿ ಸ್ಥಾನ ಪಡೆಯಬಹುದು ಎಂದು ಅವರು ಹೇಳಿದರು.

ಸಿದ್ದರಾಮಯ್ಯ ರಾಜೀನಾಮೆ ನೀಡುವ ಮೊದಲು ಅವರ ವಿರುದ್ಧ 37 ಶಾಸಕರ ಗುಂಪು ಪತ್ರಕ್ಕೆ ಸಹಿ ಹಾಕಿದೆ ಎಂಬ ಆರೋಪಗಳನ್ನು ಜಾರಕಿಹೊಳಿ ಬಲವಾಗಿ ತಿರಸ್ಕರಿಸಿದರು. ಈ ಹೇಳಿಕೆಯನ್ನು ಸಂಪೂರ್ಣವಾಗಿ ಆಧಾರರಹಿತ ಎಂದು ಕರೆದ ಅವರು, ಅಂತಹ ಯಾವುದೇ ಪತ್ರವನ್ನು ಕಾಂಗ್ರೆಸ್ ಹೈಕಮಾಂಡ್‌ಗೆ ಕಳುಹಿಸಲಾಗಿಲ್ಲ ಎಂದು ಹೇಳಿದರು. 37 ಪ್ರಭಾವಿ ಶಾಸಕರು ನಿಜವಾಗಿಯೂ ಅಂತಹ ದಾಖಲೆಗೆ ಸಹಿ ಹಾಕಿದ್ದರೆ, ಅದಕ್ಕೆ ಪುರಾವೆಗಳು ಇರಬೇಕಿತ್ತು. ಅಂತಹ ಯಾವುದೇ ಪತ್ರ ಅಸ್ತಿತ್ವದಲ್ಲಿಲ್ಲ. ಇವು ಕೇವಲ ವದಂತಿಗಳು ಮತ್ತು ಕಟ್ಟುಕಥೆಗಳಾಗಿದ್ದು, ಅವುಗಳಿಗೆ ಅನಗತ್ಯ ಪ್ರಾಮುಖ್ಯತೆ ನೀಡಬಾರದು ಎಂದು ಅವರು ಹೇಳಿದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
02/06/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ದೀರ್ಘಾವಧಿ ಸೇವಾ ಪ್ರಶಸ್ತಿ ಗೌರವ ಪ್ರದಾನ

ಚಿತ್ರದುರ್ಗ

ಸಂಸ್ಥೆಯ ಬೆಳವಣಿಗೆಗೆ ಶ್ರಮಿಸಿದ ಉದ್ಯೋಗಿಗಳ ಅತ್ಯುತ್ತಮ ಸೇವೆ ಹಾಗೂ ಬದ್ಧತೆಯನ್ನು ಗುರುತಿಸಿ ಗೌರವಿಸುವ ಸಲುವಾಗಿ, ವೇದಾಂತ ಐರನ್ ಆಂಡ್ ಸ್ಟೀಲ್ ಲಿಮಿಟೆಡ್ – ಐರನ್ ಓರ್ ಕರ್ನಾಟಕ (ಐಒಕೆ) ಸಂಸ್ಥೆಯು ಚಿತ್ರದುರ್ಗದ ಬಂಜಾರ ಭವನದಲ್ಲಿ ದೀರ್ಘಾವಧಿ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಂಡಿತ್ತು.




ಸಂಸ್ಥೆಯಲ್ಲಿ ಸತತ 15 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿದ ಕಾರ್ಮಿಕರನ್ನು ಅವರ ಕುಟುಂಬಸ್ಥರ ಸಮ್ಮುಖದಲ್ಲಿ ವಿಐಎಸ್ಎಲ್–ಐಒಕೆ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಒ) ಶ್ರೀಶೈಲ ಗೌಡ ಹಾಗೂ ಹಿರಿಯ ಅಧಿಕಾರಿಗಳು ಆತ್ಮೀಯವಾಗಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಐಎಸ್ಎಲ್–ಐಒಕೆ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಒ) ಶ್ರೀಶೈಲ ಗೌಡ ಅವರು, "ನಮ್ಮ ಉದ್ಯೋಗಿಗಳ ಸಮರ್ಪಣಾ ಮನೋಭಾವ ಮತ್ತು ಬದ್ಧತೆಯೇ ಸಂಸ್ಥೆಯ ನಿಜವಾದ ಶಕ್ತಿ. ಇದು ಕರ್ನಾಟಕ ಮತ್ತು ದೇಶದ ಪ್ರಗತಿಗೆ ಕೊಡುಗೆ ನೀಡಲು ನಮಗೆ ಶಕ್ತಿ ನೀಡಿದೆ. ವೇದಾಂತ ಸಂಸ್ಥೆಯ ಮೇಲೆ ನಂಬಿಕೆ ಇಟ್ಟು ಮುನ್ನಡೆದ ಪ್ರತಿಯೊಬ್ಬ ಕಾರ್ಮಿಕರಿಗೂ ಮತ್ತು ಅವರ ಕುಟುಂಬದವರಿಗೂ ಅಭಿನಂದನೆಗಳು" ಎಂದು ಹೇಳಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಸಂಸ್ಥೆಯ ಆಪರೇಟರ್ ಕಮ್ ಟೆಕ್ನಿಷಿಯನ್ ಅಶೋಕ ಟಿ. ಅವರು, "ಈ ದೀರ್ಘಾವಧಿ ಸೇವಾ ಪ್ರಶಸ್ತಿ ಸ್ವೀಕರಿಸುತ್ತಿರುವುದು ನನಗೆ ಅತ್ಯಂತ ಹೆಮ್ಮೆಯ ಕ್ಷಣವಾಗಿದೆ. ವಿಐಎಸ್ಎಲ್–ಐಒಕೆ ಸಂಸ್ಥೆಯು ನನ್ನ ವೃತ್ತಿಜೀವನವನ್ನು ರೂಪಿಸಿದೆ. ನಮ್ಮ ರಾಜ್ಯದ ಅಭಿವೃದ್ಧಿಗೆ ನನ್ನದೂ ಒಂದು ಅಳಿಲು ಸೇವೆ ಇರುವುದಕ್ಕೆ ಹೆಮ್ಮೆಯೆನಿಸುತ್ತಿದೆ. ಈ ಗೌರವವು ಮುಂಬರುವ ದಿನಗಳಲ್ಲಿ ಮತ್ತಷ್ಟು ಉತ್ಸಾಹದಿಂದ ಕೆಲಸ ಮಾಡಲು ಪ್ರೇರಣೆ ನೀಡಿದೆ," ಎಂದು ಹರ್ಷ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಅಖಿಲ ಭಾರತ ಟ್ರೇಡ್ ಯೂನಿಯನ್ ಕಾಂಗ್ರೆಸ್ (ಎಐಟಿಯುಸಿ) ಕಾರ್ಮಿಕ ಸಂಘದ ಉಪಾಧ್ಯಕ್ಷರಾದ ಕೆ. ಬಿ. ಸಂತೋಷ್ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ನೂರಾರು ಕಾರ್ಮಿಕರು ಉಪಸ್ಥಿತರಿದ್ದರು.

# ನೂತನ ಸಚಿವ ಸಂಪುಟದಲ್ಲಿ ವೀರಶೈವ ಲಿಂಗಾಯುರಿಗೆ ಹೆಚ್ಚಿನ ಸ್ಥಾನಕ್ಕಾಗಿ ಒತ್ತಾಯ

ಬೆಂಗಳೂರು

ರಾಜ್ಯ ಸರಕಾರ ಸಂಪುಟ ಪುರಚನೆ ಮಾಡುವ ವೇಳೆಯಲ್ಲಿ ವೀರಶೈವ ಲಿಂಗಾಯತ ಸಮುದಾಯಕ್ಕೆ ಹೆಚ್ಚಿನ ಪ್ರಾತಿನಿಧ್ಯವನ್ನು ನೀಡಬೇಕೆಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ– ರಾಷ್ಟ್ರೀಯ ಯುವ ಘಟಕ ಒತ್ತಾಯಿಸಿದೆ.




ಬಸವಣ್ಣನವರ ಶಾಶ್ವತ ಲೌಕಿಕ ಮತ್ತು ಸಮಾನತಾವಾದಿ ತತ್ವಶಾಸ್ತ್ರದಿಂದ ಪ್ರೇರಿತವಾದ ನಮ್ಮ ಸಮುದಾಯವು ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಸಮಗ್ರ ಆಡಳಿತವನ್ನು ಒತ್ತು ನೀಡುವ ಕಾಂಗ್ರೆಸ್ ಸರ್ಕಾರಕ್ಕೆ ನಿರ್ಣಾಯಕ ಬೆಂಬಲ ನೀಡಿದೆ.

ರಾಜ್ಯದಲ್ಲಿಯೇ ದೊಡ್ಡ ಸಮುದಾಯವಾಗಿದ್ದು, 37 ಲಿಂಗಾಯತ ಶಾಸಕರೊಂದಿಗೆ ಕರ್ನಾಟಕದಾದ್ಯಂತ ಭಾರೀ ಬೆಂಬಲ ಪಡೆದಿದೆ. ಈ ಹಿನ್ನೆಲೆಯಲ್ಲಿ ನಮ್ಮ ಸಮುದಾಯದ ಹೆಚ್ಚಿನ ಮಂದಿಗೆ ಸಚಿವ ಸ್ಥಾನ ನೀಡಬೇಕೆಂದು ಯುವ ಘಟಕ ಒತ್ತಾಯಿಸಿದೆ.

ಈ ಕುರಿತು ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಷ್ಟ್ರೀಯ ಯುವ ಘಟಕದ ಅಧ್ಯಕ್ಷ ವೆಂಕಟರೆಡ್ಡಿ ಡಿ.ಪಾಟೀಲ, "ಹಿಂದಿನ ಕ್ಯಾಬಿನೆಟ್‌ನಲ್ಲಿ ನಮ್ಮ ಸಮುದಾಯದ ಏಳು ಮಂತ್ರಿಗಳು ಸಾರ್ವಜನಿಕರಿಗೆ ತಮ್ಮ ಸೇವೆಯನ್ನು ನೀಡಿದ್ದಾರೆ. ಅವರ ಕೊಡುಗೆಗಳು ಅಭಿವೃದ್ಧಿ, ಪರಿಸರ ರಕ್ಷಣೆ, ದುರ್ಬಲರ ಸಬಲೀಕರಣ ಮತ್ತು ಕರ್ನಾಟಕದ ಆರ್ಥಿಕತೆಯನ್ನು ಬಲಪಡಿಸುವಲ್ಲಿ ನಿರ್ಣಾಯಕವಾಗಿದ್ದವು.

ಇದೇ ಮಾದರಿಯಲ್ಲಿ ಹೊಸ ಕ್ಯಾಬಿನೆಟ್‌ಗೆ ನಮ್ಮ ನಿರೀಕ್ಷೆಗಳು, ನಮ್ಮ ಸಮುದಾಯದ ಭಾರೀ ಕೊಡುಗೆ ಮತ್ತು ಸರ್ಕಾರವನ್ನು ರಚಿಸಲು ಮತ್ತು ಬೆಂಬಲಿಸಲು ಭಾರೀ ಬೆಂಬಲ ನೀಡಿದ ರಾಜ್ಯದ ಅತಿದೊಡ್ಡ ಸಮುದಾಯವಾಗಿರುವುದರಿಂದ, ನಾವು ಹೊಸ ಕರ್ನಾಟಕ ಕ್ಯಾಬಿನೆಟ್‌ನಲ್ಲಿ ಕನಿಷ್ಠ ಎಂಟು ಸ್ಥಾನಗಳನ್ನು ಒಳಗೊಂಡಂತೆ ಹೆಚ್ಚು ಬಲವಾದ ಪ್ರಾತಿನಿಧ್ಯವನ್ನು ನಿರೀಕ್ಷಿಸುತ್ತೇವೆ.

# ತೀತಾ ಜಲಾಶಯದಲ್ಲಿ ಸಾಹಸ ಕ್ರೀಡೆಗಳಿಗೆ ಚಾಲನೆ: ಜಿಲ್ಲಾಧಿಕಾರಿ

ತುಮಕೂರು

ತುಮಕೂರು ಜಿಲ್ಲಾ ಪ್ರವಾಸೋದ್ಯಮ ಇಲಾಖೆ ವತಿಯಿಂದ ಕೊರಟಗೆರೆ ತಾಲ್ಲೂಕಿನ ತೀತಾ ಜಲಾಶಯದಲ್ಲಿ ಜಲಕ್ರೀಡೆ ಹಾಗೂ 20 ವಿಧದ ಸಾಹಸ ಕ್ರೀಡೆಗಳ ಆಯೋಜನೆಗಾಗಿ ಇ–ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಈ ಯೋಜನೆಗೆ ಸಂಬಂಧಿಸಿದಂತೆ ಜೆಟ್ ಸ್ಕೀ ರೈಡ್, ಸ್ಪೀಡ್ ಬೋಟ್, ಪೆಡಲ್ ಬೋಟ್, ಕಯಾಕಿಂಗ್, ಬನಾನಾ ಬೋಟ್, ಸ್ಟ್ಯಾಂಡ್‌ಅಪ್ ಪೆಡಲ್ ಬೋಟ್ ಸೇರಿದಂತೆ ವಿವಿಧ ಜಲಕ್ರೀಡೆಗಳೊಂದಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಕ್ರಮ ವಹಿಸಲಾಗುತ್ತಿದೆ.

ಮುಂದಿನ ತಿಂಗಳ 10ನೇ ತಾರೀಖಿನೊಳಗೆ ಎಲ್ಲಾ ಸಿದ್ಧತೆಗಳನ್ನು ಪೂರ್ಣಗೊಳಿಸಿ ಜಲಕ್ರೀಡೆಗಳಿಗೆ ಅಧಿಕೃತ ಚಾಲನೆ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಈ ಮಹತ್ವದ ಯೋಜನೆಯ ಉದ್ಘಾಟನೆಯನ್ನು ಗೃಹ ಸಚಿವರು ಹಾಗೂ ತುಮಕೂರು ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ನೆರವೇರಿಸಲು ದಿನಾಂಕ ನಿಗದಿಪಡಿಸಲಾಗುವುದು ಎಂದು ಅವರು ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಸಂಜೀವಕುಮಾರ್ ಉಪಸ್ಥಿತರಿದ್ದರು.

# ಸೌಲಭ್ಯಗಳ ವಿತರಣೆಯಲ್ಲಿ ವಿಳಂಬ ಸಲ್ಲ: ಡಾ.ಎಂ.ಆರ್.ರವಿ

ಕೋಲಾರ

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಜನಗಳಿಗೆ ಸೌಲಭ್ಯಗಳ ವಿತರಣೆಯಲ್ಲಿ ವಿಳಂಬ ಸಹಿಸುವ ಪ್ರಶ್ನೆ ಇಲ್ಲ ಎಂದು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜಾಗೃತಿ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತಲುಪಿಸುವಲ್ಲಿ ಯಾವುದೇ ನಿರ್ಲಕ್ಷ್ಯ ವಹಿಸಬಾರದು ಎಂದು ಅಧಿಕಾರಿಗಳಿಗೆ ಖಡಕ್ ಆದೇಶ ನೀಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಅಭಿವೃದ್ಧಿ ಕಾರ್ಯಕ್ರಮಗಳು, ವಿದ್ಯಾರ್ಥಿವೇತನ, ಜಮೀನು ಮಂಜೂರಾತಿ ಮತ್ತು ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾಗಿರುವ



ಪ್ರಕರಣಗಳ ಸ್ಥಿತಿಗತಿಯ ಕುರಿತು ಸುದೀರ್ಘವಾಗಿ ಚರ್ಚಿಸಿದರು.

ಸಮಾಜ ಕಲ್ಯಾಣ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳಲ್ಲಿ ಬಾಕಿ ಉಳಿದಿರುವ ವಿದ್ಯಾರ್ಥಿವೇತನದ ಮೊತ್ತವನ್ನು ವಿಳಂಬವಿಲ್ಲದೆ ವಿದ್ಯಾರ್ಥಿಗಳಿಗೆ ತಲುಪಿಸಬೇಕು ಎಂದು ತಹಸೀಲ್ದಾರ್‌ಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಪರಿಶಿಷ್ಟ ಸಮುದಾಯಕ್ಕೆ ಸಂಬಂಧಿಸಿದ ಜಮೀನು ಮಂಜೂರಾತಿ ಮತ್ತು ಭೂಮಿ ಹಕ್ಕುಗಳ ಪ್ರಕರಣಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥಪಡಿಸಿ, ಅರ್ಹರಿಗೆ ಭೂಮಿಯ ಹಕ್ಕು ದೊರಕಿಸಿಕೊಡಬೇಕೆಂದು ತಿಳಿಸಲಾಯಿತು.

ಅಕ್ರಮ ಮದ್ಯಮಾರಾಟಕ್ಕೆ ಸಂಬಂಧಿಸಿದರಂತೆ ಜಿಲ್ಲೆಯ ಹೊರವಲಯದ ಕೆಲ ಪ್ರದೇಶಗಳಲ್ಲಿ ದಿನಸಿ ಹಾಗೂ ಇತರೆ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡಲಾಗುತ್ತಿರುವುದಾಗಿ ಸಮಿತಿ ಸದಸ್ಯರು ತಿಳಿಸಿದರು. ಇದಕ್ಕೆ ಉತ್ತರಿಸಿದ ಅಬಕಾರಿ ಅಧಿಕಾರಿಗಳು, ಮಾರಾಟವಾಗುತ್ತಿರುವುದು ಅಕ್ರಮ ಮದ್ಯವಲ್ಲ. ನಮ್ಮ ಸಿಬ್ಬಂದಿ ಅಗಿಂದಾಗ್ಗೆ ಹೋಗಿ ಪರಿಶೀಲಿಸುತ್ತಿದ್ದಾರೆ ಎಂದರು

ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾಗಿರುವ ಪ್ರಕರಣಗಳ ತನಿಖೆಯನ್ನು ತ್ವರಿತಗೊಳಿಸಬೇಕು. ನ್ಯಾಯಾಲಯದಲ್ಲಿರುವ ಪ್ರಕರಣಗಳನ್ನು ಗಮನದಲ್ಲಿಟ್ಟುಕೊಂಡು ಸಂತ್ರಸ್ತರಿಗೆ ನೀಡಬೇಕಾದ ಪರಿಹಾರ ಧನವನ್ನು ಕಾಲಮಿತಿಯೊಳಗೆ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ಪೊಲೀಸ್ ಇಲಾಖೆಗೆ ಸೂಚಿಸಲಾಯಿತು.

ಜಾತಿ ಪ್ರಮಾಣಪತ್ರಗಳನ್ನು ವಿತರಿಸುವಾಗ ಎಚ್ಚರಿಕೆ ವಹಿಸಬೇಕು. ಯಾವುದೇ ಅಕ್ರಮಗಳು ನಡೆಯದಂತೆ ಸಮಾಜ ಕಲ್ಯಾಣ ಇಲಾಖೆಯ ಮೂಲಕ ಸೂಕ್ತ ಪರಿಶೀಲನೆ ನಡೆಸಬೇಕು ಎಂದರು.

"ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಸೌಲಭ್ಯಗಳು ತಲುಪುವಂತಾಗಬೇಕು. ಇಡೀ ಜಿಲ್ಲಾಡಳಿತ ಒಂದು ಬಲಿಷ್ಠ ತಂಡವಾಗಿ ಕಾರ್ಯನಿರ್ವಹಿಸುವ ಮೂಲಕ ಈ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಬೇಕು," ಎಂದು ಕರೆ ನೀಡಿದರು.

ಹೊಸದಾಗಿ ನೇಮಕಗೊಂಡ ಜಾಗೃತಿ ಸಮಿತಿ ಸದಸ್ಯರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ ಬಾಗೇವಾಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ, ಜಿಲ್ಲಾ ಅರಣ್ಯ ಸಂರಕ್ಷಣಾ ಅಧಿಕಾರಿ ಸರಿನಾ ಸಿಕ್ಕಲಿಗರ್, ಎಲ್ಲಾ ತಾಲ್ಲೂಕಿನ ತಹಸೀಲ್ದಾರ್‌ಗಳು, ಸಮಿತಿ ಸದಸ್ಯರು ಮತ್ತು ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್

ಮುಂಬೈ

ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ ಲಿಮಿಟೆಡ್ ಮೇ 2026ರಲ್ಲಿ ದೇಶೀಯ ಹಾಗೂ ಅಂತರರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಒಟ್ಟು 59,790 ವಾಹನಗಳ ಮಾರಾಟ ದಾಖಲಿಸಿದ್ದು, ಕಳೆದ ವರ್ಷದ ಇದೇ ಅವಧಿಯ 42,040 ವಾಹನಗಳ ಮಾರಾಟದೊಂದಿಗೆ ಹೋಲಿಸಿದರೆ ಶೇ. 42ರಷ್ಟು ಬೆಳವಣಿಗೆ ಸಾಧಿಸಿದೆ.

ಈ ಅಂಕಿಅಂಶಗಳಲ್ಲಿ ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ ಲಿಮಿಟೆಡ್‌ನ ಅಂಗಸಂಸ್ಥೆಯಾದ ಟಾಟಾ ಪ್ಯಾಸೆಂಜರ್ ಎಲೆಕ್ಟ್ರಿಕ್ ಮೊಬಿಲಿಟಿ ಲಿಮಿಟೆಡ್‌ನ ಮಾರಾಟವೂ ಸೇರಿದೆ.

ಟಾಟಾ ಸಮೂಹದ ಅಂಗಸಂಸ್ಥೆಯಾಗಿರುವ ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ ಲಿಮಿಟೆಡ್ ದೇಶದ ಪ್ರಮುಖ ವಾಹನ ತಯಾರಿಕಾ ಸಂಸ್ಥೆಗಳಲ್ಲಿ ಒಂದಾಗಿದೆ. ಆಕರ್ಷಕ ವಿನ್ಯಾಸ, ಸುರಕ್ಷತೆ ಮತ್ತು ಕಾರ್ಯಕ್ಷಮತೆಯೊಂದಿಗೆ ಕಾರುಗಳು ಹಾಗೂ ಕ್ರೀಡಾ ಬಳಕೆಯ ವಾಹನಗಳ ವಿಶಾಲ ಶ್ರೇಣಿಯನ್ನು ಸಂಸ್ಥೆ ಮಾರುಕಟ್ಟೆಗೆ ಒದಗಿಸುತ್ತಿದೆ.

ಸಂಸ್ಥೆಯು ಬಹು ಇಂಧನ ತಂತ್ರಜ್ಞಾನ, ಸುಧಾರಿತ ಸಂಪರ್ಕ ವ್ಯವಸ್ಥೆಗಳು ಮತ್ತು ಬುದ್ಧಿವಂತ ವೈಯಕ್ತಿಕ ಸಂಚಾರ ಪರಿಹಾರಗಳ ಅಭಿವೃದ್ಧಿಗೆ ಒತ್ತು ನೀಡುತ್ತಿದೆ. ಭಾರತದಲ್ಲಿ ವಿದ್ಯುತ್ ವಾಹನ ಕ್ರಾಂತಿಗೆ ಮುಂಚೂಣಿಯಲ್ಲಿರುವ ಸಂಸ್ಥೆಯು ಸುಸ್ಥಿರ ಸಂಚಾರ ವ್ಯವಸ್ಥೆಗಳ ಅಭಿವೃದ್ಧಿಗೆ ಪ್ರಮುಖ ಕೊಡುಗೆ ನೀಡುತ್ತಿದೆ. ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಮಂಡಳಿಯ ಅನುಮೋದಿತ ಯೋಜನೆಯಂತೆ, 2025ರ ಅಕ್ಟೋಬರ್ 13ರಿಂದ ಕಂಪನಿಯ ಹೆಸರನ್ನು ಟಾಟಾ ಮೋಟಾರ್ಸ್ ಲಿಮಿಟೆಡ್‌ನಿಂದ ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ ಲಿಮಿಟೆಡ್ ಎಂದು ಬದಲಾಯಿಸಲಾಗಿದೆ.

# ಫೋರ್ಟಿಫೈಡ್ ಅಕ್ಕಿ ಬಿಡುಗಡೆ ಮಾಡಿದ ಪಂಚಾಮೃತ ಇಂಡಸ್ಟ್ರೀಸ್

ಬೆಂಗಳೂರು

ಪಂಚಾಮೃತ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯು ಟೆಕ್ನೋಸರ್ವ್‌ನಿಂದ ಚಾಲಿತ ಮಿಲ್ಲರ್ಸ್ ಫಾರ್ ನ್ಯೂಟ್ರಿಷನ್ ಸಹಯೋಗದಲ್ಲಿ, 9 ಅಗತ್ಯ ವಿಟಮಿನ್‌ಗಳು ಮತ್ತು ಖನಿಜಾಂಶಗಳನ್ನು ಒಳಗೊಂಡಿರುವ 'ಪಂಚಾಮೃತ ಡಿಲಕ್ಸ್ ಫೋರ್ಟಿಫೈಡ್ ಅಕ್ಕಿ'ಯನ್ನು ಬೆಂಗಳೂರಿನಲ್ಲಿ ನಡೆದ ವಿಶೇಷ ಕೈಗಾರಿಕಾ ಕಾರ್ಯಾಗಾರದಲ್ಲಿ ಬಿಡುಗಡೆ ಮಾಡಿತು.

"ಕರ್ನಾಟಕದಲ್ಲಿ ಫೋರ್ಟಿಫೈಡ್ ಅಕ್ಕಿಯ ಮಾರುಕಟ್ಟೆ ಸಾಮರ್ಥ್ಯ ಅನಾವರಣ" ವಿಷಯದಡಿ ಆಯೋಜಿಸಲಾದ ಕಾರ್ಯಾಗಾರದಲ್ಲಿ ಪೌಷ್ಟಿಕತೆ, ಆರೋಗ್ಯ ಹಾಗೂ ಆಹಾರ ಭದ್ರತೆ ಕುರಿತ ಮಹತ್ವದ ಚರ್ಚೆಗಳು ನಡೆದವು.

ಹೊಸ ಫೋರ್ಟಿಫೈಡ್ ಅಕ್ಕಿಯಲ್ಲಿ ವಿಟಮಿನ್ ಎ, ಬಿ–1, ಬಿ–2, ಬಿ–3, ಬಿ–6 ಮತ್ತು ಬಿ–12 ಸೇರಿದಂತೆ ಆರು ಪ್ರಮುಖ ವಿಟಮಿನ್‌ಗಳು ಹಾಗೂ ಫೋಲಿಕ್ ಆಮ್ಲ, ಜಿಂಕ್ ಮತ್ತು ಕಬ್ಬಿಣಾಂಶ ಸೇರಿದಂತೆ




ಮೂರು ಅಗತ್ಯ ಖನಿಜಾಂಶಗಳನ್ನು ಸೇರಿಸಲಾಗಿದೆ. ಜನರಲ್ಲಿ ಕಂಡುಬರುವ ಸೂಕ್ಷ್ಮ ಪೋಷಕಾಂಶಗಳ ಕೊರತೆಯನ್ನು ತಗ್ಗಿಸುವ ಉದ್ದೇಶದಿಂದ ಈ ಉತ್ಪನ್ನವನ್ನು ಅಭಿವೃದ್ಧಿಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿವಿಧ ಸರ್ಕಾರಿ ಸಂಸ್ಥೆಗಳ ಪ್ರತಿನಿಧಿಗಳು, ಪೌಷ್ಟಿಕ ತಜ್ಞರು, ಆರೋಗ್ಯ ವೃತ್ತಿಪರರು, ಆಹಾರ ಫೋರ್ಟಿಫಿಕೇಶನ್ ಕ್ಷೇತ್ರದ ಪರಿಣಿತರು, ಅಕ್ಕಿ ಮಿಲ್ಲರ್‌ಗಳು ಹಾಗೂ ಕೈಗಾರಿಕಾ ವಲಯದ ಹಿತಾಸಕ್ತಿದಾರರು ಭಾಗವಹಿಸಿದರು. ಭಾರತದಲ್ಲಿ ಅಡಗಿದ ಹಸಿವು ಎಂದು ಕರೆಯಲ್ಪಡುವ ಸೂಕ್ಷ್ಮ ಪೋಷಕಾಂಶಗಳ ಕೊರತೆಯನ್ನು ನಿವಾರಿಸುವಲ್ಲಿ ಫೋರ್ಟಿಫೈಡ್ ಆಹಾರಗಳ ಪಾತ್ರದ ಕುರಿತು ಅವರು ಅಭಿಪ್ರಾಯಗಳನ್ನು ಹಂಚಿಕೊಂಡರು.

ದಕ್ಷಿಣ ಭಾರತದಲ್ಲಿ ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವ ಪಂಚಾಮೃತ ಇಂಡಸ್ಟ್ರೀಸ್, ಸಾಂಪ್ರದಾಯಿಕ ಧಾನ್ಯ ವ್ಯಾಪಾರದಿಂದ ಪೌಷ್ಟಿಕತೆ ಆಧಾರಿತ ತ್ವರಿತ ಬಳಕೆ ಗ್ರಾಹಕ ಉತ್ಪನ್ನಗಳ ಸಂಸ್ಥೆಯಾಗಿ ರೂಪಾಂತರಗೊಂಡಿದೆ. ಆರೋಗ್ಯಕರ ಆಹಾರ ಉತ್ಪನ್ನಗಳು ಹಾಗೂ ಫೋರ್ಟಿಫೈಡ್ ಆಹಾರಗಳ ಅಭಿವೃದ್ಧಿಗೆ ಸಂಸ್ಥೆ ಹೆಚ್ಚಿನ ಆದ್ಯತೆ ನೀಡುತ್ತಿದೆ.

ಧಾರವಾಡದಲ್ಲಿರುವ ಸಂಸ್ಥೆಯ ಅತ್ಯಾಧುನಿಕ ಸಂಸ್ಕರಣಾ ಘಟಕವು ದಿನಕ್ಕೆ 300 ಟನ್‌ಗಿಂತ ಹೆಚ್ಚಿನ ಉತ್ಪಾದನಾ ಸಾಮರ್ಥ್ಯವನ್ನು ಹೊಂದಿದೆ. ಆಧುನಿಕ ಫೋರ್ಟಿಫಿಕೇಶನ್ ತಂತ್ರಜ್ಞಾನ ಮತ್ತು ಗುಣಮಟ್ಟದ ಮಾನದಂಡಗಳ ಮೂಲಕ ಪ್ರತಿಯೊಂದು ಕುಟುಂಬಕ್ಕೂ ಪೌಷ್ಟಿಕ ಆಹಾರ ತಲುಪಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ. ಪೌಷ್ಟಿಕಾಂಶಯುಕ್ತ ಆಹಾರಗಳ ಬಳಕೆಯನ್ನು ಉತ್ತೇಜಿಸುವ ಮೂಲಕ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕೈಗಾರಿಕೆ, ತಜ್ಞರು ಹಾಗೂ ವಿವಿಧ ಸಂಸ್ಥೆಗಳು ಒಗ್ಗೂಡಿ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ಕಾರ್ಯಕ್ರಮದಲ್ಲಿ ಒತ್ತಿ ಹೇಳಲಾಯಿತು.

# ನಗರ ಪಾಲಿಕೆಗಳ ಸಾರ್ವತ್ರಿಕ ಚುನಾವಣೆಗೆ ಸಕಲ ಸಿದ್ಧ: ಆಯೋಗ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ 5 ನಗರಪಾಲಿಕೆಗಳಿಗೆ ಘನ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ 2026 ನೇ ಜೂನ್ 30 ರೊಳಗಾಗಿ ಚುನಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿದ್ದು, ಈ ಸಂಬಂಧ ರಾಜ್ಯ ಚುನಾವಣಾ ಆಯೋಗವು ಸಕಲ ಸಿದ್ಧತೆಗಳನ್ನು ಕೈಗೊಂಡಿದೆ.

ಆಯೋಗದ ನಿರ್ದೇಶನದಂತೆ ಒಟ್ಟು 369 ವಾರ್ಡ್‌ಗಳಿಗೆ ಅಂತಿಮ ಮತದಾರರ ಪಟ್ಟಿಯನ್ನು ಈಗಾಗಲೇ 18.04.2026 ರಂದು ಪ್ರಕಟಿಸಲಾಗಿದೆ.

ರಾಜ್ಯದಲ್ಲಿ ಏಪ್ರಿಲ್ 16 ರಿಂದ ಮೇ 15 ರವರೆಗೆ ನಡೆಯಲಿರುವ ಜನಗಣತಿ ಕಾರ್ಯ, ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿ ಪರಿಷ್ಕರಣೆ ಮತ್ತು ಶೈಕ್ಷಣಿಕ ಪರೀಕ್ಷಾ ಕರ್ತವ್ಯಗಳಿಗೆ ಸಿಬ್ಬಂದಿಗಳನ್ನು ನಿಯೋಜಿಸಿರುವುದರಿಂದ, ಚುನಾವಣಾ ಕಾಲಮಿತಿಯನ್ನು 30.09.2026 ರವರೆಗೆ ವಿಸ್ತರಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಆಯೋಗಕ್ಕೆ ಕೋರಿದ್ದಾರೆ.

ಸರ್ಕಾರದ ಈ ಕೋರಿಕೆಯನ್ನು ಆಯೋಗವು ಘನ ಸರ್ವೋಚ್ಚ ನ್ಯಾಯಾಲಯದ ಗಮನಕ್ಕೆ ತಂದಿದೆ. ಆದರೆ, ಆಯೋಗವು ನ್ಯಾಯಾಲಯಕ್ಕೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ ಚುನಾವಣೆ ನಡೆಸಲು ಹೆಚ್ಚಿನ ಸಮಯಾವಕಾಶವನ್ನಾಗಲೀ ಅಥವಾ ಚುನಾವಣೆ ಮುಂದೂಡುವ ಬೇಡಿಕೆಯನ್ನಾಗಲೀ ಸಲ್ಲಿಸಿರುವುದಿಲ್ಲ ಎಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

# ಒಕ್ಲಿಯಿಂದ 'ಪ್ಲೇಯರ್ಸ್ ಕಲೆಕ್ಷನ್' ಅನಾವರಣ

ಬೆಂಗಳೂರು

ಜಾಗತಿಕ ಕ್ರೀಡಾ ತಾರೆಗಳಾದ ಕಿಲಿಯನ್ ಎಂಬಪ್ಪೆ ಮತ್ತು ಜೇಲನ್ ಬ್ರೌನ್ ಅವರನ್ನು ಒಳಗೊಂಡ 'ಪ್ಲೇಯರ್ಸ್ ಕಲೆಕ್ಷನ್' ಪ್ರಚಾರ ಅಭಿಯಾನವನ್ನು ಒಕ್ಲಿ ಅನಾವರಣಗೊಳಿಸಿದೆ.

ಒಂದು ಕಾಲದಲ್ಲಿ ಕ್ರೀಡಾಪಟುವಿನ ಗುರುತು ಅವನು ಧರಿಸುವ ಸಮವಸ್ತ್ರಕ್ಕೆ ಮಾತ್ರ ಸೀಮಿತವಾಗಿತ್ತು. ಆದರೆ ಇಂದಿನ ಕ್ರೀಡಾ ಸಂಸ್ಕೃತಿಯಲ್ಲಿ ಆಟ ಆರಂಭವಾಗುವ ಮುನ್ನವೇ ವ್ಯಕ್ತಿತ್ವ, ಶೈಲಿ ಮತ್ತು ಆತ್ಮವಿಶ್ವಾಸವು ಪ್ರಮುಖ ಪಾತ್ರ ವಹಿಸುತ್ತಿವೆ. ಈ ಬದಲಾವಣೆಯನ್ನು ಪ್ರತಿಬಿಂಬಿಸುವ ಉದ್ದೇಶದಿಂದ ಒಕ್ಲಿ ತನ್ನ ಹೊಸ 'ಪ್ಲೇಯರ್ಸ್ ಕಲೆಕ್ಷನ್' ಸರಣಿಯನ್ನು ಪರಿಚಯಿಸಿದೆ.

ಈ ಸಂಗ್ರಹದಲ್ಲಿ ಕಿಲಿಯನ್ ಎಂಬಪ್ಪೆ ಮತ್ತು ಜೇಲನ್ ಬ್ರೌನ್ ಅವರ ವೈಯಕ್ತಿಕ ಅಭಿರುಚಿ ಹಾಗೂ ವ್ಯಕ್ತಿತ್ವವನ್ನು ಪ್ರತಿಬಿಂಬಿಸುವ ವಿಶೇಷ ಸಿಗ್ನೇಚರ್ ಕಣ್ಣಿನ ಕನ್ನಡಕಗಳನ್ನು ವಿನ್ಯಾಸಗೊಳಿಸಲಾಗಿದೆ. ಕ್ರೀಡೆಯಲ್ಲಿ ಮಾತ್ರವಲ್ಲದೆ, ಕ್ರೀಡಾ ಸಂಸ್ಕೃತಿಯ ಬೆಳವಣಿಗೆ, ಸಮುದಾಯ ನಿರ್ಮಾಣ ಮತ್ತು ಹೊಸ ಮಾನದಂಡಗಳ ಸ್ಥಾಪನೆಯಲ್ಲಿ ಈ ಇಬ್ಬರು ಜಾಗತಿಕ ತಾರೆಗಳು ಮಹತ್ವದ ಪಾತ್ರ ವಹಿಸಿದ್ದಾರೆ.

ಜೇಲನ್ ಬ್ರೌನ್ ಅವರ ಸಿಗ್ನೇಚರ್ ಕನ್ನಡಕಗಳ ಸಂಗ್ರಹವು ವಿಶಿಷ್ಟವಾದ 'ಕೋಕೋ ಬ್ರೌನ್' ಬಣ್ಣದ ವಿನ್ಯಾಸವನ್ನು ಹೊಂದಿದ್ದು, ಅವರ ವೈಯಕ್ತಿಕ ಗುರುತನ್ನು ಪ್ರತಿಬಿಂಬಿಸುತ್ತದೆ.

# ದಾಖಲಾತಿಗೆ ತಾತ್ಕಾಲಿಕ ನಿರ್ಬಂಧ

ತಿಪಟೂರು

ವಿದ್ಯಾರ್ಥಿಗಳ ಪೋಷಕರಿಂದ ಬಂದ ದೂರಿನ ಆಧಾರದ ಮೇಲೆ ತಿಪಟೂರಿನ ಕಲ್ಪತರು ಸೆಂಟ್ರಲ್ ಸ್ಕೂಲ್‌ಗೆ ಕ್ಷೇತ್ರ ಶಿಕ್ಷಣಾಧಿಕಾರಿ ತಾರಾಮಣಿ ಭೇಟಿ ನೀಡಿ ಪರಿಶೀಲನೆ ನಡೆಸಿ, 2026 27ನೇ ಸಾಲಿಗೆ ಹೊಸ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಿದ್ದಾರೆ.

ಪರಿಶೀಲನೆಯ ವೇಳೆ ಕೆಲವು ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡಲಾಗಿಲ್ಲ ಎಂಬುದು ದೃಢಪಟ್ಟಿದ್ದು, ತಕ್ಷಣವೇ ಎಲ್ಲಾ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ವಿತರಿಸಿ, ಅದರ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ವರದಿ ಸಲ್ಲಿಸಲು ಶಾಲಾ ಆಡಳಿತಕ್ಕೆ ಸೂಚಿಸಲಾಗಿದೆ.

ಇದಲ್ಲದೆ, 2025–26ನೇ ಸಾಲಿನಲ್ಲಿ ಸರ್ಕಾರದ ನಿಯಮಗಳಿಗೆ ವಿರುದ್ಧವಾಗಿ ಎರಡು ಪ್ರತ್ಯೇಕ ರಶೀದಿಗಳ ಮೂಲಕ ವಸೂಲಿ ಮಾಡಿರುವ ಶುಲ್ಕದ ವಿವರಗಳನ್ನು ಸಲ್ಲಿಸುವಂತೆ ಕೂಡ ಆದೇಶಿಸಲಾಗಿದೆ. ಶಾಲೆಯ ಸೂಚನಾ ಫಲಕದಲ್ಲಿ ಪ್ರಕಟಿಸಿರುವ 2026–27ನೇ ಸಾಲಿನ ಶುಲ್ಕದ ಬಗ್ಗೆ ಪೂರ್ವಾನುಮತಿ ಪಡೆಯದೇ ಪ್ರಕಟಿಸಿರುವ ಹಿನ್ನೆಲೆಯಲ್ಲಿ, ಆ ಶುಲ್ಕದ ಕುರಿತು ಸಂಪೂರ್ಣ ಆಡಿಟ್ ವರದಿ ನೀಡುವಂತೆ ಕೇಳಲಾಗಿದೆ.

ಶಾಲಾ ಶುಲ್ಕದ ಪರಿಶೀಲನೆ ಪೂರ್ಣಗೊಳ್ಳುವವರೆಗೆ ಯಾವುದೇ ರೀತಿಯ ಹೊಸ ದಾಖಲಾತಿಗಳನ್ನು ಮಾಡಿಕೊಳ್ಳಬಾರದು ಎಂದು ಸ್ಪಷ್ಟ ಸೂಚನೆ ನೀಡಲಾಗಿದೆ. ಈ ವಿಷಯವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಪಟೂರು ಉಪವಿಭಾಗಾಧಿಕಾರಿಗಳ ಗಮನಕ್ಕೆ ತಂದಿದ್ದು, ಪೋಷಕರಿಗೂ ಮಾಹಿತಿಯನ್ನು ಹಂಚಲಾಗಿದೆ.

# ತಿಪಟೂರಿನಲ್ಲಿ ಭವ್ಯ ಬಸವೇಶ್ವರ ಜಯಂತ್ಯೋತ್ಸವ ಆಚರಣೆ

ತಿಪಟೂರು

ತಾಲ್ಲೂಕಿನ ವೀರಶೈವ ಲಿಂಗಾಯತ ಯುವ ವೇದಿಕೆ ಹಾಗೂ ವೀರಶೈವ ಲಿಂಗಾಯತ ಸಂಘಟನೆಯ ವತಿಯಿಂದ ಬಸವೇಶ್ವರ ಜಯಂತ್ಯೋತ್ಸವವನ್ನು ಭಕ್ತಿಭಾವದಿಂದ ಆಚರಿಸಲಾಯಿತು. ನಗರದ ಕಲ್ಲೇಶ್ವರ ದೇವಾಲಯದಿಂದ ಗುರುಕುಲಾನಂದಾಶ್ರಮ ಕಲ್ಯಾಣ ಮಂಟಪದವರೆಗೆ ಭವ್ಯ ಮೆರವಣಿಗೆ ನಡೆಯಿತು.

ಮೆರವಣಿಗೆಗೆ ಕೆರೆಗೋಡಿ ರಂಗಾಪುರದ ಗುರುಪರದೇಶಿಕೇಂದ್ರ ಸ್ವಾಮೀಜಿ, ಗುರುಕುಲಾನಂದಾಶ್ರಮದ ಇಮ್ಮಡಿ ಕರಿಬಸವ ದೇಶಿಕೇಂದ್ರ ಸ್ವಾಮೀಜಿ ಹಾಗೂ ನೊಣವಿನಕೆರೆ ಕಾಡಸಿದ್ದೇಶ್ವರ ಮಠದ ಅಭಿನವ ಕಾಡಸಿದ್ದೇಶ್ವರ ಸ್ವಾಮೀಜಿ ಚಾಲನೆ ನೀಡಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಬಸವಣ್ಣನವರ ಭಾವಚಿತ್ರದೊಂದಿಗೆ ನಂದಿಧ್ವಜ, ಬಸವನಗಾರಿ, ವೀರಗಾಸೆ ಕುಣಿತ, ಕಾಳಿ ಕುಣಿತ, ಹೆಣ್ಣುಮಕ್ಕಳ ವೀರಗಾಸೆ ಹಾಗೂ ಲಿಂಗದವೀರರ ಕುಣಿತದೊಂದಿಗೆ ಸಾವಿರಾರು ಬಸವ ಅನುಯಾಯಿಗಳು ಭಾಗವಹಿಸಿ ಮೆರವಣಿಗೆಯನ್ನು ಕಂಗೊಳಿಸಿದರು. ಕೋಡಿ ಸರ್ಕಲ್, ದೊಡ್ಡಪೇಟೆ ಮತ್ತು ಬಿ.ಎಚ್. ರಸ್ತೆ ಮೂಲಕ ಮೆರವಣಿಗೆ ಸಾಗಿತು.

ವೇದಿಕೆ ಕಾರ್ಯಕ್ರಮದಲ್ಲಿ ಷಡಕ್ಷರಮಠದ ರುದ್ರಮುನಿ ಸ್ವಾಮೀಜಿ ಮಾತನಾಡಿ, 12ನೇ ಶತಮಾನದ ಮಹಾನ್ ಸಮಾಜ ಸುಧಾರಕ ಬಸವಣ್ಣ ಅವರ ಆದರ್ಶಗಳು ಇಂದಿಗೂ ದಾರಿದೀಪವಾಗಿವೆ. ಯುವಕರು ಒಗ್ಗೂಡಿ ಬಸವ ಜಯಂತಿ ಆಚರಿಸುತ್ತಿರುವುದು ಸಂತೋಷದ ವಿಷಯ ಎಂದರು.

ರಾಜ್ಯ ಬಿಜೆಪಿ ವಕ್ತಾರ ಎಚ್. ಎನ್. ಚಂದ್ರಶೇಖರ್ ಮಾತನಾಡಿ, ಬಸವಣ್ಣನವರು ಮಾತಿನಲ್ಲಿ ಮಾತ್ರವಲ್ಲ, ಕಾರ್ಯದಲ್ಲಿ ತೋರಿಸಿದ ಮಹಾನ್ ವ್ಯಕ್ತಿ. ಮಹಿಳಾ ಸಮಾನತೆ, ಅಸ್ಪೃಶ್ಯತೆ ನಿರ್ಮೂಲನೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅವರು ಅನುಭವ ಮಂಟಪದ ಮೂಲಕ ಜಾರಿಗೆ ತಂದಿದ್ದರು ಎಂದು ಹೇಳಿದರು.

ಜೆಡಿಎಸ್ ಮುಖಂಡ ಕೆ.ಟಿ. ಶಾಂತಕುಮಾರ್ ಮಾತನಾಡಿ, ಸಮಸಮಾಜ ನಿರ್ಮಾಣಕ್ಕೆ ಬಸವಣ್ಣನವರ ಕ್ರಾಂತಿ ಮಾದರಿಯಾಗಿದೆ. ವಚನಗಳ ಮೂಲಕ ಸಮಾಜದಲ್ಲಿ ಬದಲಾವಣೆ ತಂದ ಅವರು, ಶೋಷಣೆ ಮತ್ತು ಮೌಢ್ಯತೆಗಳ ವಿರುದ್ಧ ಹೋರಾಟ ನಡೆಸಿದರು ಎಂದು ಹೇಳಿದರು.

ವೀರಶೈವ ಲಿಂಗಾಯತ ಸಂಘಟನೆಯ ತಾಲ್ಲೂಕು ಅಧ್ಯಕ್ಷ ರೇಣುಕಾರಾಧ್ಯ ಪ್ರಾಸ್ತಾವಿಕವಾಗಿ ಮಾತನಾಡಿ, ಬಸವಣ್ಣನವರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಪಾವನವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಡಾ. ಶ್ರೀಧರ್, ಡಾ. ವಿವೇಚನ್, ನಿವೃತ್ತ ಪೊಲೀಸ್ ಅಧಿಕಾರಿ ಲೋಕೇಶ್ವರ್, ಸಿ.ಬಿ. ಶಶಿಧರ್, ನ್ಯಾಕೇನಹಳ್ಳಿ ಸುರೇಶ್, ನವಿಲೆ ಪರಮೇಶ್, ಮಡೆನೂರು ಕಾಂತರಾಜು, ಪ್ರಸನ್ನಕುಮಾರ್ ಸೇರಿದಂತೆ ಹಲವಾರು ಮುಖಂಡರು ಹಾಗೂ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಯೋಗೇಶ್‌ಗೌಡ ಕೊಲೆ ಪ್ರಕರಣ: ಸಿಬಿಐಗೆ ಹೈಕೋರ್ಟ್ ನೋಟೀಸ್

ಬೆಂಗಳೂರು

ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ವಿಶೇಷ ನ್ಯಾಯಾಲಯವು ವಿಧಿಸಿರುವ ಜೀವಾವಧಿ ಶಿಕ್ಷೆ ಬದಿಗೆ ಸರಿಸುವಂತೆ ಕೋರಿ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ಮತ್ತು ಚಂದ್ರಶೇಖರ್ ಇಂಡಿ ಸಲ್ಲಿಸಿರುವ ಕ್ರಿಮಿನಲ್ ಮೇಲ್ಮನವಿಗಳ ಸಂಬಂಧ ಕೇಂದ್ರೀಯ ತನಿಖಾ ದಳಕ್ಕೆ (ಸಿಬಿಐ) ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.

ಪ್ರಕರಣದಲ್ಲಿ ಅಪರಾಧಿಗಳಾಗಿರುವ ವಿನಯ್ ಕುಲಕರ್ಣಿ ಮತ್ತು ಚಂದ್ರಶೇಖರ್ ಇಂಡಿ ಅಲಿಯಾಸ್ ಚಂದು ಮಾಮ ಸಲ್ಲಿಸಿರುವ ಕ್ರಿಮಿನಲ್ ಮೇಲ್ಮನವಿಗಳ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಮೊಹಮ್ಮದ್ ನವಾಜ್ ಮತ್ತು ಟಿ ವೆಂಟಕೇಶ್ ನಾಯಕ್ ಅವರ ವಿಭಾಗೀಯ ಪೀಠ ನಡೆಸಿತು.

ವಿನಯ್ ಕುಲಕರ್ಣಿ ಪರವಾಗಿ ಹಾಜರಾಗಿದ್ದ ಹಿರಿಯ ವಕೀಲ ಸಿ ವಿ ನಾಗೇಶ್ ಅವರು "ಯಾವುದೇ ಸಾಕ್ಷಿ ಇಲ್ಲದಿದ್ದರೂ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ವಿಚಾರಣೆಯ ಹಂತದಲ್ಲಿ ವಿನಯ್ ಮತ್ತು ಚಂದ್ರಶೇಖರ್ ಜಾಮೀನಿನ ಮೇಲೆ ಹೊರಗಿದ್ದರು. ಮೆರಿಟ್ ಆಧರಿಸಿ ಆರೋಪಿಗಳಿಗೆ ಸುಪ್ರೀಂ ಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ನ್ಯಾಯದಾನದಲ್ಲಿ ಹಸ್ತಕ್ಷೇಪ ಮಾಡಿದ್ದರೆ ಎಂದು ಕೆಲಕಾಲ ಆರೋಪಿಗಳ ಜಾಮೀನು ರದ್ದತಿ ಮಾಡಿ, ಜೈಲಿಗೆ ಕಳುಹಿಸಲಾಗಿತ್ತು. ಆನಂತರ ಮತ್ತೆ ನ್ಯಾಯಾಲಯವು ಜಾಮೀನು ನೀಡಲಾಗಿತ್ತು. ಏಳು ಪ್ರತ್ಯಕ್ಷದರ್ಶಿಗಳು, ಇತರೆಲ್ಲಾ ಪ್ರಾಸಿಕ್ಯೂಷನ್ ಸಾಕ್ಷಿಗಳು ಪ್ರತಿಕೂಲವಾಗಿವೆ. ವಿಚಾರಣೆಗೆ ಪರಿಗಣಿಸಿ, ದಾಖಲೆ ಸಲ್ಲಿಸಲು ನಿರ್ದೇಶಿಸಬೇಕು" ಎಂದು ಕೋರಿದರು.

ಚಂದ್ರಶೇಖರ್ ಇಂಡಿ ಪರ ಹಿರಿಯ ವಕೀಲ ಎಂ ನಾಗಮುತ್ತು ಅವರು "ಪಿತೂರಿ ಆರೋಪಕ್ಕೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಶಿಕ್ಷೆ ಅಮಾನತು ಮಾಡಬೇಕು ಎಂದು ಕೋರುತ್ತಿದ್ದೇವೆ. 16ನೇ ಆರೋಪಿಯಾದ ಚಂದ್ರಶೇಖರ್ ವಿರುದ್ಧ ಯಾವುದೇ ಸಾಕ್ಷಿಗಳಿಲ್ಲ. ಅಪ್ರೂವರ್ ಆಗಿದ್ದ ವ್ಯಕ್ತಿ ಪ್ರತಿಕೂಲ ಸಾಕ್ಷಿಯಾಗಿ ಬದಲಾಗಿದ್ದಾರೆ" ಎಂದರು.

ಆಗ ಪೀಠ "ಮೆರಿಟ್ ಮೇಲೆ ಈಗ ವಿಚಾರಣೆ ನಡೆಸುವುದಿಲ್ಲ" ಎಂದಿತು. ಅಲ್ಲದೇ, ಸಿಬಿಐಗೆ ನೋಟಿಸ್ ಜಾರಿಗೊಳಿಸಿತು. ಈ ಹಂತದಲ್ಲಿ ಸಿ.ವಿ.ನಾಗೇಶ್ ಅವರು ರಜಾಕಾಲದ ಪೀಠದ ಮುಂದೆ ಅರ್ಜಿ ವಿಚಾರಣೆ ಕೋರುವ ಸ್ವಾತಂತ್ರ್ಯ ನೀಡಬೇಕು ಎಂಬ ಮನವಿಯನ್ನೂ ನ್ಯಾಯಾಲಯ ಪುರಸ್ಕರಿಸಿತು. ಇದಕ್ಕೆ ಆಕ್ಷೇಪಿಸಿದ ಸಿಬಿಐ ಪರ ವಕೀಲ ರಾಹುಲ್ ಕೃಷ್ಣಾರೆಡ್ಡಿ ಅವರು "ವಿಚಾರಣಾಧೀನ ನ್ಯಾಯಾಲಯದ ತೀರ್ಪು 680 ಪುಟಗಳಿವೆ. ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ಬೇಕಾಗುತ್ತದೆ. ಹೀಗಾಗಿ, ತಮ್ಮ ಆಕ್ಷೇಪಣೆಯನ್ನು ದಾಖಲಿಸಬೇಕು" ಎಂದು ಕೋರಿದರು. ಇದನ್ನೂ ನ್ಯಾಯಾಲಯವು ಆದೇಶದಲ್ಲಿ ದಾಖಲಿಸಿ, ವಿಚಾರಣೆ ಮುಂದೂಡಿತು.

ಮಧ್ಯಂತರ ಪರಿಹಾರದ ಭಾಗವಾಗಿ ವಿಚಾರಣಾಧೀನ ನ್ಯಾಯಾಲಯ ವಿಧಿಸಿರುವ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿ, ಜಾಮೀನು ಮಂಜೂರು ಮಾಡಬೇಕು ಎಂದು ವಿನಯ್ ಕುಲಕರ್ಣಿ ಹಾಗೂ ಚಂದ್ರಶೇಖರ್ ಇಂಡಿ ಕೋರಿದ್ದಾರೆ.

# ಉಗ್ರರ ಕರಿನೆರಳು

ಬೆಂಗಳೂರು

ಈ ಘಟನೆ ನಡೆದ 90 ನಿಮಿಷಗಳ ನಂತರ ಅನ್ಸಾರಿಯನ್ನು ಬಂಧಿಸಲಾಯಿತು. ಪೊಲೀಸರು ಅವನನ್ನು ಪತ್ತೆಹಚ್ಚಲು ಪ್ರದೇಶದ ಸಿಸಿಟಿವಿ ದೃಶ್ಯಾವಳಿಗಳನ್ನು ವೀಕ್ಷಿಸಿ ಕಾರ್ಯಾಚರಣೆ ನಡೆಸಿದರು. ಈ ಪ್ರಕರಣವನ್ನು ಎನ್‌ಐಎ ತನಿಖೆಗೆ ಒಪ್ಪಿಸುವುದಾಗಿ ಮುಖ್ಯಮಮತ್ರಿ ದೇವೇಂದ್ರ ಫಡ್ನವೀಸ್ ಹೇಳಿದ್ದಾರೆ.

ಬಂಧನದ ನಂತರ ಅನ್ಸಾರಿಯನ್ನು ಥಾಣೆಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಮೇ 4ರವರೆಗೆ ಆತನನ್ನು ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಪೊಲೀಸ್ ಮತ್ತು ರಾಜ್ಯ ಭಯೋತ್ಪಾದನಾ ನಿಗ್ರಹ ದಳದ ತಂಡವು ದಾಳಿಯ ತನಿಖೆ ನಡೆಸುತ್ತಿದೆ. ಇದು ಸಾಮಾನ್ಯವಾದ ದಾಳಿಯೇ ಅಥವಾ ದೊಡ್ಡ ಪಿತೂರಿಯ ಭಾಗವೇ ಎಂಬುದನ್ನು ಪತ್ತೆಹಚ್ಚಲು ಅಧಿಕಾರಿಗಳು ಈಗ ಅನ್ಸಾರಿಯಿಂದ ವಶಪಡಿಸಿಕೊಂಡ ಮೊಬೈಲ್ ಫೋನ್‌ಗಳು ಮತ್ತು ಎಲೆಕ್ಟ್ರಾನಿಕ್ ಸಾಧನಗಳನ್ನು ಪರಿಶೀಲಿಸುತ್ತಿದ್ದಾರೆ. ಮೂಲಗಳು ಹೇಳುವಂತೆ ಅನ್ಸಾರಿ ಬರೆದುಕೊಂಡ ನೋಟ್‌ಗಳಲ್ಲಿ 'ISIS', 'ಒಂಟಿ ತೋಳ', 'ಜಿಹಾದ್' ಮತ್ತು 'ಗಾಜಾ' ಮುಂತಾದ ಪದಗಳನ್ನು ಬರೆಯಲಾಗಿದೆ.

ಅನ್ಸಾರಿ ಹಲವಾರು ವರ್ಷಗಳಿಂದ ಅಮೆರಿಕದಲ್ಲಿ ವಾಸಿಸುತ್ತಿದ್ದ. ಆತನ ಕುಟುಂಬದ ಸದಸ್ಯರು ಇನ್ನೂ ಆ ದೇಶದಲ್ಲಿ ವಾಸಿಸುತ್ತಿದ್ದಾರೆ ಎಂದು ಮೂಲಗಳು ಹೇಳಿವೆ. ಆತನಿಗೆ ಅಲ್ಲಿ ಕೆಲಸ ಸಿಗಲಿಲ್ಲ. ಹೀಗಾಗಿ ಭಾರತಕ್ಕೆ ಮರಳಬೇಕಾಯಿತು.

# ಸಿದ್ದರಾಮಯ್ಯ ಮೌನ

ಬೆಂಗಳೂರು

ವಿಶೇಷವೆಂದರೆ, ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದು, ಡಿಕೆಶಿಗೆ ನೀಡಿದಂತೆ ತಮಗೂ ಅಧಿಕಾರ ನೀಡಬೇಕು ಎಂಬ ಬೇಡಿಕೆಯನ್ನು ಹೈಕಮಾಂಡ್ ಮುಂದಿಟ್ಟಿದ್ದಾರೆ ಎನ್ನಲಾಗಿದೆ.

ಏತನ್ಮಧ್ಯೆ, ಕಾಂಗ್ರೆಸ್ ಹೈಕಮಾಂಡ್‌ನಿಂದ ಡಿಕೆ ಶಿವಕುಮಾರ್‌ಗೆ ಬಿಗ್ ಬರ್ತ್‌ಡೇ ಗಿಫ್ಟ್ ಸಿಗಲಿದೆ ಎಂಬ ಊಹಾಪೋಹಗಳ ಬಗ್ಗೆ ಗೃಹ ಸಚಿವ ಜಿ ಪರಮೇಶ್ವರ ನೀಡಿರುವ ಪ್ರತಿಕ್ರಿಯೆ ಕೂಡ ಕುತೂಹಲಕ್ಕೆ ಕಾರಣವಾಗಿದೆ. ಇಷ್ಟು ದಿನ "ಸಿಎಂ ಬದಲಾವಣೆ ಇಲ್ಲ" ಎನ್ನುತ್ತಿದ್ದ ಪರಮೇಶ್ವರ್, ಈಗ "ಹೈಕಮಾಂಡ್ ನಿರ್ಧಾರವೇ ಅಂತಿಮ" ಎಂದಿರುವುದು ಗೊಂದಲವನ್ನು ಮತ್ತಷ್ಟು ಹೆಚ್ಚಿಸಿದೆ. ಮೇ 15ರ ಡಿಕೆಶಿ ಹುಟ್ಟುಹಬ್ಬದ ವೇಳೆಗೆ ಹೈಕಮಾಂಡ್ ಏನಾದರೂ 'ಗಿಫ್ಟ್' ನೀಡಲಿದೆಯೇ ಎಂಬ ಚರ್ಚೆ ಜೋರಾಗಿದ್ದು, ಅಸ್ತಿತ್ವ ಉಳಿಸಿಕೊಳ್ಳಲು ಅಹಿಂದ ನಾಯಕರು ಈಗಲೇ ದಾಳ ಉರುಳಿಸುತ್ತಿದ್ದಾರೆ.

# ರಷ್ಯಾದಿಂದ ಮತ್ತಷ್ಟು ಎಸ್-400

ಬೆಂಗಳೂರು

ಇದು ಭಾರತದ ರಕ್ಷಣಾ ವ್ಯವಸ್ಥೆಗೆ ದೊಡ್ಡ ಶಕ್ತಿ ನೀಡಲಿದೆ. ಆಪರೇಷನ್ ಸಿಂದೂರ್ ಸಮಯದಲ್ಲಿ ಎಸ್-400 ಕ್ಷಿಪಣಿ ವ್ಯವಸ್ಥೆಗಳು ನಿರ್ಣಾಯಕ ಪಾತ್ರ ವಹಿಸಿದ್ದವು. ಪಾಕಿಸ್ತಾನದ ಕ್ಷಿಪಣಿಗಳನ್ನು ರಷ್ಯಾದಿಂದ ಮತ್ತೆ ಐದು ಎಸ್-400 ಕ್ಷಿಪಣಿ ವ್ಯವಸ್ಥೆಗಳ ಹೊಸ ಬ್ಯಾಚ್ ಖರೀದಿಗೆ ಅನುಮೋದನೆ ನೀಡಿದ್ದು, ಇದು ಒಟ್ಟು ಕ್ಷಿಪಣಿಗಳ ಸಂಖ್ಯೆಯನ್ನು 10ಕ್ಕೆ ಹೆಚ್ಚಿಸಿದೆ. ಕ್ಷಿಪಣಿ ವ್ಯವಸ್ಥೆಯ ನಾಲ್ಕನೇ ಘಟಕವನ್ನು ಈಗಾಗಲೇ ರವಾನಿಸಲಾಗಿದೆ ಮತ್ತು ಮುಂದಿನ ಕೆಲವು ದಿನಗಳಲ್ಲಿ ಅದು ಭಾರತವನ್ನು ತಲುಪುವ ನಿರೀಕ್ಷೆಯಿದೆ

# ಪ್ರಸ್ತಾಪ ತಿರಸ್ಕಾರ

ಬೆಂಗಳೂರು

ತೆಗೆದುಹಾಕಬಹುದು ಎಂದು ಆಡಳಿತದ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಆದಾಗ್ಯೂ, ಇಂಧನ ಬೆಲೆಗಳನ್ನು ಉಳಿಸಿಕೊಳ್ಳುವ ಉದ್ದೇಶದಿಂದ ದಿಗ್ಬಂಧನವನ್ನು ಕಾಯ್ದುಕೊಳ್ಳುವುದರಿಂದ ಅಮೆರಿಕ ತನ್ನದೇ ಆದ ಅಪಾಯಗಳಿಗೆ ಒಳಗಾಗುವ ಸಾಧ್ಯತೆ ಇರುವುದರಿಂದ ಮುಂದಿನ ಹಂತದ ಕಾರ್ಯತಂತ್ರವು ಅನಿಶ್ಚಿತವಾಗಿಯೇ ಉಳಿದಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ.

ಇರಾನಿನ ಸರ್ಕಾರದೊಳಗಿನ ಆಂತರಿಕ ಬಿರುಕುಗಳ ಇರುವಿಕೆ ವಿಚಾರದಲ್ಲಿ ಅಮೆರಿಕದ ಪ್ರತಿನಿಧಿಗಳು ಜಾಗರೂಕರಾಗಿದ್ದಾರೆ. ಇರಾನಿನ ಯಾವ ವ್ಯಕ್ತಿ ನಿರೀಕ್ಷಿತ ಒಪ್ಪಂದದ ಮೇಲೆ ಅಂತಿಮ ನಿರ್ಧಾರ ತೆಗೆದುಕೊಳ್ಳುವ ಅಧಿಕಾರವನ್ನು ಉಳಿಸಿಕೊಳ್ಳುತ್ತಾರೆ ಎಂಬ ಬಗ್ಗೆ ಖಚಿತತೆ ಇಲ್ಲ.

ಈ ರಾಜತಾಂತ್ರಿಕ ಬಿಕ್ಕಟ್ಟಿನ ಹೊರತಾಗಿಯೂ, ಕಳೆದ ವಾರ ಕದನ ವಿರಾಮವನ್ನು ವಿಸ್ತರಿಸುವ ನಿರ್ಧಾರದ ನಂತರ ಅಮೆರಿಕ ಬಾಂಬ್ ದಾಳಿ ಕಾರ್ಯಾಚರಣೆ ನಡೆಸುವುದಿಲ್ಲ ಎಂದು ಟ್ರಂಪ್ ತಿಳಿಸಿದ್ದು. ಸದ್ಯ ನಡೆಯುತ್ತಿರುವ ಮಾತುಕತೆಗಳ ನಿರ್ದಿಷ್ಟ ವಿವರಗಳ ಕುರಿತು ಮಾಹಿತಿ ನೀಡಲು ಶ್ವೇತಭವನ ನಿರಾಕರಿಸಿದೆ.

ಈ ಕುರಿತು ಮಾತನಾಡಿರುವ ಸಹಾಯಕ ಪತ್ರಿಕಾ ಕಾರ್ಯದರ್ಶಿ ಒಲಿವಿಯಾ ವೇಲ್ಸ್, ಇವು ಸೂಕ್ಷ್ಮ ರಾಜತಾಂತ್ರಿಕ ಚರ್ಚೆಗಳು ಈ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸುವುದಿಲ್ಲ. ಆಡಳಿತವು ದೀರ್ಘಕಾಲೀನ ನಿರ್ಣಯದ ಮೇಲೆ ಕೇಂದ್ರೀಕರಿಸಿದೆ. ಇರಾನ್ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಲು ಟ್ರಂಪ್ ಎಂದಿಗೂ ಅವಕಾಶ ನೀಡದೆ, ಅಮೆರಿಕ ಮೊದಲು ಇರಿಸುವ ಒಪ್ಪಂದವನ್ನು ಮಾತ್ರ ಮಾಡುತ್ತದೆ ಎಂದರು.

## ಪತ್ರಿಕೆ ಓದಿಸುವ ಕ್ರಮಕ್ಕೆ ಸ್ವಾಗತ

ಬೆಂಗಳೂರು

ಶಾಲೆಗಳಲ್ಲಿ ಪತ್ರಿಕೆಗಳ ಪ್ರಮುಖ ಸುದ್ದಿಗಳನ್ನು ಪ್ರತಿನಿತ್ಯ ಓದುವ ಕ್ರಮ ಕಡ್ಡಾಯ ಮಾಡಿರುವ ಸರ್ಕಾರದ ಕ್ರಮವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ಸ್ವಾಗತಿಸಿದೆ.

ಶಾಲೆಗಳಲ್ಲಿ ಓದುವ ಮತ್ತು ಬೋರ್ಡ್ ಮೇಲೆ ಬರೆಯುವ, ನೋಟೀಸ್ ಬೋರ್ಡ್ ನಲ್ಲಿ ಹಾಕುವ ಅಭ್ಯಾಸವು ಮಾಸುತ್ತಿದೆ. ಮೊಬೈಲ್ ಯುಗದ ಪ್ರಭಾವದಲ್ಲಿ ಹಿಂದಿನ ಪದ್ಧತಿಗಳು ಮರೆತು ಹೋಗುತ್ತಿರುವ ಈ ಹೊತ್ತಿನಲ್ಲಿ ಸರ್ಕಾರದ ಕ್ರಮ ಅಗತ್ಯವಿತ್ತು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.

ಉತ್ತರ ಪ್ರದೇಶ ಸರ್ಕಾರ ಅಲ್ಲಿನ ಸರ್ಕಾರಿ ಶಾಲೆಗಳಲ್ಲಿ ದಿನಪತ್ರಿಕೆ ಓದುವುದನ್ನು ಡಿಸೆಂಬರ್/2025 ರಲ್ಲಿ ಕಡ್ಡಾಯ ಮಾಡಿದ್ದು, ಇದೇ ರೀತಿಯಲ್ಲಿ ರಾಜ್ಯ ಸರ್ಕಾರ ಕೂಡ ಕ್ರಮಕೈಗೊಳ್ಳುವಂತೆ ಆಗ್ರಹಿಸಿ ಕೆಯುಡಬ್ಲ್ಯೂಜೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿತ್ತು.

# ಗೋಮಾತೆಯ ಗೌರವಕ್ಕಾಗಿ ಮನವಿ

ಬೆಂಗಳೂರು

ಗೋಮಾತೆಯ ಗೌರವ ಹಾಗೂ ರಕ್ಷಣೆಗೆ ಒತ್ತಾಯಿಸಿ ಬೆಂಗಳೂರು ದಕ್ಷಿಣ ಮತ್ತು ಉತ್ತರ ತಾಲ್ಲೂಕು ಘಟಕಗಳ ವತಿಯಿಂದ ಇಂದು ಬೆಳಿಗ್ಗೆ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ನಗರದ ಮೈಸೂರು ಬ್ಯಾಂಕ್ ವೃತ್ತದಲ್ಲಿರುವ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ನೆರವೇರಿಸಿ ಗೋಪೂಜೆ ಮಾಡಲಾಯಿತು. ಬಳಿಕ ಮಂಗಳವಾದ್ಯ, ಭಜನೆ ಹಾಗೂ ಸಂಕೀರ್ತನೆಗಳೊಂದಿಗೆ ಭಕ್ತಿಭಾವದಿಂದ ಮೆರವಣಿಗೆ ನಡೆಯಿತು.

ಈ ಮೆರವಣಿಗೆಗೆ ಆರೂಢ ಭಾರತೀ ಸ್ವಾಮೀಜಿ, ಸಂಗಮನಂದ ಸ್ವಾಮೀಜಿ ಹಾಗೂ ಪ್ರಮೋದ್ ಮುತ್ತಾಲಿಕ್ ನೇತೃತ್ವ ನೀಡಿದರು. ನೂರಾರು ಸಂತರು, ಗೋಭಕ್ತರು, ಗೋಸೇವಕರು, ದೇಶಭಕ್ತರು, ಜನನಾಯಕರು,



ಮಹಿಳೆಯರು, ಮಕ್ಕಳು ಹಾಗೂ ಕೃಷ್ಣವೇಷಧಾರಿಗಳು ಭಾಗವಹಿಸಿದರು.

ತಹಶೀಲ್ದಾರರ ಅನುಪಸ್ಥಿತಿಯಲ್ಲಿ ಅಧಿಕಾರಿಗಳು ಮನವಿಯನ್ನು ಸ್ವೀಕರಿಸಿ, ಮನವಿಯಲ್ಲಿರುವ ಬೇಡಿಕೆಗಳನ್ನು ಮಾನ್ಯ ಮುಖ್ಯಮಂತ್ರಿಗಳಿಗೆ, ರಾಜ್ಯಪಾಲರಿಗೆ, ಪ್ರಧಾನಮಂತ್ರಿಗಳಿಗೆ ಹಾಗೂ ರಾಷ್ಟ್ರಪತಿಗಳಿಗೆ ಕಳುಹಿಸಲಾಗುವುದಾಗಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ತಾಯಿಯ ಹಾಲಿನ ನಂತರ ಮಾನವ ಜೀವನಕ್ಕೆ ಗೋಕ್ಷೀರ ಅತ್ಯಂತ ಮುಖ್ಯವೆಂದು ಹೇಳಿದರು. ಗೋಮಾತೆಯನ್ನು ಜನ್ಮತಾಯಿ ಹಾಗೂ ರಾಷ್ಟ್ರಮಾತೆಯಂತೆ ಗೌರವಿಸಬೇಕೆಂದು ಒತ್ತಿಹೇಳಿದರು.

ಮನವಿಯಲ್ಲಿ ಗೋವನ್ನು ರಾಷ್ಟ್ರಮಾತೆ ಎಂದು ಘೋಷಿಸುವುದು, ಏಕ ಕಾನೂನಿನಡಿ ಗೋಹತ್ಯೆ ನಿಷೇಧ ಜಾರಿಗೊಳಿಸುವುದು, ಗೋಮಾಳವನ್ನು ಗೋಸಂರಕ್ಷಣೆಗೆ ಮೀಸಲಿಡುವುದು ಹಾಗೂ ಗೋಶಾಲೆ ಮತ್ತು ಗೋಉದ್ಯಮಕ್ಕೆ ಅಗತ್ಯ ಅನುದಾನ ಮತ್ತು ಬೆಂಬಲ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿರಿಸಲಾಗಿದೆ.

# ಒತ್ತುವರಿ ತೆರವು: 88 ಸಾವಿರ ರೂ. ದಂಡ

ಬೆಂಗಳೂರು

ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಗೆ ಒಳಪಟ್ಟ ಜಯನಗರ ವಾಣಿಜ್ಯ ಸಂಕೀರ್ಣದಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಗಿದ್ದು, ಒಟ್ಟು 88,200 ದಂಡ ವಸೂಲಿ ಮಾಡಲಾಗಿದೆ ಎಂದು ಆಯುಕ್ತ ಕೆ.ಎನ್. ರಮೇಶ್ ತಿಳಿಸಿದ್ದಾರೆ.

ಸುಮಾರು 15,000 ಚದರ ಅಡಿ ವಿಸ್ತೀರ್ಣ ಹೊಂದಿರುವ ಈ ಸಂಕೀರ್ಣದಲ್ಲಿ 270ಕ್ಕೂ ಹೆಚ್ಚು ಅಂಗಡಿಗಳು ಕಾರ್ಯನಿರ್ವಹಿಸುತ್ತಿದ್ದು, ಕಾರಿಡಾರ್‌ಗಳು, ಪಾದಚಾರಿ ಮಾರ್ಗಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಅಂಗಡಿ ಮಾಲೀಕರು ಹಾಗೂ ವ್ಯಾಪಾರಿಗಳು ಅತಿಕ್ರಮಿಸಿಕೊಂಡಿರುವ ಬಗ್ಗೆ ಸಾರ್ವಜನಿಕರಿಂದ ಹಲವು ದೂರುಗಳು ಬಂದಿದ್ದವು.

ಈ ಹಿನ್ನೆಲೆಯಲ್ಲಿ ಕಳೆದ ಮೂರು ದಿನಗಳಿಂದ ಪಾಲಿಕೆ ಅಧಿಕಾರಿಗಳು ಅಂಗಡಿ ಮಾಲೀಕರಿಗೆ ತಮ್ಮ ವ್ಯಾಪ್ತಿಯನ್ನು ಮೀರಿದ ಅನಧಿಕೃತ ಒತ್ತುವರಿಯನ್ನು ಸ್ವಯಂಪ್ರೇರಿತವಾಗಿ ತೆರವುಗೊಳಿಸುವಂತೆ ಜಾಗೃತಿ ಮೂಡಿಸಿದ್ದರು. ಆದಾಗ್ಯೂ, ಸೂಚನೆಗಳ ನಂತರವೂ ಒತ್ತುವರಿ ಮುಂದುವರೆದ ಹಿನ್ನೆಲೆಯಲ್ಲಿ ಪಾಲಿಕೆಯಿಂದ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಕಾರಿಡಾರ್ ಮತ್ತು ಪಾದಚಾರಿ ಮಾರ್ಗಗಳನ್ನು ಅತಿಕ್ರಮಿಸಿರುವ ಹಿನ್ನೆಲೆಯಲ್ಲಿ ಒಟ್ಟು 39 ಪ್ರಕರಣಗಳನ್ನು



ದಾಖಲಿಸಿ, ಉಲ್ಲಂಘನೆದಾರರಿಗೆ ರೂ.88,200 ದಂಡ ವಿಧಿಸಲಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಸಾರ್ವಜನಿಕರ ಸುಗಮ ಸಂಚಾರಕ್ಕೆ ಅಡ್ಡಿಯಾಗುವಂತಹ ಯಾವುದೇ ರೀತಿಯ ಒತ್ತುವರಿಯನ್ನು ಸಹಿಸಲಾಗುವುದಿಲ್ಲ ಎಂಬ ಸ್ಪಷ್ಟ ಸಂದೇಶವನ್ನು ನೀಡಿರುವ ಪಾಲಿಕೆ, ಎಲ್ಲಾ ಅಂಗಡಿ ಮಾಲೀಕರಿಗೂ ಎಚ್ಚರಿಕೆ ನೀಡಿದೆ. ಸಂಪೂರ್ಣವಾಗಿ ಒತ್ತುವರಿ ತೆರವುಗೊಳಿಸುವವರೆಗೆ ಈ ವಿಶೇಷ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿಯೂ ಒತ್ತುವರಿ ಮುಂದುವರೆದರೆ, ಸಾರ್ವಜನಿಕ ಹಿತದೃಷ್ಟಿಯಿಂದ ಕಠಿಣ ಕಾನೂನು ಕ್ರಮಗಳೊಂದಿಗೆ ವಾಣಿಜ್ಯ ಪರವಾನಿಗೆ ರದ್ದುಪಡಿಸುವಂತಹ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಆಯುಕ್ತ ಕೆ.ಎನ್. ರಮೇಶ್ ಎಚ್ಚರಿಕೆ ನೀಡಿದ್ದಾರೆ.

# 'ಸ್ವಾರ್ಥಿಗಳು ಸಿಎಂ ಆಗಲು ಹೊರಟಿರುವುದು ದುರಂತ'

ಬೆಂಗಳೂರು

ನಾಲ್ಕು ವೋಟಿಗೋಸ್ಕರ ದೇಶದ್ರೋಹಿಗಳನ್ನು ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವ ಸ್ವಾರ್ಥಿಗಳು ನಾಡಿನ ಸಿಎಂ ಆಗಲು ಹೊರಟಿರುವುದು ಕರ್ನಾಟಕದ ದುರಂತ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ಅಂದು ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟವನ್ನು ಕೇವಲ 'ಡೈವರ್ಶನ್ ಪಾಲಿಟಿಕ್ಸ್' ಎಂದು ಲೇವಡಿ ಮಾಡಿ ಉಗ್ರರ ಪರ ನಿಂತಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಾಂಗ್ರೆಸ್ ನಾಯಕರಿಗೆ ಈಗ ಸತ್ಯದ ದರ್ಶನವಾಗಿದೆ! ಇಂದು ಮಂಗಳೂರು ಸ್ಫೋಟದ ರೂವಾರಿ ಉಗ್ರ ತಾರೀಕಿಗೆ ನ್ಯಾಯಾಲಯ ಶಿಕ್ಷೆ ವಿಧಿಸಿರುವುದನ್ನ ಉಲ್ಲೇಖಿಸಿ ಹೇಳಿದ್ದಾರೆ.

ಉಗ್ರ ಶಾರೀಕ್‌ನ ಕೃತ್ಯ ಸಾಬೀತಾಗಿದ್ದು, ಎನ್‌ಐಎ ನ್ಯಾಯಾಲಯ ಆತನಿಗೆ 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ. ರಾಷ್ಟ್ರೀಯ ಭದ್ರತೆಯಂತಹ ಗಂಭೀರ ವಿಚಾರದಲ್ಲೂ ಕೇವಲ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣ ಮಾಡುವ ರಾಜ್ಯ ಕಾಂಗ್ರೆಸ್‌ನದ ನೈಜ ಮುಖವಾಡ ಕಳಚಿದೆ. ಎಂದು ತಿಳಿಸಿದ್ದಾರೆ.

ದೇಶದ ಭದ್ರತೆಗಿಂತ ಕಾಂಗ್ರೆಸ್‌ಗೆ ವೋಟ್ ಬ್ಯಾಂಕ್ ರಾಜಕಾರಣವೇ ಮುಖ್ಯವಾಗಿದೆ. ಕಾಂಗ್ರೆಸ್ ಇನ್ನಾದರೂ ಮತಾಂಧರನ್ನು ತಮ್ಮ ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವುದನ್ನ ಬಿಡಬೇಕು ಎಂದು ಆರ್ ಅಶೋಕ್

# ಉಗ್ರರ ಕುರಿತ ಪುಸ್ತಕ ಬಿಡುಗಡೆಗೆ ಖಂಡನೆ

ಬೆಂಗಳೂರು

ದೆಹಲಿ ಗಲಭೆ ಪ್ರಕರಣದಲ್ಲಿ ಆರೋಪಿಯಾಗಿರುವ ಉಮರ್ ಖಾಲಿದ್ ಕುರಿತು ಬೆಂಗಳೂರಿನ ದೊಮ್ಮಲೂರು 2ನೇ ಹಂತದಲ್ಲಿರುವ ಬೆಂಗಳೂರು ಇಂಟರ್‌ನ್ಯಾಷನಲ್ ಸೆಂಟರ್ ನಲ್ಲಿ "ಉಮರ್ ಖಾಲಿದ್ ಅಂಡ್ ಹಿಸ್ ವರ್ಲ್ಡ್" ಎಂಬ ಕಾರ್ಯಕ್ರಮ ಆಯೋಜಿಸಿರುವುದನ್ನು ಖಂಡಿಸಿ ಹಿಂದೂ ಜನಜಾಗೃತಿ ಸಮಿತಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಸಂಸ್ಥೆಯ ರಾಜ್ಯ ವಕ್ತಾರ ಮೋಹನ್ ಗೌಡ ಅವರು ಈ ಕುರಿತು ಪ್ರಕಟಣೆ ನೀಡಿದ್ದು, ದೆಹಲಿ ಗಲಭೆ ಹಾಗೂ ಭಯೋತ್ಪಾದನಾ ಚಟುವಟಿಕೆಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಆರೋಪಿಯಾಗಿರುವ ವ್ಯಕ್ತಿಯ ಕುರಿತು ಕಾರ್ಯಕ್ರಮ ಆಯೋಜಿಸಿರುವುದು ಅಸಮಂಜಸ ಎಂದು ಹೇಳಿದ್ದಾರೆ. ಈ ಕಾರ್ಯಕ್ರಮವನ್ನು ತಕ್ಷಣ ರದ್ದುಪಡಿಸುವಂತೆ ಇಂದಿರಾನಗರ ಪೊಲೀಸ್ ಠಾಣೆಗೆ ಹಾಗೂ ಮೇಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಆದರೆ, ಕಾರ್ಯಕ್ರಮವನ್ನು ರದ್ದುಪಡಿಸುವ ಬದಲು ಪ್ರತಿಭಟನೆ ನಡೆಸಲು ಅನುಮತಿ ನಿರಾಕರಿಸಿ ನೋಟಿಸ್ ನೀಡಿರುವುದನ್ನು ಅವರು ಪ್ರಶ್ನಿಸಿದ್ದಾರೆ. ಹಿಂದೂ ಸಂಘಟನೆಗಳು ಸಣ್ಣ ಮಟ್ಟದ ಕಾರ್ಯಕ್ರಮಗಳನ್ನು ನಡೆಸಿದರೂ ಪೊಲೀಸರು ಕಟ್ಟುನಿಟ್ಟಿನ ನಿಯಮಗಳನ್ನು ವಿಧಿಸುತ್ತಾರೆ, ಆದರೆ ಇಂತಹ ವಿವಾದಾತ್ಮಕ ಕಾರ್ಯಕ್ರಮಗಳಿಗೆ ಅವಕಾಶ ನೀಡಲಾಗುತ್ತಿರುವುದು ದ್ವಂದ್ವ ನೀತಿಯನ್ನು ತೋರಿಸುತ್ತದೆ ಎಂದು ಆರೋಪಿಸಿದ್ದಾರೆ.

ಭಯೋತ್ಪಾದನೆಗೆ ಬೆಂಬಲ ನೀಡುವ ಯಾವುದೇ ಚಟುವಟಿಕೆಯನ್ನು ಪ್ರಜಾಸತ್ತಾತ್ಮಕ ಸ್ವಾತಂತ್ರ್ಯದ ಹೆಸರಿನಲ್ಲಿ ಸಮರ್ಥಿಸಲಾಗುವುದಿಲ್ಲ ಎಂದು ಅವರು ಹೇಳಿದ್ದಾರೆ. ದೇಶದ ಭದ್ರತೆ ಮತ್ತು ಸಮಾಜದ ಶಾಂತಿ ಅತ್ಯಂತ ಮುಖ್ಯವಾಗಿದ್ದು, ಸರ್ಕಾರ ಇಂತಹ ಕಾರ್ಯಕ್ರಮಗಳನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಇಲ್ಲವಾದಲ್ಲಿ ರಾಜ್ಯದ ಹಿಂದೂ ಸಮಾಜ ಹಾಗೂ ರಾಷ್ಟ್ರಭಕ್ತರು ಕಾನೂನುಬದ್ಧವಾಗಿ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ.

# ಕಸದ ಸಮಸ್ಯೆಗೆ ಹೆಚ್ಚಿನ ಆದ್ಯತೆ ನೀಡಿ

ಬೆಂಗಳೂರು

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ.ರಾಜೇಂದ್ರ.ಕೆ.ವಿ. ಅವರು ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಮುನಿರಾಜು ಅವರ ಸಮ್ಮುಖದಲ್ಲಿ ಕ್ಷೇತ್ರ ವ್ಯಾಪ್ತಿಯ ವಾರ್ಡ್‌ಗಳಿಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳ ಕುರಿತು ಎರಡನೇ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಸಭೆಯಲ್ಲಿ ಸಾರ್ವಜನಿಕ ಸಮಸ್ಯೆಗಳು, ಮೂಲಸೌಕರ್ಯ ಅಭಿವೃದ್ಧಿ, ನಾಗರಿಕ ಸೇವೆಗಳ ಸುಧಾರಣೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಸಮಗ್ರ ಚರ್ಚೆ ನಡೆಸಿ, ಸಂಬಂಧಿತ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಯಿತು.

ಅಮೃತ ನಗರೋತ್ಥಾನ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಲು ಸೂಚನೆ ನೀಡಲಾಗಿದ್ದು, ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ಬೋರ್‌ವೆಲ್‌ಗಳನ್ನು ಅಳವಡಿಸಿ ಸಮರ್ಪಕ ನಿರ್ವಹಣೆ ಮಾಡಲು ಸೂಚಿಸಲಾಯಿತು.

ಸುರಕ್ಷಾ-75 ಯೋಜನೆಯಡಿ ಅಗತ್ಯವಿರುವ



ಸ್ಥಳಗಳನ್ನು ಗುರುತಿಸಿ ಸಿಗ್ನಲ್ ವ್ಯವಸ್ಥೆಯನ್ನು ಸುಧಾರಿಸುವುದು, ಟೋಯಿಂಗ್ ವಾಹನಗಳ ಕಾರ್ಯಾಚರಣೆಯನ್ನು ಪರಿಣಾಮಕಾರಿಯಾಗಿ ನಡೆಸುವುದು ಹಾಗೂ ಕಸದ ಸಮಸ್ಯೆ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಆಯುಕ್ತರು ತಿಳಿಸಿದರು. ವಿದ್ಯುತ್ ದೀಪಗಳ ನಿರ್ವಹಣೆ, ಪಾರ್ಕ್‌ಗಳ ಸಂರಕ್ಷಣೆ, ಕುಡಿಯುವ ನೀರು ಮತ್ತು ಶೌಚಾಲಯ ಸೌಲಭ್ಯಗಳ ಸುಧಾರಣೆಗೂ ಗಮನ ಹರಿಸಲು ಸೂಚಿಸಲಾಯಿತು.

ಅನಧಿಕೃತ ಫ್ಲೆಕ್ಸ್ ಹಾಗೂ ಬ್ಯಾನರ್‌ಗಳನ್ನು ತೆರವುಗೊಳಿಸುವುದು, ಪಾದಚಾರಿ ಮಾರ್ಗಗಳ ಮೇಲಿನ ಅನಧಿಕೃತ ಮಳಿಗೆಗಳನ್ನು ತೆರವುಗೊಳಿಸುವುದು ಹಾಗೂ ಹೊಸ ಅಪಾರ್ಟ್ಮೆಂಟ್ ಪ್ರದೇಶಗಳಲ್ಲಿ ಇ-ಖಾತಾ ಮೇಳಗಳನ್ನು ಆಯೋಜಿಸುವ ಬಗ್ಗೆ ನಿರ್ದೇಶನ ನೀಡಲಾಯಿತು.

ಮಳೆಗಾಲದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಹಾಗೂ ಯಾವುದೇ ಅವಾಂತರಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲು ಸೂಚಿಸಲಾಯಿತು. ಚೊಕ್ಕಸಂದ್ರ ಕೆರೆಯ ಅಭಿವೃದ್ಧಿಗೆ ಆದ್ಯತೆ ನೀಡುವ ಜೊತೆಗೆ ಮರಗಳ ಕೊಂಬೆ ಕತ್ತರಿಸುವ ಕಾರ್ಯವನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ತಿಳಿಸಲಾಯಿತು.

ವ್ಯಾಪಾರ ಪರವಾನಗಿ ಪರಿಶೀಲನೆ ನಡೆಸಿ ನಿಯಮ ಉಲ್ಲಂಘನೆ ಕಂಡುಬಂದಲ್ಲಿ ದಂಡ ವಿಧಿಸಲು ಸೂಚನೆ ನೀಡಲಾಗಿದ್ದು, ಮಟನ್ ಮತ್ತು ಚಿಕನ್ ಅಂಗಡಿಗಳಲ್ಲಿ ಸ್ವಚ್ಛತೆ ಕಾಪಾಡದಿದ್ದಲ್ಲಿ ನೋಟಿಸ್ ನೀಡಿ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಯಿತು. ಸಾರ್ವಜನಿಕ ಹಿತದೃಷ್ಟಿಯಿಂದ ಅಧಿಕಾರಿಗಳು ತಮ್ಮ ಕರ್ತವ್ಯಗಳನ್ನು ನಿಷ್ಠೆಯಿಂದ ನಿರ್ವಹಿಸುವಂತೆ ಆಯುಕ್ತರು ತಿಳಿಸಿದರು. ಸಭೆಯ ನಂತರ ಆಯುಕ್ತರು ಹಾಗೂ ಶಾಸಕರು ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ಈ ಸಭೆಯಲ್ಲಿ ಜಂಟಿ ಆಯುಕ್ತರಾದ ಆರತಿ ಆನಂದ್, ಉಪ ಆಯುಕ್ತರು (ಆಡಳಿತ) ಸಾಯಿದ್ ಆಫ್ರಿನ್ ಭಾನು, ಮುಖ್ಯ ಅಭಿಯಂತರರಾದ ಸ್ವಯಂ ಪ್ರಭಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಚೇತನ್‌ಗೆ ನಿಖಿಲ್ ತಿರುಗೇಟು

ಬೆಂಗಳೂರು

ಡಾ.ರಾಜ್‌ಕುಮಾರ್ ಎಂದರೆ ಆರು ಕೋಟಿ ಕನ್ನಡಿಗರ ಭಾವನೆ. ಅಣ್ಣಾವ್ರ ಬಗ್ಗೆ ಹಗುರವಾಗಿ ಮಾತನಾಡುವುದು ಅಹಂಕಾರದ ಪರಮಾವಧಿ. ಹೆಸರಿನಲ್ಲಿ ಅಹಿಂಸೆ ಇರಬಹುದು, ಆದರೆ ನಿಮ್ಮ ಪ್ರತಿಯೊಂದು ಮಾತೂ ಕನ್ನಡಿಗರ ಭಾವನೆಗಳಿಗೆ ಮಾಡುವ ಹಿಂಸೆ" ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನಟ ಚೇತನ್ ಅಹಿಂಸಾ ಅವರಿಗೆ ಖಡಕ್ ತಿರುಗೇಟು ನೀಡಿದ್ದಾರೆ.

ಡಾ. ರಾಜ್‌ಕುಮಾರ್ ಕುರಿತು ಚೇತನ್ ಮಾಡಿದ್ದ ಪೋಸ್ಟ್‌ಗೆ ಟ್ವೀಟ್ ಮೂಲಕ ಪ್ರತಿಕ್ರಿಯಿಸಿದ ನಿಖಿಲ್, "ಗೋಕಾಕ್ ಚಳವಳಿಯ ಮೂಲಕ ಕನ್ನಡಕ್ಕೆ ಅಸ್ಮಿತೆ ತಂದುಕೊಟ್ಟ ಧೀಮಂತ ವ್ಯಕ್ತಿತ್ವದ ಬಗ್ಗೆ ಟೀಕಿಸುವ ಮೊದಲು ಇತಿಹಾಸ ತಿಳಿದುಕೊಳ್ಳಿ" ಎಂದು ಸಲಹೆ ನೀಡಿದರು.

ಸಾರ್ವಜನಿಕ ಜೀವನದಲ್ಲಿ ಟೀಕೆಗಳು ಸಹಜವಾದರೂ ಅವುಗಳಿಗೆ ಒಂದು ಘನತೆ ಇರಬೇಕು" ಎಂದ ಅವರು, ನಮ್ಮ ಕುಟುಂಬದ ಮೇಲಿನ ವೈಯಕ್ತಿಕ ದಾಳಿ ಅಥವಾ ಸೋಲು-ಗೆಲುವಿನ ಮಾತುಗಳನ್ನು ನಾವು ಸದಾ ವಿನಮ್ರತೆಯಿಂದಲೇ ಸ್ವೀಕರಿಸುತ್ತೇವೆ ಎಂದು ಹೇಳಿದರು.

ಪ್ರಜಾಪ್ರಭುತ್ವದಲ್ಲಿ ಅಂತಿಮ ತೀರ್ಪುಗಾರರು ಜನರೇ ಹೊರತು, ಸಮಾಜದಲ್ಲಿ ದ್ವೇಷ ಬಿತ್ತುವ ವ್ಯಕ್ತಿಗಳಲ್ಲ. ಸಂಸ್ಕಾರ ಮನೆಯಿಂದ ಬರಬೇಕು, ಟೀಕೆಗಳು ಜನರ ಪ್ರೀತಿಯ ಅಡಿಪಾಯದ ಮೇಲಿರಬೇಕು. ಕೇವಲ ಪ್ರಚಾರದ ಹಪಾಹಪಿಯಿಂದಲ್ಲ ಎಂದು ನಿಖಿಲ್ ಕುಮಾರಸ್ವಾಮಿ ತಮ್ಮ ಪ್ರತಿಕ್ರಿಯೆಯಲ್ಲಿ ತಿಳಿಸಿದ್ದಾರೆ.

ಧಮ್ ಇದ್ರೆ ಚುನಾವಣೆಗೆ ಸ್ಪರ್ಧಿಸಲಿ: "ಚೇತನ್ ಹೇಳಿಕೆ ಯಾರ್ ಮಾತಾಡ್ತಾರೆ? ಧಮ್ ಇದ್ರೆ ಚುನಾವಣೆಗೆ ಸ್ಪರ್ಧೆ ಮಾಡಲಿ. ಮನೇಲಿ ಕೂತ್ಕೊಂಡು ಟ್ವೀಟ್ ಮಾಡೋದಕ್ಕೆ ಅವರೇ ಬೇಕಾ? ನನಗೂ ಬರವಣಿಗೆ ಗೊತ್ತು, ನಾನು ಸಾವಿರ ಟ್ವೀಟ್ ಮಾಡ್ತೀನಿ" ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನಟ ಚೇತನ್ ಅಹಿಂಸಾ ಅವರಿಗೆ ನೇರ ಸವಾಲು ಹಾಕಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಾ. ರಾಜ್‌ಕುಮಾರ್ ಸ್ಮಾರಕಕ್ಕೆ ಸರ್ಕಾರ ನೀಡಿರುವ ಜಾಗದ ಕುರಿತು ಚೇತನ್ ಮಾಡಿದ್ದ ಆಕ್ಷೇಪಕ್ಕೆ ತಿರುಗೇಟು ನೀಡಿದರು.

"ಚೇತನ್ ಅಹಿಂಸಾ ಟ್ವಿಟರ್‌ನಲ್ಲಿ ಅದು ಇದು ಬರೆದುಕೊಂಡಿದ್ದಾರೆ. ಇದರ ಬದಲು ಅವರಿಗೆ ತಾಕತ್ತು ಇದ್ದರೆ ಯಾವುದಾದರೊಂದು ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಲಿ" ಎಂದು ನಿಖಿಲ್ ಕುಮಾರಸ್ವಾಮಿ ಅವರು ಸವಾಲು ಹಾಕಿದರು. "ಡಾ. ರಾಜ್‌ಕುಮಾರ್, ವಿಷ್ಣುವರ್ಧನ್, ಅಂಬರೀಶ್ ಅವರುಗಳು ಕನ್ನಡ ಚಿತ್ರರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇದೇ ಕಾರಣದಿಂದ ಇವರೆಲ್ಲ ನಿಧನರಾದಾಗ ರಾಜ್ಯ ಸರ್ಕಾರ ಸೂಕ್ತ ಗೌರವ ನೀಡಿದೆ" ಎಂದರು. "ಡಾ. ರಾಜ್‌ಕುಮಾರ್ ಅವರು ನಿಧನರಾದ ಸಂದರ್ಭದಲ್ಲಿ ಮುಖ್ಯಮಂತ್ರಿ ಆಗಿದ್ದ ಕುಮಾರಣ್ಣನವರು ಸ್ಮಾರಕ ನಿರ್ಮಾಣಕ್ಕೆ ಜಾಗ ನೀಡಿದರು. ಅಂಬರೀಶಣ್ಣ

# ಯುವತಿಯರು ಪಾರು

ಬೆಂಗಳೂರು

ಗೋಡೌನ್ ಪಕ್ಕದಲ್ಲೇ ಸುಮಾರು 50 ಯುವತಿಯರು ವಾಸವಿದ್ದ ಲೇಡಿಸ್ ಪಿಜಿ ಇತ್ತು. ಬೆಂಕಿಯ ಕೆನ್ನಾಲಿಗೆ ಮತ್ತು ದಟ್ಟ ಹೊಗೆ ಪಿಜಿಯ ಒಳಗೂ ಆವರಿಸುತ್ತಿದ್ದಂತೆ ಯುವತಿಯರು ತೀವ್ರ ಗಾಬರಿಗೊಂಡಿದ್ದಾರೆ. ಹೊರಗೆ ಬರಲು ದಾರಿಯಿಲ್ಲದೆ ಆತಂಕಗೊಂಡ ಕೆಲ ಯುವತಿಯರು ಮೊದಲ ಮಹಡಿಯಿಂದ ಕೆಳಕ್ಕೆ ಜಿಗಿದಿದ್ದಾರೆ. ಇನ್ನೂ ಕೆಲವರು ಪ್ರಾಣ ಉಳಿಸಿಕೊಳ್ಳಲು ಪಿಜಿಯ ಕಾಂಪೌಂಡ್ ಗೋಡೆ ಹಾರಿ ಹೊರಬಂದಿದ್ದಾರೆ.

ಗೋಡೆ ಹಾರುವ ಮತ್ತು ಜಿಗಿಯುವ ಸಂದರ್ಭದಲ್ಲಿ ಕೆಲವು ಯುವತಿಯರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರು.

ಬೆಂಕಿಯ ಆವೇಶಕ್ಕೆ ಇಡೀ ಗೋಡೌನ್ ಸುಟ್ಟು ಕರಕಲಾಗಿದ್ದು, ಸ್ಥಳೀಯ ನಿವಾಸಿಗಳು ತಡರಾತ್ರಿ ಬೆಚ್ಚಿಬಿದ್ದಿದ್ದರು. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ನಂದಿನಿ ಲೇಔಟ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಬೆಂಕಿ ತಗುಲಲು ನಿಖರ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

ಗೋಡೌನ್‌ನಲ್ಲಿ ಸಂಭವಿಸಿದ ಬೆಂಕಿ ಅವಘಡದ ಬೆನ್ನಲ್ಲೇ ಈಗ ಮಾಲೀಕ ಮತ್ತು ಸ್ಥಳೀಯ ನಿವಾಸಿಗಳ ನಡುವೆ ಭಾರೀ ಗಲಾಟೆ ಶುರುವಾಗಿದೆ. ಬೆಂಕಿಯ ಅಬ್ಬರಕ್ಕೆ ತಮ್ಮ ಆಸ್ತಿಪಾಸ್ತಿ ಕಳೆದುಕೊಂಡ ಅಕ್ಕಪಕ್ಕದ ನಿವಾಸಿಗಳು ಗೋಡೌನ್ ಮಾಲೀಕನ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಬೆಂಕಿ ಮನೆಗಳಿಗೆ ಆವರಿಸಿದ್ದರಿಂದ ಗೇಟ್, ಕಿಟಕಿ ಹಾಗೂ ಮನೆಯ ಮುಂಭಾಗದ ವಸ್ತುಗಳು ಸುಟ್ಟು ಕರಕಲಾಗಿವೆ. "ನಿಮ್ಮ ಬೇಜವಾಬ್ದಾರಿಯಿಂದ ನಮ್ಮ ಮನೆಗಳಿಗೆ ಹಾನಿಯಾಗಿದೆ, ನಮಗೆ ತಕ್ಷಣ ಪರಿಹಾರ ಕೊಡಿಸಿ" ಎಂದು ನಿವಾಸಿಗಳು ಮಾಲೀಕನನ್ನು ತರಾಟೆಗೆ ತೆಗೆದುಕೊಳ್ಳುತ್ತಿದ್ದಾರೆ.

# 'ಭಾರತದ ಸಾಮರ್ಥ್ಯ ಮತ್ತಷ್ಟು ಬಲಪಡಿಸಲು ಸಜ್ಜು'

ಬೆಂಗಳೂರು

ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆ (ಐ.ಐ.ಎ.)ಯಲ್ಲಿ 75 ಕೋಟಿ ವೆಚ್ಚದ ಅತ್ಯಾಧುನಿಕ ಹೊಸ ಹೆಚ್ಚುವರಿ ಕಟ್ಟಡಕ್ಕೆ ಕೇಂದ್ರ ಸಚಿವರಾದ ಡಾ. ಜಿತೇಂದ್ರ ಸಿಂಗ್ ಶಂಕುಸ್ಥಾಪನೆ ನೆರವೇರಿಸಿದರು.

ಕೋರಮಂಗಲದಲ್ಲಿರುವ ಸಂಸ್ಥೆಯ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿಜ್ಞಾನಿಗಳು, ಸಂಶೋಧಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ನೂತನ ಕಟ್ಟಡವು ಏಳು ಅಂತಸ್ತಿನದ್ದಾಗಿದ್ದು, ಸುಮಾರು ಒಂದು ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ನಿರ್ಮಾಣವಾಗಲಿದೆ. ದೇಶದ ಪ್ರಮುಖ ವೈಜ್ಞಾನಿಕ ಕೇಂದ್ರಗಳಲ್ಲಿ ಒಂದಾಗಿ ಇದನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಖಗೋಳಶಾಸ್ತ್ರ ಮತ್ತು ಖಗೋಳ ಭೌತಶಾಸ್ತ್ರ ಕ್ಷೇತ್ರದಲ್ಲಿ ಭಾರತದ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿದೆ. ವಿಶ್ವ ದರ್ಜೆಯ, ಭವಿಷ್ಯಮುಖಿ ಸಂಶೋಧನೆಗಳಿಗೆ



ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಸಚಿವರು ಹೇಳಿದರು.

ಸಚಿವರು ಮಾತನಾಡುತ್ತಾ, ಬಾಹ್ಯಾಕಾಶ, ರಕ್ಷಣಾ ಹಾಗೂ ಅಂತರರಾಷ್ಟ್ರೀಯ ವಲಯಗಳಲ್ಲಿ ಬಳಕೆಯಾಗುತ್ತಿರುವ ಸುಧಾರಿತ ಖಗೋಳ ಉಪಕರಣಗಳಲ್ಲಿ ಭಾರತದ ಸ್ಥಳೀಯ ತಂತ್ರಜ್ಞಾನ ಸಾಮರ್ಥ್ಯವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಐ.ಐ.ಎ.ಯಲ್ಲಿ ಅಭಿವೃದ್ಧಿಪಡಿಸಲಾದ ತಂತ್ರಜ್ಞಾನಗಳನ್ನು ಇಸ್ರೋ ಸೇರಿದಂತೆ ಹಲವು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಬಾಹ್ಯಾಕಾಶ ಕಾರ್ಯಾಚರಣೆಗಳಲ್ಲಿ ಬಳಸಲಾಗುತ್ತಿದೆ ಎಂದು ಅವರು ಹೇಳಿದರು.

2026ರ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದಂತೆ, ರಾಷ್ಟ್ರೀಯ ಬೃಹತ್ ಸೌರ ದೂರದರ್ಶಕ, ರಾಷ್ಟ್ರೀಯ ಬೃಹತ್ ಆಪ್ಟಿಕಲ್-ಇನ್ಫ್ರಾರೆಡ್ ದೂರದರ್ಶಕ, ಹಿಮಾಲಯನ್ ಚಂದ್ರ ದೂರದರ್ಶಕ ಉನ್ನತೀಕರಣ ಮತ್ತು ಕಾಸ್ಮೋಸ್-2 ತಾರಾಲಯ ಸೇರಿದಂತೆ ನಾಲ್ಕು ವಿಶ್ವ ದರ್ಜೆಯ ದೂರದರ್ಶಕ ಯೋಜನೆಗಳನ್ನು ಐ.ಐ.ಎ. ಅಭಿವೃದ್ಧಿಪಡಿಸಲಿದ್ದು, ಇವುಗಳಿಂದ ಭಾರತದ ಖಗೋಳ ಸಂಶೋಧನೆಗೆ ಹೊಸ ದಿಕ್ಕು ಸಿಗಲಿದೆ ಎಂದು ಸಚಿವರು ವಿವರಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷ ಡಾ. ಎಸ್. ಸೋಮನಾಥ್, ನಿರ್ದೇಶಕಿ ಡಾ. ಅನ್ನಪೂರ್ಣಿ ಸುಬ್ರಮಣಿಯನ್ ಸೇರಿದಂತೆ ಹಿರಿಯ ಅಧ್ಯಾಪಕರು, ವಿಜ್ಞಾನಿಗಳು ಮತ್ತು ಸಂಶೋಧಕರು ಭಾಗವಹಿಸಿದ್ದರು. ಕಾರ್ಯಕ್ರಮದ ಅಂಗವಾಗಿ ಫಲಕ ಅನಾವರಣ, ಆಪ್ಟಿಕ್ಸ್ ಪ್ರಯೋಗಾಲಯದಲ್ಲಿ ಹೊಸ ಉಪಕರಣಗಳ ಉದ್ಘಾಟನೆ ಹಾಗೂ ಸಂಸ್ಥೆಯ ಕಾರ್ಯಚಟುವಟಿಕೆಗಳ ಪ್ರಸ್ತುತಿಗಳು ನಡೆಯಿತು.

ಮೂರು ಶತಮಾನಗಳ ಇತಿಹಾಸ ಹೊಂದಿರುವ ಮದ್ರಾಸ್ ವೀಕ್ಷಣಾಲಯದಿಂದ ಆರಂಭವಾದ ಭಾರತದ ಖಗೋಳ ಸಂಶೋಧನೆಯ ಪಯಣವನ್ನು ಉಲ್ಲೇಖಿಸಿದ ಸಚಿವರು, ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆಯು ಜಾಗತಿಕ ಮಟ್ಟದಲ್ಲಿ ತನ್ನದೇ ಆದ ಸ್ಥಾನವನ್ನು ನಿರ್ಮಿಸಿಕೊಂಡಿದೆ ಎಂದು ಹೇಳಿದರು.

ಕೊಡೈಕನಾಲ್, ಕವಲೂರು, ಗೌರಿಬಿದನೂರು ಮತ್ತು ಹ್ಯಾನ್ಲೆಯಲ್ಲಿರುವ ವೀಕ್ಷಣಾಲಯಗಳ ಮೂಲಕ ಸೌರ ಹಾಗೂ ರಾತ್ರಿ ಖಗೋಳಶಾಸ್ತ್ರದಲ್ಲಿ ಮಹತ್ವದ ಸಂಶೋಧನೆ ನಡೆಯುತ್ತಿದೆ ಎಂದರು.

ಒಟ್ಟಾರೆ, ಈ ಹೊಸ ಕಟ್ಟಡ ಹಾಗೂ ಮುಂದಿನ ದೂರದರ್ಶಕ ಯೋಜನೆಗಳು ಭಾರತದ ಖಗೋಳ ವಿಜ್ಞಾನ ಕ್ಷೇತ್ರವನ್ನು ಮತ್ತಷ್ಟು ಶಕ್ತಿಶಾಲಿಯಾಗಿಸಲು ನೆರವಾಗಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸಲಾಯಿತು.

# ಪ್ರಕರಣ ಇತ್ಯರ್ಥ



ಬೆಂಗಳೂರುರಾಮನಗರದ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ನ್ಯಾಯಾಧೀಶರಾದ ಅವಿನಾಶ್ ಚಿಂದು ಎಚ್ ಅವರು 11 ವರ್ಷಗಳಿಂದ ವಿಲೇ ಇದ್ದ ಅಸಲು ದಾವೆ ಸಂಖ್ಯೆ.307/2015 ಪ್ರಕರಣವನ್ನು ಪ್ರತಿ ದಿನದ ಲೋಕ್ ಅದಾಲತ್‌ನಲ್ಲಿ ಬಗೆಹರಿಸಿದ್ದು, ಈ ಪ್ರಕರಣವು ಮುಕ್ತಾಯಗೊಳ್ಳುವಲ್ಲಿ ಮತ್ತು ಬಗೆಹರಿಸುವಲ್ಲಿ ಪಕ್ಷಗಾರರ ಪರ ಹಾಜರಾಗಿದ್ದ ವಕೀಲರುಗಳಾದ ಶಿವಸ್ವಾಮಿ, ಜಿ.ವಿ. ಶ್ರೀನಿವಾಸ್, ಆನಂದ ಭೈರವ, ಶಿವಣ್ಣಗೌಡ ಅವರು ಪಕ್ಷಗಾರರನ್ನು ಮನ ಒಲಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುತ್ತಾರೆ.

ಈ ಕೇಸಿನ 5ನೇ ಪ್ರತಿವಾದಿಯಾಗಿದ್ದ 82 ವರ್ಷದ ಸಿಂಗಮ್ಮ ಅವರು ನ್ಯಾಯಾಲಯದ ಒಳಗೆ ಬರಲು ಸಾಧ್ಯವಿಲ್ಲದೇ ನ್ಯಾಯಾಲಯದ ಹೊರಗೆ ಕಾರಿನಲ್ಲಿ ಕುಳಿತಿದ್ದು, ನ್ಯಾಯಾಧೀಶರು ಸ್ವತಃ ಅಲ್ಲಿಗೆ ಹೋಗಿ ವಿಚಾರಣೆ ಮಾಡಿ ಆಕೆಯ ಒಪ್ಪಿಗೆಯನ್ನು ವಕೀಲರ ಸಮಕ್ಷಮ ಪಡೆದು ಪ್ರಕರಣವನ್ನು ಇತ್ಯರ್ಥಪಡಿಸಿರುತ್ತಾರೆ.

ಈ ಕೇಸಿನಲ್ಲಿ ಐದು ಜನ ಹಿರಿಯ ನಾಗರಿಕರಿದ್ದು, ಪ್ರಕರಣವನ್ನು ಪ್ರತಿ ದಿನದ ಲೋಕ್ ಆದಾಲತ್‌ನಲ್ಲಿ ಬಗೆಹರಿಸಲಾಯಿತು ಮತ್ತು ನ್ಯಾಯಾಲಯದ ಆದೇಶದ ಮೇಲೆ ಯಾವುದೇ ಮೇಲ್ಮನವಿ ಇಲ್ಲ ಎಂದು ಪಕ್ಷಗಾರರಿಗೆ ತಿಳಿಸಲಾಗಿರುತ್ತದೆ. ಈ ರೀತಿ ಸದರಿ ಪ್ರಕರಣವು ಇಬ್ಬರು ಪಕ್ಷಗಾರರಿಗೂ ಅನುಕೂಲವಾಗುವಂತೆ ನ್ಯಾಯಾಲಯದಲ್ಲಿ ಸುಖಾಂತ್ಯವನ್ನು ಕಂಡಿರುತ್ತದೆ.

# ಭಗವಾನ್ ಬುದ್ಧ ಜಯಂತಿ ಆಚರಣೆ

ಬೆಂಗಳೂರು

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವತಿಯಿಂದ ಭಗವಾನ್ ಬುದ್ಧ ಜಯಂತಿಯನ್ನು ಮೇ.1ರಂದು ಬೆಳಗ್ಗೆ 11 ಗಂಟೆಗೆ ದೇವನಹಳ್ಳಿ ಟೌನ್‌ನ ಡಾ॥ ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಚರಿಸಲಾಗುತ್ತದೆ.

ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು, ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಜಯಂತಿ ಉದ್ಘಾಟನೆ ಮತ್ತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ತಂಗಡಗಿ ಶಿವರಾಜ್ ಸಂಗಪ್ಪ, 5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ, ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಹೊಸಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ಶರತ್ ಕುಮಾರ್ ಬಚ್ಚೇಗೌಡ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ. ಕೆ. ಸುಧಾಕರ್,

ವಿಧಾನ ಪರಿಷತ್ ಶಾಸಕರಾದ ಎಸ್. ರವಿ, ಪುಟ್ಟಣ್ಣ, ರಾಮೋಜಿ ಗೌಡ, ಎನ್. ನಾಗರಾಜ್ (ಎಂ.ಟಿ.ಬಿ), ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜ್, ನೆಲಮಂಗಲ ಶಾಸಕ ಎನ್. ಶ್ರೀನಿವಾಸ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ. ರಾಜಣ್ಣ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶಾಭಿವೃದ್ಧಿ ಯೋಜನಾಪ್ರಾಧಿಕಾರ ಅಧ್ಯಕ್ಷ ವಿ. ಶಾಂತಕುಮಾರ್, ದೇವನಹಳ್ಳಿ ತಾಲ್ಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸಿ. ಜಗನ್ನಾಥ್, ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ ಆಡಳಿತಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಪಿ.ಸಿ. ಜಾಫರ್ ಉಪಸ್ಥಿತರಿರಲಿದ್ದಾರೆ.

## ನೀರಿನ ಅದಾಲತ್ ಕಾರ್ಯಕ್ರಮ

ಬೆಂಗಳೂರು

ಕೋಲಾರ ನಗರಸಭೆಯಿಂದ ನಗರದಲ್ಲಿನ ಎಲ್ಲಾ 35 ವಾರ್ಡ್‌ಗಳಲ್ಲಿನ ನೀರಿನ ಅದಾಲತ್ ಕಾರ್ಯಕ್ರಮವನ್ನು ನಗರಸಭೆ ಕಛೇರಿಯಲ್ಲಿ ಮೇ–2026ರ ಮಾಹೆಯಲ್ಲಿ ಮೇ 05, 15 ಮತ್ತು 25 ರಂದು ಬೆಳಿಗ್ಗೆ 10 ಗಂಟೆಯಿಂದ 1 ಗಂಟೆಯವರೆಗೆ ಆಯೋಜಿಸಲಾಗಿರುತ್ತದೆ.

ಕುಡಿಯುವ ನೀರಿನ ಕೊರತೆ, ಲಭ್ಯತೆ ಹಾಗೂ ನೀರು ಸರಬರಾಜು ಸಂಬಂಧಿತ ಸಾರ್ವಜನಿಕ ಅಹವಾಲುಗಳನ್ನು ಪರಿಶೀಲಿಸುವುದಾಗಿದೆ. ತಮ್ಮ ತಮ್ಮ ವಾರ್ಡ್‌ಗಳಲ್ಲಿ ನೀರು ಸರಬರಾಜು ಸಂಬಂಧಿತ ಸಮಸ್ಯೆಗಳು ಮತ್ತು ಅಹವಾಲುಗಳನ್ನು ನೋಂದಾಯಿಸಿಕೊಳ್ಳಬೇಕು. ನೋಂದಾಯಿಸಲಾದ ಅಹವಾಲುಗಳನ್ನು ಗಂಭೀರವಾಗಿ ಪರಿಗಣಿಸಿ, ಸಾಧ್ಯವಾದಷ್ಟು 24 ಗಂಟೆಗಳೊಳಗಾಗಿ ಸಮಸ್ಯೆಯನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ. ನಗರದ ಎಲ್ಲಾ ನಾಗರಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಟ್ಟಡಕಾರ್ಮಿಕರಿಗೆ ವಿಶ್ರಾಂತಿ ನೀಡಲು ಸೂಚನೆ

ಬೆಂಗಳೂರು

ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನಅತೀ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕಟ್ಟಡ ಕಾರ್ಮಿಕರಿಗೆ ಮಧ್ಯಾಹ್ನ 1 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿಶ್ರಾಂತಿ ನೀಡುವುದು ಗುತ್ತಿದಾರರ, ಮಾಲೀಕರ ಜವಾಬ್ದಾರಿಯಾಗಿದೆ ಎಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಟ್ಟಡ ಕಾಮಗಾರಿ ಸ್ಥಳಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಂಭವ ಇರುವುದರಿಂದ, ಕಾರ್ಮಿಕರ ಆರೋಗ್ಯದ ಹಿತದೃಷ್ಟಿ ಹಿನ್ನೆಯಲ್ಲಿ ಮಧ್ಯಾಹ್ನದ ವೇಳೆ ವಿಶ್ರಾಂತಿಗೆ ಅವಕಾಶ ನೀಡುವಂತೆ ಹಾಗೂ ಕಾರ್ಮಿಕರ ಆರೋಗ್ಯವನ್ನು ರಕ್ಷಿಸಿಕೊಳ್ಳಲು ಕೆಲವು ಮಾರ್ಗಸೂಚಿಗಳನ್ನು ಅನುಸರಿಸಲು ಸೂಚಿಸಿದ್ದಾರೆ.

ಕಾರ್ಮಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ ಮತ್ತು ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆಯನ್ನು ನೀಡುವುದು ಗುತ್ತಿಗೆದಾರರ, ಮಾಲೀಕರ ಜವಾಬ್ದಾರಿಯಾಗಿದ್ದು, ಈ ಬಗ್ಗೆ ಸೂಕ್ತ ಕ್ರಮವಹಿಸಬೇಕು. ಈ ಕುರಿತು ಯಾವುದೇ ಅಹಿತಕರ ಘಟನೆಗಳು ನಡೆದಲ್ಲಿ ಸಂಬಂಧಿಸಿದ ಗುತ್ತಿಗೆದಾರರು, ಮಾಲೀಕರುಗಳೇ ನೇರ ಹೊಣೆಗಾರರಾಗಿರುತ್ತಾರೆಂದು



ಮಧುಗಿರಿ ಪಟ್ಟಣದ ಶ್ರೀ ಶಂಕರ ಮಠದಲ್ಲಿ ಶ್ರೀ ನರಸಿಂಹಸ್ವಾಮಿಯವರ ಜಯಂತಿ ನಡಸಲಾಯಿತು. ಈ ಸಂಧರ್ಭದಲ್ಲಿ ವೇದ ಬ್ರಹ್ಮ ಶ್ರೀ ಕೆ.ನಾಗರಾಜ್ ಶಾಸ್ತ್ರೀ, ಶಂಕರ ಸೇವಾ ಸಮಿತಿ ಅಧ್ಯಕ್ಷ ಬಿ. ಸತ್ಯನಾರಾಯಣ್, ಬ್ರಾಹ್ಮಣ ಸಂಘದ ತಾಲ್ಲೂಕು ಅಧ್ಯಕ್ಷ ದತ್ತಾತ್ರೇಯ ಖಂಜಾಚಿ ಕೆ.ಲಕ್ಷ್ಮೀ ಪ್ರಸಾದ್, ನಿರ್ದೇಶಕರುಗಳಾದ ಕೆ.ನಾರಾಯಣ್, ಭೀಮೇಶ್ ಶರ್ಮಾ, ವಿಪ್ರ ಸಮುದಾಯದ ಮುಖಂಡರಾದ ನಾಗೇಶ್ವರ್ ರಾವ್, ಅಶ್ವತ್, ಕಿರಣ್, ಚೇತನ್, ಪುರಸಭೆ ಮಾಜಿ ಅಧ್ಯಕ್ಷ ಲಾಲಾಪೇಟೆ ಮಂಜುನಾಥ್, ಅನಂತಕೃಷ್ಣ ರಾಜು, ಭಾಸ್ಕರ್ ಇದ್ದರು.

# ರೈತರ ಮೇಲೆ ಪೋಲಿಸರ ಹಲ್ಲೆ ಖಂಡಿಸಿ ಪ್ರತಿಭಟನೆ

ಬೆಂಗಳೂರು

ಚಿಕ್ಕಬಳ್ಳಾಪುರದ ಜಿಲ್ಲಾ ಕಚೇರಿಯ ಬಳಿ ನ್ಯಾಯಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರ ಮೇಲೆ ದರ್ಪ ತೋರಿಸಿ ಹಲ್ಲೆ ಮಾಡಿದ ಪೋಲಿಸರನ್ನು ಕೂಡಲೇ ಅಮಾನತ್ತು ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ್ ಬಣ) ವತಿಯಿಂದ ಪಟ್ಟಣದ ಪೊಲೀಸ್ ಠಾಣೆಯ ಮುಂಭಾಗ ಪ್ರತಿಭಟನೆ ನಡೆಸಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮುತ್ತುರಾಜ್ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಮಯದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಹೆಚ್.ಪಿ.ರಾಮನಾಥ್, ಸುಮಾರು ದಿನಗಳಿಂದ ನಮ್ಮ ರೈತರು ಕೆಐಡಿಬಿ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದೇವೆ.

ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ ರೈತರು ಸೇರಿದಂತೆ ಜಿಲ್ಲೆಯ ರೈತರು ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಶಾಂತಿಯುತ ಚಳುವಳಿ ಮಾಡಲಾಗುತ್ತಿದೆ. ಕಳೆದೆರಡು ದಿನಗಳ ಹಿಂದೆ ಚಿಕ್ಕಬಳ್ಳಾಪುರದಲ್ಲಿ ನಡೆಯುತ್ತಿದ್ದ ಕೆಡಿಪಿ ಸಭೆಯಲ್ಲಿ ಸಚಿವರನ್ನು ಭೇಟಿ ಮಾಡಲು ಹೋದಾಗ ಅಲ್ಲಿದ್ದ ಪೊಲೀಸರು ರೈತರ ಮೇಲೆ ದರ್ಪ ತೋರಿಸಿ ಹಲ್ಲೆ ನಡೆಸಿದ್ದಾರೆ.

ಸುಮಾರು 2823 ಎಕರೆಯಷ್ಟು ಜಮೀನನ್ನು ಕೆಐಡಿಬಿ ರವರು ಭೂ ಸ್ವಾಧೀನ ಪ್ರಕ್ರಿಯೆಯನ್ನು ನಡೆಸುತ್ತಿದ್ದಾರೆ. ಆದರೆ ನಮ್ಮ ರೈತರು ಕೃಷಿ ಯೋಗ್ಯ



ಭೂಮಿಯನ್ನು ನಾವು ಕೊಡುವುದಿಲ್ಲ ಎಂದು ಧರಣಿ ಮಾಡುತ್ತಿದ್ದಾರೆ.

ಈ ಧರಣಿಯನ್ನು ಹತ್ತಿಕ್ಕಲು ಪೊಲೀಸರನ್ನು ಬಳಸಿಕೊಂಡು ರೈತರ ಮೇಲೆ ಹಲ್ಲೆ ಮಾಡಿರುವುದು ಖಂಡನಾರ್ಹ ಎಂದರು.

ಇನ್ನೂ ನಾವು ಕೃಷಿಗೆ ಯೋಗ್ಯವಲ್ಲದ ಭೂಮಿಯಲ್ಲಿ ಕೈಗಾರಿಕಾ ಪ್ರದೇಶ ಮಾಡಿದರೇ ನಾವು ವಿರೋಧ ಮಾಡಲ್ಲ. ಆದರೆ ಕೃಷಿ ಯೋಗ್ಯ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆ ಮಾಡುತ್ತಿರುವ ಕಾರಣದಿಂದ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ.

ಪ್ರತಿಭಟನಾ ನಿರತ ರೈತರಿಗೆ ರಕ್ಷಣೆ ಕೊಡುವಲ್ಲ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ. ರಕ್ಷಣೆ ಕೊಡಲು ವಿಫಲವಾಗುವುದರ ಜೊತೆಗೆ ಪ್ರತಿಭಟನಾ ನಿರತ ರೈತರ ಮೇಲೆಯೇ ಹಲ್ಲೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದಾಧ್ಯಂತ ಪೊಲೀಸ್ ಠಾಣೆಗಳ ಮುಂಭಾಗ ಪ್ರತಿಭಟನೆ ನಡೆಸಿ ಮನವಿ ಪತ್ರ ಸಲ್ಲಿಸಲಾಗಿದೆ. ಕೂಡಲೇ ರೈತರ ಮೇಲೆ ಹಲ್ಲೆ ನಡೆಸಿದ ಎಲ್ಲಾ ಪೊಲೀಸರನ್ನು ಅಮಾನತ್ತು ಮಾಡಬೇಕು ಇಲ್ಲವಾದಲ್ಲಿ ಮತ್ತಷ್ಟು ಉಗ್ರ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಮಯದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಸೋಮಶೇಖರ್, ಉಪಾಧ್ಯಕ್ಷ ರವೀಂದ್ರರೆಡ್ಡಿ, ಗೌರವಾಧ್ಯಕ್ಷ ವೆಂಕಟರೋಣಪ್ಪ, ಮುಖಂಡರಾದ ರಾಮರೆಡ್ಡಿ, ಶ್ರೀನಿವಾಸ್, ಶಿವಪ್ಪ, ಚೌಡರೆಡ್ಡಿ, ವೆಂಕಟರೆಡ್ಡಿ, ದೇವರಾಜು ಸೇರಿದಂತೆ ಹಲವರು ಇದ್ದರು.

# ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆಗಾಗಿ ಪ್ರತಿಭಟನೆ



ಬೂದಿಕೋಟೆ

ತಾಲೂಕಿನ ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆ ನಿರ್ಮಿಸಲು ಅನುದಾನ ಬಿಡುಗಡೆ ಮಾಡಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನಿವಾರಿಸುವಂತೆ ಆಗ್ರಹಿಸಿ ಮೇ 4ರಂದು ರೈತ ಸಂಘದಿಂದ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, “ಬೆಂಗಳೂರು–ಚೆನ್ನೈ ಮಾರ್ಗಕ್ಕೆ ಸಂಪರ್ಕ ಕಲ್ಪಿಸುವ ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆ ನಿರ್ಮಾಣದ ಬೇಡಿಕೆಯನ್ನು ಕಳೆದ ಎರಡು ದಶಕಗಳಿಂದ ರೈತರು, ಕೂಲಿಕಾರ್ಮಿಕರು ಹಾಗೂ ಸ್ಥಳೀಯರು ಮುಂದಿಟ್ಟಿದ್ದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿಲ್ಲ” ಎಂದು ಆರೋಪಿಸಿದರು.

“ಪ್ರತಿದಿನ ಗೇಟ್ ಸುಮಾರು 30 ನಿಮಿಷಕ್ಕೊಮ್ಮೆ ಮುಚ್ಚಲಾಗುವುದರಿಂದ ವಿದ್ಯಾರ್ಥಿಗಳು, ರೈತರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ತುರ್ತು ಪರಿಸ್ಥಿತಿಗಳಲ್ಲಿಯೂ ಸಂಚಾರ ಅಡಚಣೆ ಉಂಟಾಗಿ ಅಪಘಾತಗಳು ಹಾಗೂ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ರೈತರು ತರಕಾರಿ ಸಾಗಿಸಲು ಕೂಡ ಸಂಕಷ್ಟ ಪಡುತ್ತಿದ್ದಾರೆ” ಎಂದು ಹೇಳಿದರು.

ಸಂಸದರು ಈಗಾಗಲೇ ಕೇಂದ್ರ ರೈಲ್ವೆ ಸಚಿವರೊಂದಿಗೆ ಚರ್ಚಿಸಿ ಮೇಲುಸೇತುವೆ ನಿರ್ಮಾಣಕ್ಕೆ –28 ಕೋಟಿ ಅನುದಾನ ಮಂಜೂರು ಮಾಡಿಸಿಕೊಂಡಿದ್ದು, ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಆರಂಭಿಸಬೇಕು ಎಂದು ಒತ್ತಾಯಿಸಿದರು.

ತಾ. ಅಧ್ಯಕ್ಷ ಕದರಿನತ್ತ ಅಪ್ಪೂಜಿರಾವ್ ಮಾತನಾಡಿ, “ರೈಲು ನಿಲ್ದಾಣಗಳಲ್ಲಿ ನೀರು, ಶೌಚಾಲಯ ಹಾಗೂ ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆ ಇದೆ. ರೈಲುಗಳಲ್ಲಿ ಭದ್ರತೆ ಕಡಿಮೆಯಾಗಿದ್ದು, ಟಿಕೆಟ್ ಇಲ್ಲದೇ ಪ್ರಯಾಣಿಸುವವರ ಸಂಖ್ಯೆ ಹೆಚ್ಚುತ್ತಿದೆ. ಭೋಗಿಗಳಲ್ಲಿ ಶೌಚಾಲಯ ಸ್ವಚ್ಛತೆ ಇಲ್ಲ, ಕುಡಿಯುವ ನೀರಿನ ವ್ಯವಸ್ಥೆಯೂ ಇಲ್ಲ. ಪ್ರಯಾಣಿಕರು ಸಂಕಷ್ಟ ಅನುಭವಿಸುತ್ತಿದ್ದಾರೆ” ಎಂದು ಆರೋಪಿಸಿದರು.

ಈ ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ಮೇ 4ರಂದು ಕಾಮಸಮುದ್ರ ರೈಲ್ವೆ ಗೇಟ್ ಎದುರು ಪ್ರತಿಭಟನೆ ನಡೆಸಿ ನ್ಯಾಯ ಪಡೆಯಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಈಕಂಬಳ್ಳಿ ಮಂಜುನಾಥ, ಕಾಮಸಮುದ್ರ ಹೋಬಳಿ ಅಧ್ಯಕ್ಷ ಮುನಿಕೃಷ್ಣ, ಬೀಮಗಾನಹಳ್ಳಿ ಮುನಿರಾಜು, ಸಂತೋಷ್, ಲಕ್ಷ್ಮಣ್, ಗೋವಿಂದಪ್ಪ, ಪುತ್ತೇರಿರಾಜು, ಗಿರೀಶ್, ಕಿರಣ್, ಚಾಂದ್ ಪಾಷ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಂಗಳೂರು ಮಳೆ: ಸಾವಿನ ಸಂಖ್ಯೆ 10ಕ್ಕೆ ಏರಿಕೆ

ಬೆಂಗಳೂರು

ಮಳೆಯ ಅವಾಂತರಕ್ಕೆ ಬೆಂಗಳೂರಿನಲ್ಲಿ ಮೃತಪಟ್ಟವರ ಸಂಖ್ಯೆ 10ಕ್ಕೆ ಏರಿಕೆಯಾಗಿದೆ. ಮನೆಯ ಮೇಲ್ಚಾವಣಿ, ಸಿಮೆಂಟ್ ಇಟ್ಟಿಗೆ ಬಿದ್ದು ವ್ಯಕ್ತಿಯೋರ್ವ ಮೃತಪಟ್ಟಿರುವ ಘಟನೆ ಚಾಮರಾಜಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ವ್ಯಕ್ತಿಯನ್ನು ಮಂಜುನಾಥ್ ಎಂದು ಗುರುತಿಸಲಾಗಿದ್ದು, ವಿಕ್ಟೋರಿಯಾ ಆಸ್ಪತ್ರೆಗೆ ಮಂಜುನಾಥ್ ಮೃತದೇಹ ಶಿಫ್ಟ್ ಮಾಡಲಾಗಿದೆ. ಮನೆಯ ಮೇಲಿನ ಶೀಟ್ ಹಾರದಂತೆ ಕಲ್ಲು ಇಡಲಾಗಿತ್ತು. ಗಾಳಿ ಮಳೆಗೆ ಶೀಟ್ ಬಿದ್ದಿದ್ದು ಈ ವೇಳೆ ಶೀಟ್ ಮೇಲಿಟ್ಟಿದ್ದ ಕಲ್ಲು ಮನೆಯಲ್ಲಿ ಮಲಗಿದ್ದ ಮಂಜುನಾಥ್ ಮೇಲೆ ಬಿದ್ದ ಪರಿಣಾಮ ಸಾವು ಸಂಭವಿಸಿದೆ.

ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು ಸಂಭವಿಸಿದ ಘೋರ ದುರಂತದಲ್ಲಿ ಮಗು ಸೇರಿ ಒಟ್ಟು 7 ಜನ ದಾರುಣವಾಗಿ ಮೃತಪಟ್ಟಿದ್ದರು. ಬೆಂಗಳೂರಿನ ಜೆಸಿ ನಗರದ ಮೊಹಮ್ಮದ್ ಅಬ್ದುಲ್ (52), ಡಿ.ಜೆ. ಹಳ್ಳಿಯ ಫಯಾಜ್ ಅಹ್ಮದ್ (39), ಕೆ.ಜೆ.ಹಳ್ಳಿಯ ಮುಸಾವಿರ್ ಬೇಗಂ (6), ಕೇರಳದ ಎರ್ನಾಕುಲಂನ ಸ್ಮಿತಾ (47) ಹಾಗೂ ಲತಾ (57), ಕಾರ್ ಸ್ಟಿಕ್ಕರಿಂಗ್ ಕೆಲಸ ಮಾಡುತ್ತಿದ್ದ ಅಸ್ಸಾಂನ ನಸೀಮುಲ್ಲಾ (19) ಮತ್ತು ಉತ್ತರ ಪ್ರದೇಶದ ವ್ಯಾಪಾರಿ ಸಲಾವುದ್ದೀನ್ ಅನ್ಸಾರಿ (36) ಅವಘಡದಲ್ಲಿ ಪ್ರಾಣಬಿಟ್ಟಿದ್ದರು. ಗಾಳಿ ಮಳೆಯ ಕಾರಣಕ್ಕೆ ಪಾದಚಾರಿಗಳು ಮತ್ತು ಬೀದಿ ಬದಿಯ ವ್ಯಾಪಾರಿಗಳು ಬೌರಿಂಗ್ ಆಸ್ಪತ್ರೆಯ ಹಳೆಯ ಕಾಂಪೌಂಡ್ ಗೋಡೆಯ ಕೆಳಗೆ ಆಶ್ರಯ ಪಡೆದಿದ್ದರು. ಮಳೆಯ ತೀವ್ರತೆಗೆ ದುರ್ಬಲವಾಗಿದ್ದ ಗೋಡೆ ಏಕಾಏಕಿ ಕುಸಿದ ಪರಿಣಾಮ ಅವಶೇಷಗಳಡಿ ಸಿಲುಕಿದವರ ಪೈಕಿ 7 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದರು.

### ಸಬ್‌ಇನ್ಸ್‌ಪೆಕ್ಟರ್ ಸಿ.ನಾರಾಯಣಸ್ವಾಮಿರಿಗೆ

# ಬೀಳ್ಕೊಡುಗೆ

ಬೆಂಗಳೂರು



ಬೆಂಗಳೂರು

ಪೊಲೀಸ್ ಇಲಾಖೆಯಲ್ಲಿ ಸುಮಾರು 36 ವರ್ಷಗಳ ಕಾಲ ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಸಿ.ನಾರಾಯಣಸ್ವಾಮಿ ಅವರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಗೌರವಪೂರ್ಣವಾಗಿ ಬೀಳ್ಕೊಡುಗೆ ನೀಡಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಆಡಳಿತಾಧಿಕಾರಿ ಎಸ್. ಅಶೋಕ್, “ವಿಭಾಗದಲ್ಲಿ ಸೇವೆ ಸಲ್ಲಿಸಿದವರನ್ನು ಇಲಾಖೆ ಎಂದಿಗೂ ಮರೆಯುವುದಿಲ್ಲ. ತಮ್ಮ ಕರ್ತವ್ಯವನ್ನು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸಿದ ಸಿ. ನಾರಾಯಣಸ್ವಾಮಿ ಅವರು ಅಧಿಕಾರಿಗಳು ಮತ್ತು ಸಾರ್ವಜನಿಕರ ವಿಶ್ವಾಸ ಗಳಿಸಿದ್ದಾರೆ. ಅವರ ಸೇವೆ ಇಲಾಖೆಗೆ ಹೆಮ್ಮೆಯಾಗಿದೆ. ನಿವೃತ್ತಿ ಜೀವನ ಸುಖಕರ ಹಾಗೂ ಆರೋಗ್ಯಕರವಾಗಿರಲಿ” ಎಂದು ಶುಭ ಹಾರೈಸಿದರು.

ಬಳಿಕ ಸನ್ಮಾನ ಸ್ವೀಕರಿಸಿ ಮಾತನಾಡಿದ ಸಿ. ನಾರಾಯಣಸ್ವಾಮಿ, “ನನ್ನ ಸೇವಾ ಅವಧಿಯಲ್ಲಿ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕೆಲಸ ಮಾಡಿದ್ದೇನೆ ಎಂಬ ಆತ್ಮತೃಪ್ತಿ ಇದೆ. ಕರ್ತವ್ಯವನ್ನು ಮೊದಲಿಗೆಯಾಗಿ ಕಂಡು ಕುಟುಂಬದ ಹಲವು ಕಾರ್ಯಕ್ರಮಗಳಲ್ಲಿ ಭಾಗಿಯಾಗಲು ಸಾಧ್ಯವಾಗಲಿಲ್ಲ ಎಂಬ ನೋವು ಇದೆ. ಆದರೂ ನನಗೆ ನೀಡಿದ ಎಲ್ಲಾ ಜವಾಬ್ದಾರಿಗಳನ್ನು ನಿಷ್ಠೆಯಿಂದ ನಿರ್ವಹಿಸಿದ್ದೇನೆ. ಈ ಸೇವೆ ಅವಕಾಶ ನೀಡಿದ ಪೊಲೀಸ್ ಇಲಾಖೆಗೆ ನಾನು ಸದಾ ಋಣಿ” ಎಂದು ಹೇಳಿದರು.

ತಮ್ಮ ವೃತ್ತಿಜೀವನವನ್ನು ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಆರಂಭಿಸಿದ ಅವರು, ಬಳಿಕ ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಗ್ರಾಮಾಂತರ, ಶಿಡ್ಲಘಟ್ಟ ನಗರ, ಮಂಚೇನಹಳ್ಳಿ ಹಾಗೂ ಚಿಂತಾಮಣಿ ಗ್ರಾಮಾಂತರ ಠಾಣೆಗಳಲ್ಲಿ ಸೇವೆ ಸಲ್ಲಿಸಿ 36 ವರ್ಷಗಳಿಗೂ ಅಧಿಕ ಅವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ಸಮಾರಂಭದಲ್ಲಿ ಅವರಿಗೆ ಶಾಲು ಹೊದಿಸಿ, ಹಣ್ಣು–ಹಂಪಲು, ಸ್ಮರಣಿಕೆ ಹಾಗೂ ಸೇವಾ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಅವರ ಪತ್ನಿ ಲಕ್ಷ್ಮಿ ನಾರಾಯಣಸ್ವಾಮಿ, ಪುತ್ರರಾದ ಮಂಜುನಾಥ್ ಮತ್ತು ಚಂದನ್ ಸೇರಿದಂತೆ ಶಾಖಾ ಅಧೀಕ್ಷಕರಾದ ಶ್ರೀನಿವಾಸರೆಡ್ಡಿ, ಮಹದೇವ್, ಆಪ್ತ ಸಹಾಯಕಿ ಶಹತಾಜ್ ಹಾಗೂ ಸಿಬ್ಬಂದಿ ರವಿಶಂಕರ್ ನಾಯಕ್ ಮತ್ತು ಇತರರು ಉಪಸ್ಥಿತರಿದ್ದರು.

## ಪಕ್ಷದ ಸಂಘಟನೆಗೆ ಶ್ರಮಿಸಲು ಜಿಲ್ಲಾಧ್ಯಕ್ಷ ಹೆಚ್.ನಿಂಗಪ್ಪ ಮನವಿ

ಬೆಂಗಳೂರು

ನಗರಸಭೆ ಮಾಜಿ ಅಧ್ಯಕ್ಷ ಟಿ.ಹೆಚ್. ಜಯರಾಮ್ ಅವರು ತುಮಕೂರು ನಗರ ಜೆಡಿಎಸ್ ಅಧ್ಯಕ್ಷರಾಗಿ ನೂತನವಾಗಿ ನೇಮಕವಾದರು.

ಗುರುವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ ಅವರು ಟಿ.ಹೆಚ್. ಜಯರಾಮ್ ಅವರನ್ನು ನಗರ ಅಧ್ಯಕ್ಷರನ್ನಾಗಿ ನೇಮಕ ಮಾಡಿ, ನೇಮಕಾತಿ ಪತ್ರ ವಿತರಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ, ವಿವಿಧ ಘಟಕಗಳ ಪದಾಧಿಕಾರಿಗಳನ್ನು ಮುಂದಿನ ದಿನಗಳಲ್ಲಿ ನೇಮಕ ಮಾಡಲಾಗುವುದು. ಪಕ್ಷದಲ್ಲಿ ಹಲವಾರು ವರ್ಷಗಳಿಂದ ದುಡಿದ ಬಹಳಷ್ಟು ಹಿರಿಯರಿದ್ದಾರೆ. ಎಲ್ಲರಿಗೂ ಅಧಿಕಾರ ನೀಡಲು ಅವಕಾಶವಾಗುವುದಿಲ್ಲ. ಆದರೆ ನೇಮಕವಾದ ಪದಾಧಿಕಾರಿಗಳೊಂದಿಗೆ ಉಳಿದವರು ಸಹಕರಿಸಿ ಪಕ್ಷ ಸಂಘಟನೆಗೆ ಕಾಳಜಿವಹಿಸಬೇಕು ಎಂದು ಮನವಿ ಮಾಡಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಜೆಡಿಎಸ್ ಅನ್ನು ಬಲಪಡಿಸಿ ಅಧಿಕಾರ ಹಿಡಿಯಲು ಎಲ್ಲಾ ಮುಖಂಡರು, ಕಾರ್ಯಕರ್ತರು ಶ್ರಮಿಸಬೇಕು. ಮುಂದಿನ ವಿಧಾನಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರಬೇಕು. ಹೆಚ್.ಡಿ. ಕುಮಾರಸ್ವಾಮಿಯವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕು ಎಂಬ ಕಾರ್ಯಕರ್ತರ ಅಪೇಕ್ಷೆ ಈಡೇರಲಿ ಎಂದು ಹೇಳಿದರು.

ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ಮುಖಂಡರಾದ ಟಿ.ಎಲ್. ಕುಂಭಯ್ಯ, ಎಸ್. ಪುಟ್ಟೀರಪ್ಪ, ರಾಜ್ಯ ಹಿರಿಯ ಉಪಾಧ್ಯಕ್ಷ ಗಂಗಣ್ಣ, ರಾಜ್ಯ ಎಸ್ಟಿ ಘಟಕ ಕಾರ್ಯದರ್ಶಿ ಸೋಲಾರ್ ಕೃಷ್ಣಮೂರ್ತಿ, ನಿಕಟಪೂರ್ವ ನಗರ ಅಧ್ಯಕ್ಷ ವಿಜಯ್‌ಗೌಡ, ನಗರಸಭೆ ಮಾಜಿ ಉಪಾಧ್ಯಕ್ಷ ಶ್ರೀನಿವಾಸ್‌ಪ್ರಸಾದ್, ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಟಿ.ಎ. ಬಾಲಕೃಷ್ಣ, ಮೋಹನ್‌ಕುಮಾರ್, ಶ್ರೀನಿವಾಸ್, ಮುಖಂಡರಾದ ಯೋಗಾನಂದಕುಮಾರ್,

# ಬರಗಾಲದಲ್ಲೂ ಬತ್ತದ ‘ಮುನಿಯಮ್ಮ ಬಾವಿ’ ಮೂಕ ಪ್ರಾಣಿಗಳಿಗೆ ಜೀವನಾಡಿ

ಬೂದಿಕೋಟೆ

ರಾಜ್ಯದ ಹಲವೆಡೆ ಬರಗಾಲ ತೀವ್ರಗೊಂಡು ಕೆರೆ–ಕುಂಟೆಗಳು ಸಂಪೂರ್ಣ ಒಣಗಿರುವ ಈ ಸಂದರ್ಭದಲ್ಲೂ ತಾಲೂಕಿನ ಆಲಂಬಡಿ ಗ್ರಾಮದ ‘ಮುನಿಯಮ್ಮ ಬಾವಿ’ ಮಾತ್ರ ಬಿರು ಬಿಸಿಲಿನಲ್ಲೂ ನೀರನ್ನು ಉಳಿಸಿಕೊಂಡು ಅಚ್ಚರಿ ಮೂಡಿಸಿದೆ. ಬೇಸಿಗೆ ಕಾಲದಲ್ಲಿಯೂ ನೀರಿನ ಕೊರತೆ ಇಲ್ಲದೆ ಜೀವಂತವಾಗಿರುವ ಈ ಬಾವಿ, ಸುತ್ತಮುತ್ತಲಿನ ರೈತರು ಹಾಗೂ ಮೂಕ ಪ್ರಾಣಿಗಳಿಗೆ ಜೀವನಾಡಿಯಾಗಿ ಪರಿಣಮಿಸಿದೆ.

ಸುಮಾರು 300 ವರ್ಷಗಳ ಇತಿಹಾಸ ಹೊಂದಿರುವ ಈ ಬಾವಿ, ಸುತ್ತಮುತ್ತಲಿನ



ಜಲಾಶಯಗಳು ಬತ್ತಿಹೋಗಿದ್ದರೂ ನೀರನ್ನು ಉಳಿಸಿಕೊಂಡಿರುವುದು ವಿಶೇಷ. ಮಳೆಯ ಕೊರತೆಯಿಂದ ದನ–ಕರುಗಳು, ಕುರಿ–ಮೇಕೆಗಳಿಗೆ ನೀರಿನ ಅಭಾವ ಉಂಟಾಗಿರುವ ಸಂದರ್ಭದಲ್ಲಿ, ಈ ಬಾವಿಯ ನೀರು ಅವುಗಳಿಗೆ ಅಮೃತದಂತೆ ಪರಿಣಮಿಸಿದೆ.

ಬಿಸಿಲಿನ ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆ, ರೈತರು ಮತ್ತು ಹೈನುಗಾರಿಕೆ ನಡೆಸುವವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಚಟುವಟಿಕೆಗಳು ಕುಂಠಿತಗೊಂಡಿರುವ ಈ ಪರಿಸ್ಥಿತಿಯಲ್ಲಿ, ಆಲಂಬಡಿ ಗ್ರಾಮದ ಮುನಿಯಮ್ಮ ಬಾವಿ ಗ್ರಾಮಸ್ಥರಿಗೆ ಆಶಾಕಿರಣವಾಗಿದೆ.

ಸುತ್ತಮುತ್ತಲಿನ ಹಲವು ಗ್ರಾಮಗಳ ರೈತರು ತಮ್ಮ ಪಶುಗಳಿಗೆ ನೀರು ಒದಗಿಸಲು ಈ ಬಾವಿಯನ್ನೇ ಅವಲಂಬಿಸಿಕೊಂಡಿದ್ದಾರೆ. ಪ್ರತಿದಿನವೂ ಅನೇಕರು ತಮ್ಮ ದನ–ಕರುಗಳನ್ನು ಕರೆದುಕೊಂಡು ಬಂದು ಇಲ್ಲಿ ನೀರು ಕುಡಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ. “ಕೆರೆಗಳು ಬತ್ತಿದರೂ ಮುನಿಯಮ್ಮ ಬಾವಿ ಎಂದಿಗೂ ಬತ್ತುವುದಿಲ್ಲ. ನಮ್ಮ ಪಶುಗಳಿಗೂ ಬದುಕಿಗೂ ಇದು ದೊಡ್ಡ ಆಧಾರವಾಗಿದೆ” ಎಂದು ಸ್ಥಳೀಯರು ಹೇಳುತ್ತಾರೆ.

ಗ್ರಾಮದ ಹಿರಿಯರ ಪ್ರಕಾರ, ಹಲವು ದಶಕಗಳಿಂದ ಬರಗಾಲದ ಸಂದರ್ಭಗಳಲ್ಲಿ ಈ ಬಾವಿ ಜನರಿಗೆ ನೆರವಾಗುತ್ತ ಬಂದಿದೆ. ಈ ಹಿನ್ನೆಲೆದಲ್ಲಿ ಐತಿಹಾಸಿಕ ಮಹತ್ವ ಹೊಂದಿರುವ ಮುನಿಯಮ್ಮ ಬಾವಿಯ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸರ್ಕಾರ ಮುಂದಾಗಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಬರಗಾಲದ ಕಠಿಣ ಸಮಯದಲ್ಲಿಯೂ ‘ಮುನಿಯಮ್ಮ ಬಾವಿ’ ಗ್ರಾಮೀಣ ಬದುಕಿಗೆ ಆಶೆಯ ಸಂಕೇತವಾಗಿ ಬೆಳಗುತ್ತಿದೆ.

# ಸಮತೋಲನ ಗೊಬ್ಬರಗಳ ಬಳಕೆಗೆ ಕರೆ

ರಾಮನಗರ

ರೈತರು ಸಮತೋಲನ ಗೊಬ್ಬರ ಬಳಕೆಗೆ ಆದ್ಯತೆ ನೀಡಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಂಬಿಕಾ ಅವರು ತಿಳಿಸಿದರು.

ರಾಮನಗರದ ಉಪ ಕೃಷಿ ಕಚೇರಿಯಲ್ಲಿ ಬೆಂಗಳೂರಿನ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯದ ಆಶ್ರಯದಲ್ಲಿ ಹಾಗೂ ಅಖಿಲ ಭಾರತ ಸುಸಂಘಟಿತ ಖುಷ್ಕಿ ಬೆಳೆ ಪ್ರಯೋಜನೆ ಮತ್ತು ಕೇಂದ್ರ ಪುರಸ್ಕೃತ ಆತ್ಮ ಯೋಜನೆಯ ಸಹಯೋಗದಲ್ಲಿ ಸಮತೋಲನ ಗೊಬ್ಬರಗಳ ಬಳಕೆಯ ಕುರಿತು ಜಾಗೃತಿ ಮೂಡಿಸಲು ಆಯೋಜಿಸಲಾಗಿದ್ದ ವಿಶೇಷ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಣ್ಣಿನ ಆರೋಗ್ಯ ಕಾಪಾಡಲು ಹಾಗೂ ಉತ್ತಮ ಉತ್ಪಾದನೆ ಪಡೆಯಲು ಸಮತೋಲನ ಗೊಬ್ಬರ ಬಳಕೆ ಅಗತ್ಯವೆಂದು ಹೇಳಿದರು.

ಪ್ರಯೋಜನೆಯ ಮುಖ್ಯಸ್ಥರಾದ ಡಾ. ಮೂಡಲಗಿರಿಯಪ್ಪ ಅವರು, ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ಗೊಬ್ಬರ ಬಳಕೆ ಮಾಡುವ ಮಹತ್ವವನ್ನು ತಿಳಿಸಿ, ವೈಜ್ಞಾನಿಕ ವಿಧಾನಗಳನ್ನು ಅನುಸರಿಸಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಡಾ. ವೆಂಕಟಗೌಡ ಅವರು, ಮಣ್ಣಿನ ಆರೋಗ್ಯ ಕಾಪಾಡಲು ಹಸಿರೆಲೆ ಗೊಬ್ಬರಗಳ ಬಳಕೆ ಅತ್ಯಂತ ಉಪಯುಕ್ತ, ಹಸಿರೆಲೆ ಗೊಬ್ಬರಗಳು ಮಣ್ಣಿಗೆ ಅಗತ್ಯವಾದ ಸಾವಯವ ದ್ರವ್ಯವನ್ನು ಹೆಚ್ಚಿಸಿ, ಮಣ್ಣಿನ ರಚನೆ ಸುಧಾರಿಸಲು ಸಹಾಯ ಮಾಡುತ್ತವೆ ಎಂದು ಹೇಳಿದರು.

ಹಸಿರೆಲೆ ಗೊಬ್ಬರ ಬೆಳೆಗಳಾದ ಅಪ್ಸೆಣಬು, ಚಂಬೆ, ಹುರಳಿ ಹಾಗೂ ಇತರ ಎಲ್ಲಾ ದ್ವಿದಳ ಧಾನ್ಯ ಬೆಳೆಗಳು ಮಣ್ಣಿನಲ್ಲಿ ನೈಸರ್ಗಿಕವಾಗಿ ನೈಟ್ರೋಜನ್ ಸ್ಥಿರೀಕರಣ ಮಾಡುವುದರಿಂದ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುತ್ತವೆ, ಈ ಬೆಳೆಗಳನ್ನು 40–45 ದಿನಗಳಲ್ಲಿ ಬೆಳೆಸಿ, ನಂತರ ಮಣ್ಣಿನಲ್ಲಿ ಮಿಶ್ರಣ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದು ಹೇಳಿದರು.

ಹಸಿರೆಲೆ ಗೊಬ್ಬರಗಳಲ್ಲಿ ಮುಖ್ಯವಾಗಿ ನೈಟ್ರೋಜನ್ ಅಂಶ ಹೆಚ್ಚು ಇರುವುದರ ಜೊತೆಗೆ, ಕೆಲವು ಪ್ರಮಾಣದಲ್ಲಿ ಫಾಸ್ಫರಸ್ ಮತ್ತು ಪೊಟಾಶ್ ಅಂಶಗಳೂ ಲಭ್ಯವಿರುತ್ತವೆ. ಉದಾಹರಣೆಗೆ, ಅಪ್ಸೆಣಬು ಬೆಳೆ ಹೆಚ್ಚು ನೈಟ್ರೋಜನ್ ಒದಗಿಸುವುದರಿಂದ ಮುಂದಿನ ಬೆಳೆಗಳಿಗೆ ಪೋಷಕಾಂಶಗಳ ಕೊರತೆ ಆಗುವುದಿಲ್ಲ ಎಂದು ತಿಳಿಸಿದರು.

ಹಸಿರೆಲೆ ಗೊಬ್ಬರಗಳ ಬಳಕೆಯಿಂದ ಮಣ್ಣಿನ ತೇವಾಂಶ ಕಾಯ್ದುಕೊಳ್ಳಲು ಸಹಾಯವಾಗುತ್ತದೆ, ಕೀಟ ಹಾಗೂ ರೋಗಗಳ ಪ್ರಭಾವ ಕಡಿಮೆಯಾಗುತ್ತದೆ ಹಾಗೂ ರಾಸಾಯನಿಕ ಗೊಬ್ಬರಗಳ ಮೇಲಿನ ಅವಲಂಬನೆ ಕಡಿಮೆಯಾಗುತ್ತದೆ, ಹಸಿರೆಲೆ ಗೊಬ್ಬರಗಳನ್ನು ರೈತರು ತಮ್ಮ ಬೆಳೆ ಚಕ್ರದಲ್ಲಿ ಅಳವಡಿಸಿಕೊಂಡರೆ, ದೀರ್ಘಕಾಲಿಕವಾಗಿ ಮಣ್ಣಿನ ಆರೋಗ್ಯವನ್ನು ಉಳಿಸಿಕೊಳ್ಳಬಹುದು ಮತ್ತು ಉತ್ತಮ ಉತ್ಪಾದನೆ ಪಡೆಯಬಹುದು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕನಕಪುರ, ಮಾಗಡಿ ಹಾಗೂ ಚನ್ನಪಟ್ಟಣ ತಾಲೂಕುಗಳ ಸಹಾಯಕ ಕೃಷಿ ನಿರ್ದೇಶಕರು ಮತ್ತು ಜಿಲ್ಲೆಯ ಎಲ್ಲಾ ತಾಲೂಕುಗಳಿಂದ ರೈತರು ಭಾಗವಹಿಸಿದ್ದರು.

# ಇ–ಪೌತಿ ಖಾತೆ ಸೃಜಿಸಿ ತುಮಕೂರು ಜಿಲ್ಲೆ ರಾಜ್ಯಕ್ಕೆ ಪ್ರಥಮ

ತುಮಕೂರು

ಸರ್ಕಾರದ ನಿರ್ದೇಶನದಂತೆ ಜಾರಿಯಲ್ಲಿರುವ ಇ–ಪೌತಿ ಖಾತಾ ಆಂದೋಲನದಲ್ಲಿ ತುಮಕೂರು ಜಿಲ್ಲೆ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಗಮನಾರ್ಹ ಸಾಧನೆ ಮಾಡಿದೆ.

ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 80,262 ಇ–ಪೌತಿ ಖಾತೆಗಳು ಯಶಸ್ವಿಯಾಗಿ ಸೃಜಿಸಲ್ಪಟ್ಟಿದ್ದು, ಈ ಮೂಲಕ ತುಮಕೂರು ಜಿಲ್ಲೆ ರಾಜ್ಯದಲ್ಲೇ ಮೊದಲ ಸ್ಥಾನವನ್ನು ಅಲಂಕರಿಸಿದೆ.

ಈ ಮಹತ್ವದ ಸಾಧನೆಗೆ ಗ್ರಾಮ ಆಡಳಿತಾಧಿಕಾರಿಗಳು, ರಾಜಸ್ವ ನಿರೀಕ್ಷಕರು, ಶಿರಸ್ತೆದಾರರು, ಭೂಮಿ ತಂತ್ರಾಂಶದ ತಾಂತ್ರಿಕ ಸಮಾಲೋಚಕರಾದ ಬಿಲ್ವ ಪ್ರಸಾದ್ ಮತ್ತು ನಂದಕುಮಾರ್ ಸಮನ್ವಯದ ಸಹಕಾರ ಪ್ರಮುಖ ಕಾರಣವಾಗಿದೆ.

ಈ ಬಗ್ಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಜಿಲ್ಲೆಯ ಎಲ್ಲಾ ಕಂದಾಯ ಇಲಾಖೆ ಸಿಬ್ಬಂದಿಯನ್ನು ಅಭಿನಂದಿಸಿ, ಇದೇ ಉತ್ಸಾಹ ಮತ್ತು ಬದ್ಧತೆಯಿಂದ ಸಾರ್ವಜನಿಕ ಸೇವೆಯಲ್ಲಿ ಮತ್ತಷ್ಟು ಉತ್ತಮ ಸಾಧನೆ ಮಾಡಲು ಕರೆ ನೀಡಿದ್ದಾರೆ.

# ಮೇ.1ರಂದು ಕೆಜಿಎಫ್‌ನಲ್ಲಿ ಬುದ್ಧ ಜಯಂತಿ ಕಾರ್ಯಕ್ರಮ

ಕೆಜಿಎಫ್

ಕೆಜಿಎಫ್ ನಗರದ ಅಶೋಕ ದಮ್ಮಧೂತ ಬುದ್ದ ಸಂಘದ ಆಧ್ಯಾತ್ಮಕ ಮಂದಿರದಲ್ಲಿ ಮೇ.1 ರಂದು ಶುಕ್ರವಾರ ಬುದ್ದ ಜಯಂತಿಯ ಆಚರಣೆ ಕಾರ್ಯಕ್ರಮ ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತಿ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಡಾ॥ ಎಂ.ಆರ್.ರವಿ ಅವರು ಭಾಗವಹಿಸುವರು.

ಮಹಾ ಬುದ್ದ ಸಂಸ್ಥೆಯ ವತಿಯಿಂದ ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತೋತ್ಸವದ ಅಂಗವಾಗಿ ಧಮ್ಮ ಪಾದಉತ್ಸವವು ಇದೇ ಬುದ್ದ ಹುಣ್ಣಿಮೆಯ ಆಚರಣೆ ಕಾರ್ಯಕ್ರಮ ಸಂದರ್ಭದಲ್ಲಿ ವಿಶೇಷವಾದ ರೀತಿಯಲ್ಲಿ ನಡೆಯಲಿದೆ.

ಬೆಂಗಳೂರು ಮಹಾಬೋಧಿ ಸಮಾಜದ ಭಂತೇಜಿ ಧಮ್ಮಚಿತ್ತ ಮಹಾತೀರ, ಕಾರ್ಯದರ್ಶಿ ಭಂತೇಜಿಜೀನವಾಸಂ ಬಿಕ್ಕು, ಅಶೋಕ ದಮ್ಮದತ್ತ ಬೌದ್ದ ಸಮಾಜದ ಕಾರ್ಯದರ್ಶಿ ಭಂತೇಜಿ ಖೇಮಿಂಡೋ ಅವರುಗಳ ಸಾನ್ನಿದ್ಯದಲ್ಲಿ ಹಲವಾರು ಭಂತೇಜಿಗಳು, ಉಪಾಸಕರು ಮತ್ತು ಉಪಾಸಿಕರು ಭಕ್ತಿಭಾವದಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಿಕೊಡುವರು.

ವೈಶಾಖ ಬುದ್ದ ಹುಣ್ಣಿಮೆಯ 2570ನೇ ಪವಿತ್ರ ಬುದ್ದ ಜಯಂತಿ ಹಾಗೂ ಬುದ್ದ ಹುಣ್ಣಿಮೆಯ ಆಚರಣೆ ಕಾರ್ಯಕ್ರಮದಲ್ಲಿ ಸಮಸ್ತ ನಾಗರೀಕ ಬಂಧುಗಳು, ಬುದ್ದನ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಬುದ್ದ ಸಂಘದ ಉಪಾಸಕ ಡಾ॥ ಆರ್.ಪ್ರಭುರಾಂ ಅವರು ಕೋರಿದ್ದಾರೆ.

ಮೇ.1 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಡೆಯುವ ಧಮ್ಮ ಪಾದ ಉತ್ಸವ ಹಾಗೂ ಬುದ್ದ ಜಯಂತಿಯ ಆಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಜಿಲ್ಲಾಧಿಕಾರಿ ಡಾ॥ ಎಂ.ಆರ್.ರವಿ ಅವರನ್ನು ಬುದ್ದಗುರು ಕೆಮೆಂಡೋ ಬಂತೇಜಿ, ಉಪಾಸಕ ಡಾ॥ ಆರ್.ಪ್ರಭುರಾಂ ಅವರುಗಳು ಸಾಂಪ್ರದಾಯಿಕವಾಗಿ ಆಮಂತ್ರಿಸಿದರು.

# ಬಿದರಹಳ್ಳಿ ಕ್ರಾಸ್ ಲಕ್ಷ್ಮೀನರಸಿಂಹಸ್ವಾಮಿಗೆ ಏ.30ರಂದು ತಿರುಕಲ್ಯಾಣೋತ್ಸವ ಸಂಭ್ರಮ

ಕೋಲಾರ

ಕೋಲಾರ–ಬೆಂಗಳೂರು ರಸ್ತೆಯ ಬಿದರಹಳ್ಳಿ ಕ್ರಾಸ್‌ನಲ್ಲಿರುವ ಶ್ರೀಲಕ್ಷ್ಮೀನರಸಿಂಹ ಸ್ವಾಮಿ ದೇವಾಲಯದಲ್ಲಿ ಸ್ವಾಮಿಯ 10ನೇ ವರ್ಷದ ವಾರ್ಷಿಕೋತ್ಸವ ಹಾಗೂ ಜಯಂತಿ,ತಿರುಕಲ್ಯಾಣೋತ್ಸವ ಕಾರ್ಯಕ್ರಮಗಳನ್ನು ಏ.30 ರಂದು ಹಮ್ಮಿಕೊಳ್ಳಲಾಗಿದೆ ಎಂದು ದೇವಾಲಯದ ವ್ಯವಸ್ಥಾಪಕರಾದ ಸಿ.ವಿ.ಶಂಕರಮೂರ್ತಿ ತಿಳಿಸಿದ್ದಾರೆ.

ಏ.30 ರಂದು ಬೆಳಗ್ಗೆ 6–30 ಗಂಟೆಗೆ ಸುಪ್ರಭಾತ ಸೇವೆ,ವೇದ ಪಾರಾಯಣ, ಮೂಲ ದೇವರಿಗೆ ಫಲ ಪಂಚಾಮೃತ, ಅಭಿಷೇಕ, ವಿಶೇಷ ಅಲಂಕಾರವಿದೆ, ಇದೇ ಸಂದರ್ಭದಲ್ಲಿ ಗಣಹೋಮ, ನವಗ್ರಹಹೋಮ, ಮೃತ್ಯುಂಜಯ ಹೋಮ, ಲಕ್ಷ್ಮೀ ನರಸಿಂಹಸ್ವಾಮಿ ಮೂಲ ಮಂತ್ರಹೋಮ ನಡೆಯಲಿದ್ದು, ಕುರುಬೂರಿನ ಭುವನೇಶ್ವರಿ ಕನ್ನಡ ಕಲಾ ಸಂಘದಿಂದ ಭಜನೆ ಸೇವೆ ಇದೆ. ಬೆಳಗ್ಗೆ 10–30ಕ್ಕೆ ತಿರುಕಲ್ಯಾಣೋತ್ಸವ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಅನ್ನದಾಸೋಹವನ್ನು ಕೆ.ಆರ್.ಪುರಂನ ಶೈಲಜಾ ಮತ್ತು ಶ್ರೀಮನೋಹರ್ ಕುಟುಂಬದವರು ಹಮ್ಮಿಕೊಂಡಿದ್ದು, ಹರಿದಾಸ ಸಂಘದ ಅಧ್ಯಕ್ಷ ಹರಾ ನಾಗರಾಜಚಾರ್ಯರು ಉಪಸ್ಥಿತರಿರುವರು.

# ತುಮಕೂರು ವಿವಿಯಲ್ಲಿ ರಾಜ್ಯ ಮಟ್ಟದ ಮಾಧ್ಯಮ ಉತ್ಸವ

ತುಮಕೂರು

ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಹಾಗೂ ವಿಶ್ವವಿದ್ಯಾನಿಲಯ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ವತಿಯಿಂದ ಮೇ 18 ಮತ್ತು 19 ರಂದು 'ಇಂಪ್ರೆಷನ್–2026' ರಾಜ್ಯಮಟ್ಟದ ಮಾಧ್ಯಮ ಉತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಇದರ ಪೋಸ್ಟರ್ ಅನ್ನು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಎಂ. ವೆಂಕಟೇಶ್ವರಲು ಮಂಗಳವಾರ ಅನಾವರಣಗೊಳಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮಾಧ್ಯಮ ಉತ್ಸವವು ವಿದ್ಯಾರ್ಥಿಗಳ ಸೃಜನಶೀಲತೆ ಹಾಗೂ ಪ್ರತಿಭೆಯನ್ನು ಅಭಿವ್ಯಕ್ತಿಸಲು ಪರಿಣಾಮಕಾರಿ ವೇದಿಕೆಯಾಗಲಿ. ರಾಜ್ಯದ ವಿವಿಧ ಭಾಗಗಳ ವಿದ್ಯಾರ್ಥಿಗಳು ತುಮಕೂರು ವಿಶ್ವವಿದ್ಯಾನಿಲಯಕ್ಕೆ ಬಂದು ಭಾಗವಹಿಸುವುದಕ್ಕೆ ಅವಕಾಶವಾಗಲಿ ಎಂದು ಶುಭ ಹಾರೈಸಿದರು.

ಮಾಧ್ಯಮ ಹಬ್ಬವು ವಿಶ್ವವಿದ್ಯಾನಿಲಯದ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ "ಸೃಜಿಸಿ, ಸಂವಹಿಸಿ, ಆಕರ್ಷಿಸಿ – ಮಾಧ್ಯಮದ ಧ್ವನಿಯಾಗಿ" ಎಂಬ ಘೋಷವಾಕ್ಯದೊಂದಿಗೆ ನಡೆಯಲಿದೆ. ಹನ್ನೆರಡು ವಿವಿಧ ಬಗೆಯ ಏಕವ್ಯಕ್ತಿ ಮತ್ತು ಗುಂಪು ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಗಳ ವಿವರ: ಏಕವ್ಯಕ್ತಿ ಸ್ಪರ್ಧೆಗಳು: ವರದಿಗಾರಿಕೆ, ಟಿವಿ ಸುದ್ದಿ ಪ್ರಸ್ತುತಿ, ರೇಡಿಯೋ ಜಾಕಿ, ಛಾಯಾಗ್ರಹಣ, ಪೋಸ್ಟರ್ ವಿನ್ಯಾಸ, ಪುಟ್ಟಕತೆ, ರೀಲ್ಸ್ ಮೇಕಿಂಗ್, ಪೀಸ್ ಟು ಕ್ಯಾಮೆರಾ. ಗುಂಪು ಸ್ಪರ್ಧೆಗಳು: ಚರ್ಚಾ ಸ್ಪರ್ಧೆ, ರಸಪ್ರಶ್ನೆ, ಜಾಹೀರಾತು ನಿರ್ಮಾಣ, ಸಮೂಹ ನೃತ್ಯ ಸ್ಪರ್ಧೆ.

ಈ ಸ್ಪರ್ಧೆ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಸೀಮಿತವಾಗಿಲ್ಲ. ಯಾವುದೇ ಪದವಿ ಅಥವಾ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ವಿಜೇತರಿಗೆ ಆಕರ್ಷಕ ನಗದು ಬಹುಮಾನ, ಸ್ಮರಣಿಕೆ ಹಾಗೂ ಪ್ರಶಸ್ತಿ ಪತ್ರಗಳನ್ನು ನೀಡಲಾಗುವುದು.

ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ವಿಭಾಗದ ಸಂಯೋಜಕರಾದ ಡಾ.ಸಿಬಂತಿ ಪದ್ಮನಾಭ ಕೆ.ವಿ 9449525854 ಅಥವಾ ವಿದ್ಯಾರ್ಥಿ ಸಂಚಾಲಕರಾದ ಪ್ರದೀಪ್ ಡಿ.ಎಸ್ 6362099062 ಇವರನ್ನು ಸಂಪರ್ಕಿಸಬಹುದು.

# 'ಮೂಲದಲ್ಲಿಯೇ ಕಸ ವಿಂಗಡಿಸಿ ಪರಿಸರ ಉಳಿಸಿ'



ಶ್ರೀನಿವಾಸಪುರ

ಪಟ್ಟಣದ ಪುರಸಭಾ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪುರಸಭೆಯ ಪೌರಕಾರ್ಮಿಕರಿಗೆ ಕಸ ವಿಂಗಣೆ ಕುರಿತು ತಿಳುವಳಿಕೆ ನೀಡಲಾಯಿತು.

ಪುರಸಭೆ ಮುಖ್ಯಾಧಿಕಾರಿ ವಿ.ನಾಗರಾಜ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪೌರ ಕಾರ್ಮಿಕರು ಮೂಲದಲ್ಲಿಯೇ ಹಸಿ ಕಸ, ಒಣ ಕಸ ಹಾಗೂ ಪ್ಲಾಸ್ಟಿಕ್ ತ್ಯಾಜ್ಯವನ್ನು ವಿಂಗಡಿಸಿಕೊಳ್ಳಬೇಕು. ಹಾಗೆ ಮಾಡುವುದರಿಂದ ಕಸದ ಸಂಸ್ಕರಣೆ ಸುಲಭವಾಗುತ್ತದೆ ಎಂದು ಹೇಳಿದರು.

ಪಟ್ಟಣದ ನಾಗರಿಕರು ತಮ್ಮ ಮನೆಯಲ್ಲಿನ ತ್ಯಾಜ್ಯ ವಸ್ತುಗಳನ್ನು ನಿಯಮಾನುಸಾರ ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡುವುದರ ಮೂಲಕ ಸಹಕರಿಸಬೇಕು. ಪಟ್ಟಣದ ಸ್ವಚ್ಛತೆಗೆ ಪೂರಕವಾಗಿ ನಡೆದುಕೊಳ್ಳಬೇಕು ಎಂದು ಹೇಳಿದರು.

ಮೇ.1 ರಂದು ಪಟ್ಟಣದಲ್ಲಿ ಸ್ವಚ್ಛತಾ ಆಂದೋಲನ ಏರ್ಪಡಿಸಲಾಗಿದೆ. ಆ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಭಾಗವಹಿಸುವುದರ ಮೂಲಕ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ಪುರಸಭೆ ಆರೋಗ್ಯ ನಿರೀಕ್ಷಕ ವಿಜಯಕುಮಾರ್ ಮಾತನಾಡಿ, ಸ್ವಚ್ಛತೆ ನಾಗರಿಕತೆಯ ಮುಖ್ಯ ಲಕ್ಷಣ.

ಪಟ್ಟಣದ ನಾಗರಿಕರು ವೈಯಕ್ತಿಕ ಸ್ವಚ್ಛತೆಗೆ ನೀಡುವಷ್ಟೇ ಪ್ರಾಮುಖ್ಯತೆಯನ್ನು ಪಟ್ಟಣದ ಸ್ವಚ್ಛತೆಗೆ ನೀಡಬೇಕು. ಅದಕ್ಕೆ ಪೂರಕವಾಗಿ ಕಸವನ್ನು ವಿಂಗಡಿಸಿ ಪೌರ ಕಾರ್ಮಿಕರಿಗೆ ನೀಡಬೇಕು ಎಂದು ಹೇಳಿದರು.

ಕಂದಾಯ ಅಧಿಕಾರಿ ಶಂಕರ್, ಪರಿಸರ ಅಭಿಯಂತರ ಲಕ್ಷ್ಮೀಶ, ಕಿರಿಯ ಆರೋಗ್ಯ ನಿರೀಕ್ಷಕ ಟಿ.ವಿ.ಸುರೇಶ್, ಪೌರಕಾರ್ಮಿಕರ ಮೇಸ್ತ್ರೀ ಬಾಲಕೃಷ್ಣ, ಸಿಬ್ಬಂದಿ ಸಂತೋಷ್, ನಾಗರಾಜ್, ಪ್ರಕಾಶ್, ಚೇತನ್ ಇದ್ದರು.

# 'ಗೋಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕು'



ಕನಕಪುರ

ರೈತರ ಜೀವನಾಡಿಯಾಗಿರುವ ಹಾಗೂ ಹಿಂದುಗಳು ಪೂಜಿಸುವ ಗೋಮಾತೆ ಅಳಿವಿನ ಅಂಚಿನಲ್ಲಿದ್ದು, ಅದರ ರಕ್ಷಣೆಗೆ ಗೋಮಾತೆಯನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕು ಎಂದು ಶ್ರೀರಾಮ ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ನಾಗಾರ್ಜುನ್ ಗೌಡ ಒತ್ತಾಯಿಸಿದರು.

ಗೋ ರಕ್ಷಣೆ ಮತ್ತು ಗೋವಂಶ ಸಂರಕ್ಷಣೆಗಾಗಿ ರಾಷ್ಟ್ರವ್ಯಾಪಿ ನಡೆಯುತ್ತಿರುವ ಅಭಿಯಾನದ ಅಂಗವಾಗಿ, ತಾಲ್ಲೂಕು ಆಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ಭಾರತೀಯ ಸಂಸ್ಕೃತಿ, ಕೃಷಿ, ಆರ್ಥಿಕತೆ ಹಾಗೂ ಆರೋಗ್ಯ ವ್ಯವಸ್ಥೆಯ ಪ್ರಮುಖ ಅಂಗವಾಗಿರುವ ಗೋವುಗಳು ಇಂದು ನಿರ್ಲಕ್ಷ್ಯ ಮತ್ತು ದುರ್ಬಲ ನೀತಿಗಳಿಂದ ಸಂಕಷ್ಟಕ್ಕೀಡಾಗಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಗೋಮಾತೆಯ ರಕ್ಷಣೆ ಕೇವಲ ಧಾರ್ಮಿಕ ವಿಷಯವಲ್ಲ, ಅದು ರಾಷ್ಟ್ರದ ಅಸ್ತಿತ್ವ, ರೈತರ ಬದುಕು ಮತ್ತು ಪರಿಸರ ಸಮತೋಲನಕ್ಕೆ ಸಂಬಂಧಿಸಿದ ಮಹತ್ವದ ವಿಚಾರವಾಗಿದೆ. ಸರ್ಕಾರಗಳು ಮಾತಿನಲ್ಲಿ ಮಾತ್ರ ಗೋಭಕ್ತಿ ತೋರಿಸುತ್ತಿದ್ದು, ನೆಲಮಟ್ಟದಲ್ಲಿ ಗೋವಂಶದ ಸ್ಥಿತಿ ದಯನೀಯವಾಗಿದೆ ಎಂದು ಆರೋಪಿಸಿದರು.

ಗೋವನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸುವುದು ಕಾಲದ ಅವಶ್ಯಕತೆಯಾಗಿದೆ. ಇದು ಭಾವನಾತ್ಮಕ ವಿಷಯವಷ್ಟೇ ಅಲ್ಲದೆ, ದೇಶದ ಕೃಷಿ ಮತ್ತು ಆರೋಗ್ಯದ ಭವಿಷ್ಯಕ್ಕೆ ಸಂಬಂಧಿಸಿದೆ. ಸರ್ಕಾರಗಳು ಇನ್ನೂ ಮೌನವಾಗಿದ್ದರೆ ಜನರ ಆಕ್ರೋಶವನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಶ್ರೀರಾಮ ಸೇನೆಯ ವತಿಯಿಂದ ನಡೆಯುತ್ತಿರುವ ಸಹಿ ಸಂಗ್ರಹ ಅಭಿಯಾನದಡಿ, ತಾಲ್ಲೂಕಿನಲ್ಲಿ ಜನರಿಂದ ಬೆಂಬಲ ಸಂಗ್ರಹಿಸಲಾಗುತ್ತಿದೆ. 90677 77323 ಸಂಖ್ಯೆಗೆ ಮಿಸ್ ಕಾಲ್ ಮಾಡುವ ಮೂಲಕ ಜನರು ತಮ್ಮ ಬೆಂಬಲ ಸೂಚಿಸಬಹುದು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾಧ್ಯಕ್ಷ ಪರಮೇಶ್ ಗೌಡ, ವಿಭಾಗೀಯ ಅಧ್ಯಕ್ಷ ನವೀನ್, ಪ್ರ. ಕಾರ್ಯದರ್ಶಿ ಸಾಗರ್ ಹಾಗೂ ಪದಾಧಿಕಾರಿಗಳಾದ ಚೀರಣಕುಪ್ಪೆ ಕುಮಾರ್, ರಾಜೇಶ್, ರಮೇಶ್, ಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಮನವಿ ಪತ್ರವನ್ನು ತಹಶೀಲ್ದಾರ್ ಸಂಜಯ್ ಅವರ ಮೂಲಕ ರಾಜ್ಯಪಾಲರಿಗೆ ಸಲ್ಲಿಸಲಾಯಿತು.

# ಹಳೆ ವಿದ್ಯಾರ್ಥಿಗಳಿಂದ ಸಬರಮತಿ ಪ್ರೌಢಶಾಲೆಯಲ್ಲಿ ಗುರುವಂದನೆ: ಸ್ನೇಹಸಮ್ಮಿಲನ

ಕೋಲಾರ

ಅಕ್ಷರ ಕಲಿಸಿದ ಗುರುವನ್ನು ಮರೆಯದೇ 24 ವರ್ಷಗಳ ನಂತರವೂ ಸ್ಮರಿಸುವ ಕೆಲಸಕ್ಕೆ ಮುಂದಾಗಿರುವ ಹಳೆ ವಿದ್ಯಾರ್ಥಿಗಳ ಕಾರ್ಯ ಶಾಲೆಯ ಮಕ್ಕಳಿಗೆ ಆದರ್ಶವಾಗಿದೆ ಎಂದು ತಾಲ್ಲೂಕಿನ ಸುಗಟೂರು ಸಬರಮತಿ ಪ್ರೌಢಶಾಲೆ ಆಡಳಿತಾಧಿಕಾರಿ ಬಿ.ವೆಂಕಟೇಶ್ ಹರ್ಷ ವ್ಯಕ್ತಪಡಿಸಿದರು.

ಶಾಲೆಯ ಆವರಣದಲ್ಲಿ 2000–01ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಮುಗಿಸಿದ್ದ ನೂರಾರು ವಿದ್ಯಾರ್ಥಿಗಳು ಒಟ್ಟುಗೂಡಿ 'ನಮ್ಮ ಶಾಲೆ ನಮ್ಮ ಹೆಮ್ಮೆ'ಕಾರ್ಯಕ್ರಮದಡಿ ಗುರುಗಳನ್ನು ಸ್ಮರಿಸುವ ಆಯೋಜಿಸಿದ್ದ ಸ್ನೇಹಮಿಲನ ಹಾಗೂ ಗುರುವಂದನೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

3 ವರ್ಷಗಳ ಕಾಲ ಮಕ್ಕಳಿಗೆ ನೀಡಿದ ನೈತಿಕ ಶಿಕ್ಷಣದಿಂದಲೇ ಇಂದು ಹಳೆ ವಿದ್ಯಾರ್ಥಿಗಳು ಮತ್ತೆ ಶಾಲೆಯತ್ತ ಬಂದು ಅಕ್ಷರ ಕಲಿಸಿದ ಗುರುಗಳ ಋಣ ತೀರಿಸುವ ಕೆಲಸ ಮಾಡುತ್ತಿದ್ದಾರೆ. ಶಾಲೆಗಳನ್ನು ಮುನ್ನಡೆಸುವುದ ಕಷ್ಟದ ಕೆಲಸವಾಗಿದೆ ಇಂತಹ ಸಂದರ್ಭದಲ್ಲೂ 54 ವರ್ಷ ಶಾಲೆಯನ್ನು ಮುನ್ನಡೆಸಿದ್ದು, ಇಂದು 1800 ಮಕ್ಕಳು ಓದುತ್ತಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ಕೊಠಡಿಗಳಿಗೆ ಕಿಟಕಿಗಳನ್ನು ಕಕೊಡುಗೆಯಾಗಿ ನೀಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ನಿವೃತ್ತ ಶಿಕ್ಷಕರಾದ ಜಿ.ನಂಜುಂಡಪ್ಪ, ಎನ್.ಶ್ರೀನಿವಾಸರೆಡ್ಡಿ, ಧಾನಪ್ರಕಾಶ್ ಮತ್ತಿತರರು ಮಾತನಾಡಿ, ನಿವೃತ್ತರಾದ ನಂತರವೂ 20 ವರ್ಷಗಳ ಹಿಂದಿನ ಶಿಷ್ಯರು ಸ್ಮರಿಸಿ ಕರೆದಿರುವುದು ಅತಿ ಹೆಚ್ಚು ಸಂತಸ ಉಂಟು ಮಾಡಿದೆ ಎಂದು ತಿಳಿಸಿದರು.

ಗುರಿ ಸಾಧನೆಗೆ ಗುರು ಇರಬೇಕು ಎಂಬ ಮಾತಿದೆ ಆದರೆ ಇತ್ತೀಚಿನ ದಿನಗಳಲ್ಲಿ ಗುರುವನ್ನು ಮರೆಯುವ ಸಂಸ್ಕೃತಿ ಹೆಚ್ಚಿದೆ ಎಂದ ಅವರು, ಇಂತಹ ಪರಿಸ್ಥಿತಿಯಲ್ಲೂ ಗುರುಗಳನ್ನು ನೆನಪು ಮಾಡಿಕೊಂಡಿರುವ ಹಳೆ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ಹಾಲಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ ಅವರು, ತಂದೆ,ತಾಯಿ ದುಡಿದು, ಕೂಲಿ ಮಾಡಿ ನಿಮ್ಮನ್ನು ಶಾಲೆಗೆ ಕಳುಹಿಸಿದ್ದಾರೆ, ನೀವು ಚೆನ್ನಾಗಿ ಓದುವ ಮೂಲಕ ಅವರ ಆಶಯಗಳನ್ನು ಈಡೇರಿಸುವ ಸಂಕಲ್ಪ ಹೊಂದಿರಬೇಕು, ಗುರುಹಿರಿಯರನ್ನು ಗೌರವಿಸುವ ಸಂಸ್ಕಾರ ಬೆಳೆಸಿಕೊಳ್ಳಿ, ವಿದ್ಯೆಗೆ ವಿನಯವೇ ಆಭರಣ ಎಂಬುದನ್ನು ಮರೆಯದಿರಿ ಎಂದು ಹೇಳಿದರು.

ಹಳೆ ವಿದ್ಯಾರ್ಥಿಗಳಾದ ಶ್ಯಾಮಲ, ರಾಮಾಂಜಿ, ಕಮಲ,ಉಮಾಶಂಕರ್, ಸುಭಾಷ್‌ಚಂದ್ರಬೋಸ್, ಮತ್ತಿತರರು ಕಾರ್ಯಕ್ರಮದ ಉಸ್ತುವಾರಿ ವಹಿಸಿದ್ದು, ಸ್ಪರ್ಧಾತ್ಮಕ ಯುಗದಲ್ಲಿ ಯಾರಲ್ಲಿ ಶ್ರಮ,ಕನಸು, ಪ್ರಯತ್ನ ಇರುತ್ತದೆಯೋ ಅವರು ಮಾತ್ರ ಬೆಳೆಯುತ್ತಾರೆ, ಎಸ್ಸೆಸ್ಸೆಲ್ಸಿ ಟರ್ನಿಂಗ್ ಪಾಯಿಂಟ್ ಆಗಿದ್ದು, ಇಲ್ಲೇ ನಿಮ್ಮ ಮುಂದಿನ ಭವಿಷ್ಯದ ಹಾದಿ ನಿರ್ಧಾರವಾಗುತ್ತದೆ ಎಂದರು.

ಪ್ರಪಂಚ ಇಂದು ಗ್ಲೋಬಲ್ ವಿಲೇಜ್ ಆಗಿದೆ,ಕಂಪ್ಯೂಟರ್ ಜ್ಞಾನವಿಲ್ಲದಿದ್ದರೆ ಮುಂದಿನ ದಿನಗಳಲ್ಲಿ ಅಂತಹವರನ್ನೇ ಅನಕ್ಷರಸ್ಥರೆಂದು ಪರಿಗಣಿಸುವ ಕಾಲ ಬರಲೂಬಹುದು ಎಂದು ತಿಳಿಸಿ, ಮಕ್ಕಳು ಇಂದಿನಿಂದಲೇ ಕಂಪ್ಯೂಟರ್ ಜ್ಞಾನ ಬೆಳೆಸಿಕೊಳ್ಳಿ ಎಂದರು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಶಾಲೆಯ ನಾಲ್ವರು ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರಾದ ಪಿ.ಎಂ.ನಾರಾಯಣ ಸ್ವಾಮಿ, ಎಸ್.ಆರ್.ಮೋಹನ್, ಎನ್.ಶ್ರೀರಾಮರೆಡ್ಡಿ, ಸಿ.ನಾರಾಯಣಸ್ವಾಮಿ, ಕೆಂಚೇಗೌಡ, ವಿಶ್ವನಾಥ್, ನಾರಾಯಣಸ್ವಾಮಿ, ನಾಗಭೂಷಣ್, ಅನಂತಪದ್ಮನಾಭ್, ಹೆಚ್.ನಾರಾಯಣಸ್ವಾಮಿ, ಆರ್.ವೆಂಕಟೇಶ್, ಸಿ.ವೆಂಕಟೇಶಪ್ಪ, ಬಾಲಕೃಷ್ಣ, ಕೆ.ವಿ.ರಾಜಣ್ಣ ಮತ್ತಿತರರಿದ್ದರು.

# ಮುಂದಿನ ಚುನಾವಣೆಯಲ್ಲಿ ಸ್ಪರ್ಧೆ ಖಚಿತ

ಗುಡಿಬಂಡೆ

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನಾನು ಬಾಗೇಪಲ್ಲಿ–ಗುಡಿಬಂಡೆ ವಿಧಾನಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡುವುದು ಖಚಿತ, ಸದಾ ಜನರ ಬಳಿಯಿರುವ ನಾನು ಜನರ ಬಳಿಗೆ ಹೋಗಿ ಮತ ಹಾಕುವಂತೆ ಕೇಳಿಕೊಳ್ಳುತ್ತೇನ, ಜನ ನನಗೆ ಆಶೀರ್ವಾದ ಮಾಡುತ್ತಾರೆ ಎಂದು ಮುಖಂಡ ಡಿ.ಜೆ.ನಾಗರಾಜರೆಡ್ಡಿ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಮ್ಮ ಬೆಂಬಲಿಗರೊಂದಿಗೆ ಸಭೆ ನಡೆಸಿ ಬಳಿಕ ಮಾದ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಕ್ಷೇತ್ರದಲ್ಲಿ ನಿರಂತರವಾಗಿ ಜನರ ಸಂಪರ್ಕದಲ್ಲಿದ್ದೇನೆ. ಜನರ ಕಷ್ಟಸುಖಗಳಲ್ಲಿ ಭಾಗಿಯಾಗುತ್ತಿದ್ದೇನೆ. ಜನರಿಗೆ ನನ್ನ ಮೇಲೆ ಒಲವು ಇದೆ. ಕಳೆದ ಚುನಾವಣೆಯಲ್ಲೂ ಸಹ ನಾನು ಅಭ್ಯರ್ಥಿಯ ಆಕಾಂಕ್ಷಿಯಾಗಿದ್ದೆ. ಆದರೆ ಕೆಲವೊಂದು ಕಾರಣಗಳಿಂದ ನಾನು ಚುನಾವಣಾ ಕಣದಿಂದ ಹಿಂದೆ ಸರಿಯಬೇಕಾಯ್ತು. ಇದೇ ರೀತಿ ಪ್ರತೀ ಚುನಾವಣೆಯಲ್ಲೂ ನಡೆಯುತ್ತಿದೆ. ಜೆಡಿಎಸ್ ಪಕ್ಷದ ನಿಷ್ಟಾವಂತ ಕಾರ್ಯಕರ್ತನಾದ ನಾನು ಪಕ್ಷಕ್ಕಾಗಿ ದುಡಿದಿದ್ದೆ, ಆದರೆ ಚುನಾವಣೆಯ ಕೊನೆಯ ಕ್ಷಣದಲ್ಲಿ ನನಗೆ ಟಿಕೆಟ್ ಕೈ ತಪ್ಪಿತ್ತು. ಆದ ಕಾರಣ ನಾನು ಚುನಾವಣೆಯಿಂದ ಹಿಂದೆ ಸರಿಯಬೇಕಾಯ್ತು. ಈ ಬಾರಿ ನಾನು ಯಾವುದೇ ಕಾರಣಕ್ಕೂ ಚುನಾವಣಾ ಕಣದಿಂದ ಹಿಂದೆ ಸರಿಯುವುದಿಲ್ಲ ಎಂದರು.



ಇನ್ನೂ ಈ ಬಾರಿ ನಾನು ಯಾವುದೇ ಪಕ್ಷದಿಂದ ಸ್ಪರ್ಧೆ ಮಾಡುವುದಿಲ್ಲ. ಬದಲಿಗೆ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣಾ ಕಣದಲ್ಲಿರುತ್ತೇನೆ. ಆದರೆ ಕ್ಷೇತ್ರದಲ್ಲಿ ಕೆಲವೊಂದು ಮಾತುಗಳು ಕೇಳಿಬರುತ್ತಿದ್ದು, ಅದರಂತೆ ನಾನು ಈ ಬಾರಿ ಸಿಪಿಎಂ ಪಕ್ಷದಿಂದ ಸ್ಪರ್ಧೆ ಮಾಡುವಂತೆ ಹಲವರು ಮಾತನಾಡುತ್ತಿದ್ದಾರೆ. ಪಕ್ಷದಲ್ಲೂ ಸಹ ಈ ಕುರಿತು ಚರ್ಚೆ ನಡೆದಿದೆ ಎನ್ನಲಾಗಿದ್ದು, ಒಂದು ವೇಳೆ ಸಿಪಿಎಂ ಪಕ್ಷದಿಂದ ಅವಕಾಶ ಸಿಕ್ಕರೇ ಸ್ಪರ್ಧೆ ಮಾಡಲು ಸಿದ್ದನಿರುತ್ತೇನೆ. ಕೆಲವೊಂದು ವೈಯುಕ್ತಿಕ ಕಾರಣಗಳಿಂದ ನಾನು ಕ್ಷೇತ್ರದಲ್ಲಿ ಸರಿಯಾಗಿ ಕಾಣಿಸಿಕೊಂಡಿಲ್ಲ, ಇನ್ನೂ ಸದಾ ಕ್ಷೇತ್ರದ ಜನತೆಯ ಸಮಸ್ಯೆಗಳಿಗೆ ಸ್ಪಂಧನೆ ನೀಡುತ್ತೇನೆ ಎಂದರು.

ಇನ್ನೂ ಕ್ಷೇತ್ರದಲ್ಲಿ ಹಾಲಿ ಶಾಸಕರು ಸಾಕಷ್ಟು ಅಕ್ರಮಗಳನ್ನು ಮಾಡಿದ್ದಾರೆ. ಅವರ ವಿರುದ್ದ ನಾನು ಹೋರಾಟ ಮಾಡುತ್ತೇನೆ. ಅವರು ಯಾವುದೇ ಅಕ್ರಮಗಳನ್ನು ಮಾಡಿಲ್ಲ ಎಂದು ಸಾಬೀತು ಮಾಡಲಿ ಅಥವಾ ಒಂದೇ ವೇದಿಕೆಗೆ ಬರಲಿ ನಾನು ಚರ್ಚೆ ಮಾಡಲು ಸಿದ್ದನಿದ್ದೇನೆ. ಅವರ ವಿರುದ್ದ ಸಿಬಿಐ ತನಿಖೆ ಮಾಡಲು ನಾನು ಒತ್ತಾಯಿಸುತ್ತೇನೆ. ಕ್ಷೇತ್ರದಲ್ಲಿ ಸಾಕಷ್ಟು ಎಕರೆಗಳು ಜಮೀನನ್ನು ಅಕ್ರಮವಾಗಿ ಖರೀದಿ ಮಾಡಿದ್ದಾರೆ. ಅವರ ವಿರುದ್ದ ಅಕ್ರಮಗಳನ್ನು ಹಂತ ಹಂತವಾಗಿ ಬಯಲು ಮಾಡುತ್ತೇನೆ. ನಾನು ಸ್ವಚ್ಚ ರಾಜಕಾರಣ ಮಾಡಲು ರಾಜಕಾರಣಕ್ಕೆ ಬಂದಿದ್ದೇನೆ ಹೊರತು ಹಣ ಅಥವಾ ಆಸ್ತಿ ಸಂಪಾದನೆ ಮಾಡುವುದಕ್ಕಲ್ಲ ಎಂದರು.

ಈ ವೇಳೆ ಡಿ.ಜೆ.ನಾಗರಾಜರೆಡ್ಡಿಯವರ ಬೆಂಬಲಿಗರಾದ ಸೀತಾರಾಮಪ್ಪ, ವರ್ಲಕೊಂಡ ದೇವರಾಜು ಸೇರಿದಂತೆ ಹಲವರು ಹಾಜರಿದ್ದರು.

# ಒಂದೇ ಕುಟುಂಬದ ನಾಲ್ವರ ವಿರುದ್ಧ ಜಾಮೀನು ರಹಿತ ವಾರಂಟ್

ಬೆಂಗಳೂರು

ಸಾರ್ವಜನಿಕರಿಗೆ ಕೋಟ್ಯಂತರ ರೂಪಾಯಿ ವಂಚಿಸಿ ತಲೆಮರೆಸಿಕೊಂಡಿರುವ ಒಂದೇ ಕುಟುಂಬದ ನಾಲ್ವರು ಆರೋಪಿಗಳ ಪತ್ತೆಗಾಗಿ ಬೆಂಗಳೂರು ನಗರದ ಜಯನಗರ ಪೊಲೀಸ್ ಠಾಣೆಯು ಪ್ರಕಟಣೆ ಹೊರಡಿಸಿದೆ.

ಜಯನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಮೊಕದ್ದಮೆ ಸಂಖ್ಯೆ 182/2025, ಕಲಂ 318, 3(5) ಬಿ.ಎನ್.ಎಸ್ ಮತ್ತು ಕಲಂ 21 ಬಡ್ಸ್ ಕಾಯ್ದೆಯಡಿ ಈ ಕ್ರಮ ಕೈಗೊಳ್ಳಲಾಗಿದೆ. ಆರೋಪಿಗಳು ಸಾರ್ವಜನಿಕರಿಂದ ಹಣ ಪಡೆದು ನಂಬಿಕೆ ದ್ರೋಹ ಎಸಗಿದ್ದು, ಪ್ರಸ್ತುತ ಇವರ ವಿರುದ್ಧ ನ್ಯಾಯಾಲಯದಿಂದ ಜಾಮೀನು ರಹಿತ ವಾರಂಟ್ ಹೊರಡಿಸಲಾಗಿದೆ.

ಆರೋಪಿಗಳಾದ ಶ್ರೀಮತಿ ಸುಧಾ: ಗಂಡ ಸಿದ್ದಾಚಾರಿ (48 ವರ್ಷ), ಸಿದ್ದಾಚಾರಿ: ತಂದೆ ರಾಮಚಾರಿ (56 ವರ್ಷ), ಯಶವಂತ್: ತಂದೆ ಸಿದ್ದಚಾರಿ (28 ವರ್ಷ) ಮತ್ತು ಕುಮಾರಿ ಆರೋಪಿಗಳು ಸದ್ಯ ತಲೆಮರೆಸಿಕೊಂಡಿದ್ದು, ಇವರ ಬಗ್ಗೆ ಯಾವುದೇ ಮಾಹಿತಿ ಲಭ್ಯವಿದ್ದಲ್ಲಿ ಕೂಡಲೇ ದೂರವಾಣಿ ಸಂಖ್ಯೆ: 9480800155 ಮತ್ತು 080–22094445ಗಳಿಗೆ ಕರೆ ಮಾಡಿ ಮಾಹಿತಿ ನೀಡುವಂತೆ ಪೊಲೀಸರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಮಾಹಿತಿ ನೀಡುವವರ ವಿವರಗಳನ್ನು ಗೌಪ್ಯವಾಗಿಡಲಾಗುವುದು ಎಂದು ಜಯನಗರ ಠಾಣೆಯ ಇನ್ಸಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತನ ಹತ್ಯೆ: ತನಿಖೆ ಚುರುಕು

ಬಂಗಾರಪೇಟೆ

ತಾಲೂಕು ಗಡಿಗೆ ಹೊಂದಿಕೊಂಡಿರುವ ಆಂಧ್ರ ಪ್ರದೇಶದ ಚಿತ್ತೂರು ಜಿಲ್ಲೆಯ ವೆಂಕಟಗಿರಿ ಕೋಟೆ(ವಿಕೋಟೆ) ಯಲ್ಲಿ ವರದಿಗಾರ ಜಗನ್ಮೋಹನ್ ರೆಡ್ಡಿ ಅವರ ಭೀಕರ ಹತ್ಯೆ ಪ್ರಕರಣವು ರಾಜ್ಯಾದ್ಯಂತ ಸಂಚಲನ ಮೂಡಿಸಿದೆ.

ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ದಾಳಿ ನಡೆಸಿ ಅವರನ್ನು ನಿರ್ದಯವಾಗಿ ಕೊಂದಿರುವುದು ತಿಳಿದುಬಂದಿದ್ದು, ಈ ಘಟನೆ ಪತ್ರಕರ್ತರು ಸೇರಿದಂತೆ ಸಾರ್ವಜನಿಕರಲ್ಲಿ ಭೀತಿ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.



ಹತ್ಯೆ ಪ್ರಕರಣದ ತನಿಖೆಯನ್ನು ಪೊಲೀಸರು ತೀವ್ರಗೊಳಿಸಿದ್ದು, ಇತ್ತೀಚೆಗೆ ಜೈಲಿನಿಂದ ಬಿಡುಗಡೆಯಾದ ರೌಡಿ ಶೀಟರ್ ಒಬ್ಬನ ಮೇಲೆ ಪ್ರಮುಖ ಅನುಮಾನ ವ್ಯಕ್ತವಾಗಿದೆ. ಆತನ ಚಲನವಲನಗಳ ಬಗ್ಗೆ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದು, ಪ್ರಕರಣದ ನಿಖರ ಕಾರಣವನ್ನು ಪತ್ತೆಹಚ್ಚಲು ಹಲವು ಕೋಣಗಳಲ್ಲಿ ತನಿಖೆ ನಡೆಸುತ್ತಿದ್ದಾರೆ.

ವೈಯಕ್ತಿಕ ವೈಷಮ್ಯವೇ ಅಥವಾ ವೃತ್ತಿ ಸಂಬಂಧಿತ ಕಾರಣವೇ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಲಭ್ಯವಾಗಿಲ್ಲ. ಈ ಘಟನೆಯನ್ನು ಖಂಡಿಸಿರುವ ಪಲ್ಲಾ ಶ್ರೀನಿವಾಸರಾವ್, ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಮಾಧ್ಯಮ ಪ್ರತಿನಿಧಿಗಳ ಮೇಲೆ ದಾಳಿ ಅಸಹ್ಯಕರ ಎಂದು ತಿಳಿಸಿದ್ದಾರೆ. ಆರೋಪಿಗಳನ್ನು ಶೀಘ್ರ ಬಂಧಿಸಿ ಕಠಿಣ ಶಿಕ್ಷೆ ನೀಡಬೇಕೆಂದು ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಹತ್ಯೆಗೆ ಒಳಗಾದ ಜಗನ್ಮೋಹನ್ ರೆಡ್ಡಿ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥನೆ ಸಲ್ಲಿಸಲಾಗಿದ್ದು, ಕುಟುಂಬದವರಿಗೆ ಸಂತಾಪ ಸೂಚಿಸಲಾಗಿದೆ. ಪ್ರಕರಣದ ಸತ್ಯಾಂಶ ತಿಳಿಯಲು ಪೊಲೀಸರು ವ್ಯಾಪಕ ತನಿಖೆಯನ್ನು ಮುಂದುವರೆಸಿದ್ದಾರೆ.

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ಜನನ ಮರಣ ನೋಂದಣಿಯನ್ನು ಶೇಕಡ ನೂರರಷ್ಟು ಸಾಧಿಸಿ’

ರಾಮನಗರ

ಜಿಲ್ಲೆಯಲ್ಲಿ ಜನನ – ಮರಣ ನೋಂದಣಿಯನ್ನು ಶೇ. 100ರಷ್ಟು ಸಾಧಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚಿಸಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನನ ಮರಣ ನೋಂದಣಿ ಕುರಿತು ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾನತಾಡಿದರು.

ಜನನ, ಮರಣ ಘಟನೆಗಳನ್ನು ಘಟಿಸಿದ 21 ದಿನಗಳೊಳಗಾಗಿ ವಿಳಂಬಕ್ಕೆ ಆಸ್ಪದವಿಲ್ಲದಂತೆ ನೋಂದಾಯಿಸಿಕೊಳ್ಳಲು ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದವರು ತಾಕೀತು ಮಾಡಿದರು.





ಜಿಲ್ಲೆಯಲ್ಲಿ 2024ರ ಸಾಲಿನಲ್ಲಿ 9,493 ಜನನ ಘಟನೆಗಳು 10,486 ಮರಣ ಘಟನೆಗಳು 2025 ಸಾಲಿನಲ್ಲಿ 10,207 ಜನನ ಘಟನೆಗಳು, 10,514 ಮರಣ ಘಟನೆಗಳು ಹಾಗೂ 2026ರ ಜನವರಿಯಿಂದ ಏಪ್ರಿಲ್ ಮಾಹೆಯವರೆಗೆ 3,153 ಜನನ ಘಟನೆಗಳು, 3,393 ಮರಣ ಘಟನೆಗಳಾಗಿವೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸುನೀಲ್ ಕುಮಾರ್ ಅವರು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 2025ನೇ ಸಾಲಿನಲ್ಲಿ 1,722 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೆ 312 ಜನನ ಘಟನೆಗಳು ತಡವಾಗಿ ನೋಂದಣಿಯಾಗಿದೆ. 2025ನೇ ಸಾಲಿನಲ್ಲಿ 3,378 ಹಾಗೂ 2026 ಜನವರಿಯಿಂದ ಮಾರ್ಚ್ ವರೆಗೂ 674 ಮರಣ ಘಟನೆಗಳು ತಡವಾಗಿ ನೋಂದಣಿ ಆಗಿವೆ. ಜನನ–ಮರಣ ಘಟನೆಗಳು ತಡವಾಗಿ ನೋಂದಣಿಯಾಗದಂತೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ ಸಿಬ್ಬಂದಿ, ಗ್ರಾಮ ಲೆಕ್ಕಾಧಿಕಾರಿಗಳು, ಸಾಂಖಿಕ ನಿರೀಕ್ಷಕರು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಯವರು ಸೂಚಿಸಿದರು.

ಸರ್ಕಾರಿ ಆಸ್ಪತ್ರೆಗಳು, ಖಾಸಗಿ ಆಸ್ಪತ್ರೆಗಳ ವೈದ್ಯಾಧಿಕಾರಿಗಳು ತಮ್ಮ ಆಸ್ಪತ್ರೆಗಳಲ್ಲಿ ಘಟಿಸುವ ಜನನ, ಮರಣ ಘಟನೆಗಳನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಅಗತ್ಯ ಕ್ರಮವಹಿಸಬೇಕು, ಈ ಸಂದರ್ಭದಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು, ಜಿಲ್ಲೆಯ ಎಲ್ಲಾ ತಹಶೀಲ್ದಾರರು ಜನನ–ಮರಣ ಘಟನೆಗಳ ನೋಂದಣಿಯ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ನಡೆಸುವಂತೆ ಸೂಚಿಸಿದರು.

ಮಾಗಡಿ ತಾಲೂಕು ಯೋಜನಾಧಿಕಾರಿ ವೆಂಕಟರಾಮು, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ನಿರ್ದೇಶಕರಾದ ಮಹೇಶ್, ಕಾವ್ಯ, ಸಂಬಂಧಿಸಿದ ಅಧಿಕಾರಿಗಳು ಸಭೆಯಲ್ಲಿದ್ದರು.

# ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕ



ಬೇತಮಂಗಲ

ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಂದ್ರ ಗ್ರಾಮದಲ್ಲಿ ಕಳೆದ ಮೂರು ವರ್ಷಗಳಿಂದ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿದ್ದು, ಶುದ್ಧ ನೀರಿಗಾಗಿ ಗ್ರಾಮಸ್ಥರು ಮೈಲುಗಟ್ಟಲೆ ಅಲೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಜನಪ್ರತಿನಿಧಿಗಳ ಭರವಸೆಗಳು ಹುಸಿಯಾಗಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಐಸಂದ್ರ ಗ್ರಾಮದಲ್ಲಿ 200ಕ್ಕೂ ಹೆಚ್ಚು ಮನೆಗಳಿದ್ದು, ಸಾವಿರಾರು ಜನಸಂಖ್ಯೆ ಇದೆ. ಗ್ರಾಮದಲ್ಲಿ ಲಭ್ಯವಿರುವ ನೀರು ಫ್ಲೋರೈಡ್ ಮಿಶ್ರಿತವಾಗಿದ್ದು, ಇದನ್ನು ಕುಡಿದ ವೃದ್ಧರು ಹಾಗೂ ಮಕ್ಕಳು ಪದೇ ಪದೇ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಈ ಬಗ್ಗೆ ಪಂಚಾಯಿತಿ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಜನರು ಅಳಲು ತೋಡಿಕೊಂಡಿದ್ದಾರೆ.

ಗ್ರಾಮದಲ್ಲಿ ಶುದ್ಧ ನೀರಿನ ಘಟಕ ಇಲ್ಲದ ಕಾರಣ, ನಿವಾಸಿಗಳು ಪ್ರತಿದಿನ ಪಕ್ಕದ ಕದಿರೇಗೌಡನಕೋಟೆ ಹಾಗೂ ರೆಡ್ಡಿಹಳ್ಳಿಯಂತಹ ಗ್ರಾಮಗಳಿಗೆ ಹೋಗಿ ನೀರು ತರುವಂತಾಗಿದೆ. “ಚುನಾವಣೆಯ ಸಮಯದಲ್ಲಿ ಮಾತ್ರ ವೋಟು ಕೇಳಲು ಬರುವ ನಾಯಕರು, ಗೆದ್ದ ಮೇಲೆ ನಮ್ಮ ಕಷ್ಟ ಕೇಳಲು ಬರುತ್ತಿಲ್ಲ” ಎಂದು ಗ್ರಾಮಸ್ಥರು ಕಿಡಿ ಕಾರಿದ್ದಾರೆ.

ಅಂಬೇಡ್ಕರ್ ಯುವ ವೇದಿಕೆಯ ಕೋಲಾರ ಜಿಲ್ಲಾ ಅಧ್ಯಕ್ಷ ಐಸಂದ್ರ ಗೋವಿಂದಪ್ಪ ಮಾತನಾಡಿ, “ರಾಜ್ಯದ ಇತರೆ ಕ್ಷೇತ್ರಗಳ ಶಾಸಕರು ಪ್ರತಿ ಪಂಚಾಯಿತಿ ಮಟ್ಟದಲ್ಲಿ ಕುಂದುಕೊರತೆ ಸಭೆ ನಡೆಸಿ ಜನರ ಸಮಸ್ಯೆ ಆಲಿಸುತ್ತಿದ್ದಾರೆ. ಆದರೆ ನಮ್ಮ ಕ್ಷೇತ್ರದಲ್ಲಿ ಶಾಸಕರು ಚುನಾವಣೆಯಾದ ಮೇಲೆ ಗ್ರಾಮಕ್ಕೆ ಭೇಟಿ ನೀಡಿಲ್ಲ, ಸಾರ್ವಜನಿಕರ ಸಮಸ್ಯೆಗಳನ್ನು ಕೇಳುವ ಸಭೆಗಳೂ ನಡೆಯುತ್ತಿಲ್ಲ” ಎಂದು ಗಂಭೀರವಾಗಿ ಆರೋಪಿಸಿದರು.

ಪಂಚಾಯಿತಿ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತು ಐಸಂದ್ರ ಗ್ರಾಮಕ್ಕೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸದಿದ್ದರೆ ಮುಂಬರುವ ದಿನಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಗ್ರಾಮಸ್ಥರು ಎಚ್ಚರಿಸಿದ್ದಾರೆ.

# ಬಿಎಸ್‌ವೈ ಅಭಿಮಾನೋತ್ಸವಕ್ಕೆ ಬಳ್ಳಾರಿ ಸಜ್ಜು



ಬಳ್ಳಾರಿ

ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರ ಜನಪರ ಆಡಳಿತ, ರೈತಪರ ಯೋಜನೆಗಳು ಹಾಗೂ ಪಕ್ಷ ಸಂಘಟನೆಗೆ ನೀಡಿದ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಆಯೋಜಿಸಿರುವ ‘ಬಿಎಸ್‌ವೈ ಅಭಿಮಾನೋತ್ಸವ’ ಕಾರ್ಯಕ್ರಮಕ್ಕೆ ಬಳ್ಳಾರಿ ಜಿಲ್ಲೆಯಿಂದ ಬಿಜೆಪಿಯ ಕಾರ್ಯಕರ್ತರು, ಅಭಿಮಾನಿಗಳು ಭಾಗವಹಿಸಲಿದ್ದಾರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ತಿಳಿಸಿದರು.

ಮೋಕಾ ರಸ್ತೆಯ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯ ರಾಜಕಾರಣದಲ್ಲಿ ಯಡಿಯೂರಪ್ಪ ಅವರು ವಿಶಿಷ್ಟ ಸ್ಥಾನ ಹೊಂದಿದ್ದಾರೆ. ಸಾಮಾನ್ಯ ಕಾರ್ಯಕರ್ತನಾಗಿ ರಾಜಕೀಯ ಪ್ರವೇಶಿಸಿ, ಮುಖ್ಯಮಂತ್ರಿ ಹುದ್ದೆಯವರೆಗೆ ಏರಿದ ಅವರ ಜೀವನ ಎಲ್ಲರಿಗೂ ಮಾದರಿಯಾಗಿದೆ. ರೈತಪರ ಯೋಜನೆಗಳು, ನೀರಾವರಿ ಅಭಿವೃದ್ಧಿ, ಗ್ರಾಮೀಣ ಭಾಗಗಳ ಪ್ರಗತಿ ಹಾಗೂ ಬಡವರ ಕಲ್ಯಾಣಕ್ಕಾಗಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವರ ಆಡಳಿತಾವಧಿಯಲ್ಲಿ ಕರ್ನಾಟಕದ ಅಭಿವೃದ್ಧಿಗೆ ಹೊಸ ದಿಕ್ಕು ದೊರೆತಿದೆ. ಬಿಜೆಪಿ ಪಕ್ಷವನ್ನು ರಾಜ್ಯದ ಪ್ರತಿಯೊಂದು ಹಳ್ಳಿಗೂ ತಲುಪಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ.

‘ಬಿ.ಎಸ್.ವೈ. ಅಭಿಮಾನೊತ್ಸವ’ ಕಾರ್ಯಕ್ರಮವನ್ನು ಜಿಲ್ಲೆಯಲ್ಲಿ ವಿಜೃಂಭಣೆಯಿಂದ ಆಚರಿಸಲು ಪಕ್ಷದ ವತಿಯಿಂದ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಎಲ್ಲ ತಾಲೂಕುಗಳು ಹಾಗೂ ಗ್ರಾಮೀಣ ಭಾಗಗಳಿಂದ ಸಾವಿರಾರು ಕಾರ್ಯಕರ್ತರು, ಮುಖಂಡರು ಹಾಗೂ ಅಭಿಮಾನಿಗಳು ಭಾಗವಹಿಸಲಿದ್ದಾರೆ. ಕಾರ್ಯಕ್ರಮ ಯಶಸ್ವಿಗೊಳಿಸಲು ಈಗಾಗಲೇ ವ್ಯಾಪಕ ತಯಾರಿ ನಡೆಯುತ್ತಿದೆ. ಈ ಕಾರ್ಯಕ್ರಮದಲ್ಲಿ ಬಿಜೆಪಿ ಹಿರಿಯ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಯುವ ಕಾರ್ಯಕರ್ತರು ಭಾಗವಹಿಸಲಿದ್ದು, ಪಕ್ಷದ ಬಲವರ್ಧನೆ ಹಾಗೂ ಸಂಘಟನೆ ಕುರಿತು ವಿಶೇಷ ಚರ್ಚೆಗಳು ನಡೆಯಲಿವೆ. ಯಡಿಯೂರಪ್ಪ ಅವರು ಅಪಾರ ಅನುಭವ ಹೊಂದಿದ ನಾಯಕರು. ಅವರ ಮಾರ್ಗದರ್ಶನದಲ್ಲಿ ಪಕ್ಷ ಇನ್ನಷ್ಟು ಬಲಿಷ್ಠವಾಗುತ್ತಿದ್ದು, ಮುಂದಿನ ದಿನಗಳಲ್ಲಿ ಬಿಜೆಪಿ ಸಂಘಟಿತವಾಗಿ ಕಾರ್ಯನಿರ್ವಹಿಸಲಿದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು. ಪಕ್ಷದ ಮುಖಂಡರಾದ ಕೆ.ರಾಮಾಂಜಿನಿ, ಅಡವಿಸ್ವಾಮಿ, ಗುತ್ತಿಗನೂರು ವಿರೂಪಾಕ್ಷಗೌಡ ಸೇರಿದಂತೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸುದ್ದಿಗೋಷ್ಠಿಯಲ್ಲಿ ಇದ್ದರು.

# ಮಾಲೂರು ಶಿಕ್ಷಕರ ಸಂಘಕ್ಕೆ ಅವಿರೋಧ ಆಯ್ಕೆ: ಶಾಸಕರ ಸೂಚನೆಯಂತೆ ಒಮ್ಮತದ ನಾಮಪತ್ರ ಸಲ್ಲಿಕೆ

ಮಾಲೂರು

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಲೂರು ತಾಲ್ಲೂಕು ಘಟಕದ ವಿವಿಧ ಪದಾಧಿಕಾರಿಗಳ ಹುದ್ದೆಗಳಿಗೆ ಮಂಗಳವಾರ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಎಲ್ಲಾ 9 ಸ್ಥಾನಗಳಿಗೆ ತಲಾ ಒಂದೊಂದು ನಾಮಪತ್ರ ಸಲ್ಲಿಕೆಯಾಗುವ ಮೂಲಕ ಚುನಾವಣೆ ‘ಅವಿರೋಧ’ದ ಹಾದಿ ಹಿಡಿದಿದೆ.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಚುನಾವಣಾಧಿಕಾರಿ ವೀರಭದ್ರಾಚಾರ್ಯ ಅವರಿಗೆ ವಿವಿಧ ಹುದ್ದೆಗಳ ಆಕಾಂಕ್ಷಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು. 14 ಮಂದಿ ನಿರ್ದೇಶಕ ಸ್ಥಾನಗಳಿಗೆ ಈಗಾಗಲೇ ಚುನಾವಣೆ ನಡೆದಿದ್ದು, ಈ ಪೈಕಿ ಸಂಘದ ಆಡಳಿತ ಮಂಡಳಿಯ ಪದಾಧಿಕಾರಿಗಳ ಆಯ್ಕೆಗಾಗಿ ಮಂಗಳವಾರ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿತ್ತು.

ನೂತನ ಪದಾಧಿಕಾರಿಗಳ ವಿವರ:

ಅಧ್ಯಕ್ಷರು: ಸಿ.ಎಂ. ನಾರಾಯಣಸ್ವಾಮಿ

ಉಪಾಧ್ಯಕ್ಷರು: ಜಿ. ಮುನಿಯಪ್ಪ (ಸಾಮಾನ್ಯ), ವಿ. ಕಾಂತಮ್ಮ (ಮಹಿಳಾ ಮೀಸಲು)

ತಾಲ್ಲೂಕು ಪ್ರಧಾನ ಕಾರ್ಯದರ್ಶಿ: ರವಿಕುಮಾರ್ ಕೆ.



ಸಹ ಕಾರ್ಯದರ್ಶಿ: ಶಶಿಧರ

ಖಜಾಂಚಿ: ಸುರೇಶ್ ಎಚ್.ಇ.

ಸಂಘಟನಾ ಕಾರ್ಯದರ್ಶಿ: ಶ್ರೀನಾಥ್ ಪಿ.

ಮಹಿಳಾ ಸಂಘಟನಾ ಕಾರ್ಯದರ್ಶಿ: ಕೆ. ಚಂದ್ರಕಲಾ (ಟೇಕಲ್) ಹಾಗೂ ಲಕ್ಷ್ಮಿ ಎನ್.

ಒಗ್ಗಟ್ಟಿನ ಪ್ರದರ್ಶನ: ಈ ಸಂದರ್ಭದಲ್ಲಿ ಮಾತನಾಡಿದ ಭಡ್ತಿ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಎಂ. ಮುನಿನಾರಾಯಣ, “ಶಾಸಕ ಕೆ.ವೈ. ನಂಜೇಗೌಡ ಹಾಗೂ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ವಿ. ಮುನೇಗೌಡ ಅವರ ಮಾರ್ಗದರ್ಶನದಂತೆ ಎಲ್ಲಾ 14 ಮಂದಿ ನಿರ್ದೇಶಕರು ಒಮ್ಮತದ ತೀರ್ಮಾನ ಕೈಗೊಂಡಿದ್ದೇವೆ. ಯಾವುದೇ ಪೈಪೋಟಿ ಇಲ್ಲದೆ ಒಗ್ಗಟ್ಟಿನಿಂದ 9 ಹುದ್ದೆಗಳಿಗೆ 9 ನಾಮಪತ್ರಗಳನ್ನು ಸಲ್ಲಿಸಲಾಗಿದೆ. ಕೇವಲ ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ” ಎಂದು ತಿಳಿಸಿದರು.

ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಲು ಕರೆ: ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದ ಹಿರಿಯ ಮುಖಂಡರು, ಸಂಘವು ಶಿಕ್ಷಕರ ಸಮಸ್ಯೆಗಳಿಗೆ ಕಾಲಕಾಲಕ್ಕೆ ಸ್ಪಂದಿಸಬೇಕು. ಇಲಾಖೆಯ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಸಂಘವನ್ನು ಕ್ರಿಯಾಶೀಲವಾಗಿ ಮುನ್ನಡೆಸಬೇಕು ಎಂದು ಆಶಿಸಿದರು.

ಮೇ 5 ರಂದು ನಾಮಪತ್ರ ಹಿಂಪಡೆಯಲು ಅವಕಾಶವಿದ್ದು, ಇದೇ 6ರಂದು ಚುನಾವಣಾಧಿಕಾರಿಗಳು ಅಧಿಕೃತವಾಗಿ ಫಲಿತಾಂಶ ಪ್ರಕಟಿಸಲಿದ್ದಾರೆ. ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಮುಖಂಡರಾದ ನಂದೀಶ್, ನಾಗರಾಜ್, ಎಂ. ರವಿ, ವೆಂಕಟೇಶ್ ಗೌಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 12ಕ್ಕೆ ಗಂಗಾತಾಯಿ ಜಾತ್ರಾ ಮಹೋತ್ಸವ

ವಿಜಯಪುರ

ಪಟ್ಟಣದ ಗ್ರಾಮದೇವತೆ ಗಂಗಾತಾಯಿ ದೇವಾಲಯದಲ್ಲಿ ಮೇ. 12ರಂದು ನಡೆಯಲಿರುವ 56ನೇ ವರ್ಷದ ಜಾತ್ರಾಮಹೋತ್ಸವದ ಹಿನ್ನೆಲೆಯಲ್ಲಿ ಮಂಗಳವಾರ ಗಂಗಾತಾಯಿ ದೇವಾಲಯದಲ್ಲಿ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಗಂಗಾದೇವಿ ದೇವಾಲಯದಲ್ಲಿ ಪ್ರಥಮ ದಿನದ ಪೂಜಾ ಕಾರ್ಯಕ್ರಮಗಳನ್ನು ನೆರವೇರಿಸಿದ ನಂತರ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಪುರಸಭೆ ಸದಸ್ಯ ಎಂ.ಸತೀಶ್ ಕುಮಾರ್ ಅವರು, ಪಟ್ಟಣದಲ್ಲಿ ಸಾಂಪ್ರದಾಯಿಕವಾಗಿ ನಡೆದುಕೊಂಡು ಬಂದಿರುವ, ಜಾತ್ರಾಮಹೋತ್ಸವದ ಆಚರಣೆಯಲ್ಲಿ, ಜಾತಿ, ಧರ್ಮದ ಹಂಗಿಲ್ಲದೆ, ಎಲ್ಲಾ ಸಮುದಾಯಗಳವರು ಭಾಗವಹಿಸುವುದು ಒಂದು ವಿಶೇಷ. ನಾವೆಲ್ಲರೂ ಒಂದೇ ಎನ್ನುವುದನ್ನು ಇದು ಸೂಚಿಸುತ್ತದೆ. ಇಂತಹ ಆಚರಣೆಗಳು ನಮ್ಮ ಧರ್ಮ ಮತ್ತು ಸಂಸ್ಕೃತಿಗೆ ಪ್ರತಿಬಿಂಬವಾಗಿವೆ ಎಂದರು.

ಜಾತ್ರಾ ಕಮಿಟಿಯ ಸದಸ್ಯ ಸಂಪತ್ ಕುಮಾರ್ ಮಾತನಾಡಿ, ಅನಾದಿಕಾಲದಿಂದಲೂ ಪ್ರತಿವರ್ಷದಂತೆ ಈ ವರ್ಷವೂ ಜಾತ್ರೆಯನ್ನು ಆಯೋಜನೆ ಮಾಡಲಾಗಿದ್ದು, ಪ್ರತಿದಿನವೂ ಒಂದೊಂದು ಕಾರ್ಯಕ್ರಮವನ್ನು ಆಯೋಜನೆಗೊಳಿಸಲಾಗಿದೆ. ಪಟ್ಟಣದಲ್ಲಿನ ಪ್ರತಿಯೊಂದು ಕುಟುಂಬದವರು, ಗ್ರಾಮದ ಹಬ್ಬದಲ್ಲಿ ಪಾಲ್ಗೊಳ್ಳಬೇಕು. ಇಂತಹ ಆಚರಣೆಗಳು ಗ್ರಾಮದ ಒಳಿತಿಗೆ ಪೂರಕವಾಗಿವೆ. ಇದನ್ನು ಶ್ರದ್ಧಾಭಕ್ತಿಯಿಂದ ಆಚರಣೆ ಮಾಡುವುದರಿಂದ ಪಟ್ಟಣದಲ್ಲಿ ಶಾಂತಿ ನೆಲೆಸಲಿದೆ ಎಂದರು.

ಗಂಗಾಮತಸ್ಥರ ಸಂಘದ ಅಧ್ಯಕ್ಷ ಉಪೇಂದ್ರಕುಮಾರ್ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಸಹಾ ಅನ್ನದಾನ ಕಮಿಟಿಯಿಂದ 5 ಸಾವಿರ ಮಂದಿಗೆ ಅನ್ನದಾನದ ವ್ಯವಸ್ಥೆ ಮಾಡಿದ್ದೇವೆ. ಜಾತ್ರೆಗೆ ಬರುವ ಸಾವಿರಾರು ಮಂದಿ ಭಕ್ತರಿಗೆ ಯಾವ ತೊಂದರೆ ಆಗದಂತೆ ಅಗತ್ಯವಾಗಿರುವ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದೇವೆ. ಪಟ್ಟಣ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳಿಂದಲೂ ಭಕ್ತರು ಬಂದು ದೀಪಗಳನ್ನು ಬೆಳಗಿ ಹೋಗುತ್ತಾರೆ ಎಂದರು.

ಮುಖಂಡರಾದ ನಾಗರಾಜ್, ನಾರಾಯಣಸ್ವಾಮಿ, ರುದ್ರಮೂರ್ತಿ, ಮಾಜಿ ಪುರಸಭೆ ಅಧ್ಯಕ್ಷೆ ಅನ್ನಪೂರ್ಣಮ್ಮ, ಕೆ.ಎಂ. ಮಹೇಶ್ ಮಧು, ಕೆ.ಮುನಿರಾಜು, ನವೀನ್ ಕುಮಾರ್, ವಿಶ್ವನಾಥ್, ಮುನಿಆಂಜಿನಪ್ಪ ಮುಂತಾದವರು ಹಾಜರಿದ್ದರು.

# ಆಲಿಕಲ್ಲು ಮಳೆ ಹೊಡೆತಕ್ಕೆ ನೆಲಕಚ್ಚಿದ ಬೆಳೆ; ರೈತರು ಕಂಗಾಲು

ಬೇತಮಂಗಲ

ಶುಕ್ರವಾರ ರಾತ್ರಿ ಸಂಭವಿಸಿದ ಭೀಕರ ಬಿರುಗಾಳಿ ಹಾಗೂ ಅಲಿಕಲ್ಲು ಮಳೆಗೆ ಬೇತಮಂಗಲ ಹೋಬಳಿಯ ಸುಮಾರು 600 ಎಕರೆಗೂ ಅಧಿಕ ಪ್ರದೇಶದಲ್ಲಿ ಬೆಳೆದಿದ್ದ ಮಾವು ಹಾಗೂ ಬಾಳೆ ಬೆಳೆಗಳು ಸಂಪೂರ್ಣ ನಾಶವಾಗಿವೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿರುವ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕಣ್ಣೀರು ಹಾಕುತ್ತಿದ್ದಾರೆ.

ಹೋಬಳಿಯ ಕರಡಗೂರು, ಮಜರರೆಡ್ಡಿಹಳ್ಳಿ, ನಕ್ಕನಹಳ್ಳಿ, ಚಿಂಚಾಂಡ್ಲಾಹಳ್ಳಿ, ಏತೂರು, ಮರವೂರು, ಕೆಸಿರೆಡ್ಡಿಗಾಂಡ್ಲಹಳ್ಳಿ ಹಾಗೂ ಕಣ್ಣೂರು ಐವಾರಹಳ್ಳಿ ಗ್ರಾಮಗಳಲ್ಲಿ ಮಳೆಯ ಆರ್ಭಟಕ್ಕೆ ಬೆಳೆಗಳು ಮಣ್ಣು ಪಾಲಾಗಿವೆ.

ಬೆಳೆ ಹಾನಿಯ ಸುದ್ದಿ ತಿಳಿಯುತ್ತಿದ್ದಂತೆಯೇ ಸಮಾಜ ಸೇವಕ ಹಾಗೂ ಆರ್‌ಕೆ ಫೌಂಡೇಶನ್‌ನ ಮೋಹನ್ ಕೃಷ್ಣ ಅವರು ಬಾಧಿತ ಗ್ರಾಮಗಳಿಗೆ ಭೇಟಿ ನೀಡಿ ಹಾನಿಯನ್ನು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಅವರು, “ರೈತ ಈ ದೇಶದ ಬೆನ್ನೆಲುಬು. ಆದರೆ ಪ್ರಕೃತಿಯ ವಿಕೋಪದಿಂದ ಇಂದು 600 ಎಕರೆ ಮಾವು ಹಾಗೂ ಬಾಳೆ ತೋಟಗಳು ನಾಶವಾಗಿವೆ. ಸರ್ಕಾರ ತಕ್ಷಣ ಎಚ್ಚೆತ್ತುಕೊಂಡು ಕಂದಾಯ ಮತ್ತು ಕೃಷಿ ಇಲಾಖೆ ಅಧಿಕಾರಿಗಳ ಮೂಲಕ ಸಮೀಕ್ಷೆ ನಡೆಸಿ, ಸಂಕಷ್ಟದಲ್ಲಿರುವ ಪ್ರತಿ ರೈತನಿಗೂ ಸೂಕ್ತ ಪರಿಹಾರ ನೀಡಬೇಕು,” ಎಂದು ಒತ್ತಾಯಿಸಿದರು.



ಇದೇ ವೇಳೆ ಸ್ಥಳೀಯ ಶಾಸಕರ ವಿರುದ್ಧ ಕಿಡಿಕಾರಿದ ಅವರು, “ರೈತರ ಬಗ್ಗೆ ಮಾತನಾಡುವವರು ನಿಮ್ಮ ವೈಯಕ್ತಿಕವಾಗಿ ರೈತರಿಗೆ ತಲಾ 2 ಲಕ್ಷ ರೂ. ನೆರವು ನೀಡಬಾರದೇಕೆ?” ಎಂದು ಪ್ರಶ್ನಿಸಿದರು. ಇದೇ ವೇಳೆ ಅವರು ಸಂಸದ ಮಲ್ಲೇಶ್ ಬಾಬು ಅವರೊಂದಿಗೆ ದೂರವಾಣಿ ಮೂಲಕ ಚರ್ಚಿಸಿದ್ದು, ಸಂಸದರು ಅಧಿಕಾರಿಗಳೊಂದಿಗೆ ಮಾತನಾಡಿ ಶೀಘ್ರವೇ ಪರಿಹಾರ ಒದಗಿಸುವ ಭರವಸೆ ನೀಡಿದ್ದಾರೆ ಎಂದರು.

“ನಷ್ಟಕ್ಕೊಳಗಾದ ರೈತರಿಗೆ ಆರ್‌ಕೆ ಫೌಂಡೇಶನ್ ವತಿಯಿಂದಲೂ ವೈಯಕ್ತಿಕ ನೆರವು ನೀಡಲಾಗುವುದು. ಆದರೆ ಸರ್ಕಾರ ಒಂದು ವಾರದೊಳಗೆ ಬಾಳೆ ಬೆಳೆಗಾರರಿಗೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಬೇಕು. ಇಲ್ಲವಾದಲ್ಲಿ ರೈತಪರ ಸಂಘಟನೆಗಳೊಂದಿಗೆ ಸೇರಿ ಬೃಹತ್ ಪ್ರತಿಭಟನೆ ನಡೆಸಲಾಗುವುದು,” ಎಂದು ಮೋಹನ್ ಕೃಷ್ಣ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಕಷ್ಟಕ್ಕೀಡಾದ ನೂರಾರು ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕೆಜಿಎಫ್ ಪೊಲೀಸರಿಂದ ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಜಾರಿ

ಕೆ.ಜಿ.ಎಫ್


ಜಿಲ್ಲೆಯಲ್ಲಿ ಮನೆ ಕಳ್ಳತನಗಳನ್ನು ತಡೆಯಲು ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಅನ್ನು ಕೆ.ಜಿ.ಎಫ್. ಪೊಲೀಸ್ ಇಲಾಖೆ ಇಂದಿನಿಂದ ಜಾರಿಗೊಳಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಜಿಲ್ಲಾ ಪೊಲೀಸ್ ಕಛೇರಿ, ಕೋಲಾರ ಚಿನ್ನದಗಣಿ ಪ್ರದೇಶದಲ್ಲಿ ಎಲ್.ಬಿ.ಎಚ್.ಎಸ್ ಉಪಕ್ರಮದ ಅನುಷ್ಠಾನ ಮಾಡಲು ಇಲಾಖೆಯು ಸನ್ನದ್ಧವಾಗಿದೆ. ಇದು ಆಸ್ತಿ ಸಂಬಂಧಿತ ಅಪರಾಧಗಳನ್ನು ತಡೆಯಲು ಗಮನಾರ್ಹ ಸಾಧನವಾಗಿದ್ದು, ಲಾಕ್ಡ್ ಹೌಸ್ ಬೀಟ್ ಸಿಸ್ಟಮ್ ಅಡಿ ಬೀಗ ಹಾಕಿದ ಮನೆಗಳಲ್ಲಿ ಕಳ್ಳತನ ಆಗದಂತೆ ತಡೆಗಟ್ಟುವುದು, ರಾತ್ರಿ ಗಸ್ತುಗಳನ್ನು ಹೆಚ್ಚು ಪರಿಣಾಮಕಾರಿಯಾಗಿಸುವುದು. ಅಪರಾಧ ತಡೆಗಟ್ಟುವಿಕೆಯಲ್ಲಿ ನಾಗರಿಕರ ಸಹಕಾರವನ್ನು ಹೆಚ್ಚಿಸುವುದು. ನೈಜ–ಸಮಯದ ಮಾಹಿತಿಯ ಆಧಾರದ ಮೇಲೆ ಉದ್ದೇಶಿತ ಕಣ್ಣಾವಲು ಇಟ್ಟುಕೊಳ್ಳುವುದಾಗಿದೆ.

ಈ ವ್ಯವಸ್ಥೆಯ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಈಗಾಗಲೇ ಕೆ.ಜಿ.ಎಫ್.ನ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗಿದೆ. ನಾಗರಿಕರು ತಮ್ಮ ನಿವಾಸಗಳಿಂದ ತಾತ್ಕಾಲಿಕವಾಗಿ ಹೊರ ಹೋಗುವ ಸಂದರ್ಭಗಳಲ್ಲಿ ಸ್ವಯಂಪ್ರೇರಣೆಯಿಂದ ಪೊಲೀಸರಿಗೆ ಮಾಹಿತಿ ತಿಳಿಸಬೇಕು. ಅಂತಹ ವೇಳೆಯಲ್ಲಿ ಪೊಲೀಸರು ಬೀಗ ಹಾಕಿದ ಮನೆಗಳ ಮೇಲೆ ಕೇಂದ್ರೀಕೃತವಾದ ಕಣ್ಗಾವಲು ಇಡಲು ಅನುಕೂಲವಾಗುತ್ತದೆ. ಪೊಲೀಸರು ಇ–ಬೀಟ್ ವ್ಯವಸ್ಥೆಯನ್ನು ಬಳಸಿಕೊಂಡು ಠಾಣಾ ವ್ಯಾಪ್ತಿಯಲ್ಲಿನ ಬೀಗ ಹಾಕಿದ ಮನೆಗಳ ಕಡೆ ವ್ಯವಸ್ಥಿತ ಗಸ್ತು ನಡೆಸುವ ಮೂಲಕ, ಈ ಉಪಕ್ರಮವು ಮಾಲೀಕರಿಲ್ಲದ ಸಂದರ್ಭಗಳನ್ನು ಉಪಯೋಗಿಸಿಕೊಂಡು ಮಾಡಬಹುದಾದ ಕನ್ನ ಕಳವು ಅಪರಾಧಗಳನ್ನು ತಡೆದು ಮನೆಗಳಿಗೆ ಮಾಲೀಕರು ಹಿಂತಿರುಗುವವರೆಗೆ ಸುರಕ್ಷತೆಯನ್ನು ಒದಗಿಸುತ್ತದೆ.

ಲಾಕ್ಡ್ ಹೌಸ್ ಬೀಟ್ ಸಿಸ್ಟಮ್‌ಗೆ ನೋಡಲ್ ಅಧಿಕಾರಿಯನ್ನು ನೇಮಿಸಿದ್ದು, ಸಾರ್ವಜನಿಕರು ಈ ವ್ಯವಸ್ಥೆಯನ್ನು ಉಪಯೋಗಿಸಿಕೊಳ್ಳಲು ವಾಟ್ಸಪ್ ಮೊಬೈಲ್ ನಂ: 8277963743 ಅನ್ನು ಸಂರ್ಕಿಸಿ ತಮ್ಮ ಹೆಸರು, ವಿಳಾಸ, ಗೂಗಲ್ ಲೊಕೇಶನ್, ಮನೆಯಿಂದ ಹೊರ ಹೋಗಿ ಹಿಂತಿರುಗುವ ಅವಧಿ ಹಾಗೂ ಮೊಬೈಲ್ ಸಂಖ್ಯೆಯ ಮಾಹಿತಿ ನೀಡಬೇಕು. ಮೊಬೈಲ್ ಸಂಖ್ಯೆಯ ಜೊತೆಗೆ ಜಿಲ್ಲಾ ನಿಯಂತ್ರಣ ಕೊಠಡಿಯ ಮೊಬೈಲ್ ಸಂಖ್ಯೆ 9480802700 ನ್ನು ಸಂರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು. ಈ ವ್ಯವಸ್ಥೆಯನ್ನು ಬಳಸಿಕೊಳ್ಳುವ ನಾಗರಿಕರ ಮಾಹಿತಿಯನ್ನು ಗೌಪ್ಯವಾಗಿಡಲಾಗುತ್ತದೆ ಎಂದು ಕೆ.ಜಿ.ಎಫ್. ಪೊಲೀಸ್ ಇಲಾಖೆ ತಿಳಿಸಿದೆ.

# ಪಂಚರಾಜ್ಯ ಫಲಿತಾಂಶಕ್ಕೆ ಕೇಸರಿ ಪಡೆ ಫಿದಾ



ವೈ.ಎನ್.ಹೊಸಕೋಟೆ

ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ವಿಧಾನಸಭಾ ಚುನಾವಣೆಗಳಲ್ಲಿ ಭಾರತೀಯ ಜನತಾ ಪಕ್ಷದ ಸಾಧನೆಯನ್ನು ಸ್ವಾಗತಿಸಿ, ವೈ.ಎನ್.ಹೊಸಕೋಟೆಯ ಬಿಜೆಪಿ ಕಾರ್ಯಕರ್ತರು ಪಟ್ಟಣದ ಗಾಂಧೀಜಿ ವೃತ್ತದಲ್ಲಿ ಅದ್ಧೂರಿ ವಿಜಯೋತ್ಸವ ಆಚರಿಸಿದರು.

ಅಸ್ಸಾಂ ಹಾಗೂ ಪುದುಚೇರಿಯಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯುವ ಮೂಲಕ ಬಿಜೆಪಿ ರಾಜಕೀಯ ಇತಿಹಾಸ ಸೃಷ್ಟಿಸಿದೆ ಎಂದು ಹರ್ಷ ವ್ಯಕ್ತಪಡಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಪರ ಘೋಷಣೆಗಳನ್ನು ಕೂಗಿದರು.

ಪಟ್ಟಣದ ಪ್ರಮುಖ ಕೇಂದ್ರವಾದ ಗಾಂಧೀಜಿ ವೃತ್ತದಲ್ಲಿ ಜಮಾಯಿಸಿದ ನೂರಾರು ಕಾರ್ಯಕರ್ತರು, ನಾಯಕರ ಭಾವಚಿತ್ರ ಹಾಗೂ ಪಕ್ಷದ ಬಾವುಟಗಳನ್ನು ಹಿಡಿದು ಮೆರವಣಿಗೆ ನಡೆಸಿದರು. ಈ ಗೆಲುವು ಪಕ್ಷದ ಜನಪರ ಆಡಳಿತಕ್ಕೆ ಸಂದ ಜಯ ಎಂದು ಕಾರ್ಯಕರ್ತರು ಸಂಭ್ರಮಿಸಿದರು.

ಗೆಲುವಿನ ಖುಷಿಯಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಾರ್ವಜನಿಕರಿಗೆ ಸಿಹಿ ಹಂಚಿದರು. ವಿಜಯೋತ್ಸವದಲ್ಲಿ ಭಾಗವಹಿಸಿದ್ದ ಹಿರಿಯ ಮುಖಂಡರು ಮಾತನಾಡಿ, ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ದೇಶಾದ್ಯಂತ ಪಕ್ಷವು ಬಲಿಷ್ಠವಾಗಿ ಬೆಳೆಯುತ್ತಿದೆ. ಈ ರಾಜ್ಯಗಳ ಫಲಿತಾಂಶವು ಮುಂಬರುವ ದಿನಗಳಲ್ಲಿ ದೇಶದ ರಾಜಕೀಯ ದಿಕ್ಸೂಚಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಬಿಜೆಪಿಯ ಹಿರಿಯ ಮುಖಂಡರು, ನೂರಾರು ಯುವ ಕಾರ್ಯಕರ್ತರು ಹಾಗೂ ಪಕ್ಷದ ಪದಾಧಿಕಾರಿಗಳು ಭಾಗವಹಿಸಿ ವಿಜಯದ ಸಂಭ್ರಮವನ್ನು ಹಂಚಿಕೊಂಡರು.

# ‘ಹಳ್ಳಿ ಜನರ ಪ್ರೋತ್ಸಾಹದಿಂದ ಜನಪದ ಕಲೆ ಜೀವಂತ’

ಬಳ್ಳಾರಿ

ಹಳ್ಳಿಯ ಜನರ ಪ್ರೋತ್ಸಾಹ, ಸಹಕಾರದಿಂದಲೇ ಇಂದಿಗೂ ಜನಪದ ಕಲೆ, ಸಂಸ್ಕೃತಿ ಜೀವಂತವಾಗಿ ಉಳಿಯಲು ಕಾರಣವಾಗಿದೆ. ಕಲೆಗಳ ಮೇಲಿನ ಅಭಿಮಾನ ಕಲಾವಿದರನ್ನು ಹುಟ್ಟುಹಾಕುವ, ಬೆಳೆಸುವ ಗುಣ ಇಂದಿಗೂ ಹಳ್ಳಿ ಜನರಲ್ಲಿದೆ. ಅವರಿಂದಾಗಿ ಉತ್ಸಾಹದಿಂದಲೇ ನಿರಂತರವಾಗಿ ಇಂತಹ ಸಂಸ್ಕೃತಿ ಕಾರ್ಯಕ್ರಮಗಳು ಜರುಗುತ್ತಿವೆ ಎಂದು ಕೆ.ಎಸ್. ಗಾದಿಲಿಂಗಪ್ಪ ಹೇಳಿದರು.

ತಾಲೂಕಿನ ಹುಲಕುಂದಿ ಗ್ರಾಮದಲ್ಲಿ ಶ್ರೀ ಮಾರುತಿ ತೊಗಲುಗೊಂಬೆ ಕಲಾ ಟ್ರಸ್ಟ್ ಬಳ್ಳಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ವಿಶೇಷ ಘಟಕ ಯೋಜನೆಡಿಯಲ್ಲಿ ಹಮ್ಮಿಕೊಂಡ ಗ್ರಾಮೀಣ ಸಾಂಸ್ಕೃತಿಕ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮದ ಶ್ರೀ ಈಶ್ವರ ದೇವಸ್ಥಾನ ಆವರಣದ ಬಯಲು ರಂಗ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬಳ್ಳಾರಿಯ ಸಹಾಯಕ ನಿರ್ದೇಶಕ ಬಿ ನಾಗರಾಜ್, ಪ್ರತಿ ವರ್ಷ ಗ್ರಾಮೀಣ ಭಾಗದ ಕಲೆ ಸಂಸ್ಕೃತಿ ಸಾಹಿತ್ಯ ಹಾಗೂ ಎಲ್ಲಾ ಕಲಾಪ್ರಕಾರಗಳನ್ನು ಉಳಿಸುವ ಬೆಳೆಸುವ ನಿಟ್ಟಿನಲ್ಲಿ ಇಲಾಖೆಯು ಪ್ರತಿವರ್ಷ ಸಾಮಾನ್ಯ, ವಿಶೇಷ ಘಟಕ, ಗಿರಿಜನ ಯೋಜನೆ ಅಡಿಯಲ್ಲಿ ಸಂಘ ಸಂಸ್ಥೆಗಳಿಗೆ ಧನ ಸಹಾಯ ನೀಡುತ್ತಿದೆ. ಇದರಿಂದ ಸಂಘ ಸಂಸ್ಥೆಗಳನ್ನು ಪ್ರೋತ್ಸಾಹಿಸುತ್ತಾ ಕಲೆ ಸಂಸ್ಕೃತಿ ಬೆಳವಣಿಗೆಗೆ ಸಹಕಾರವಾಗಲಿವೆ ಎಂದರು.

ಬಳ್ಳಾರಿ ಜಿಲ್ಲಾ ಕಲಾವಿದರ ಸಂಘದ ಅಧ್ಯಕ್ಷ ಯಲ್ಲನ ಗೌಡ ಶಂಕರ್‌ಬಂಡೆ, ಕಲೆ ಜನಪದ ಈ ನೆಲದ ಮೂಲ ಕಲೆಗಳಾಗಿವೆ. ಇವುಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಎಲ್ಲರಲ್ಲೂ ಒಂದಲ್ಲ ಒಂದು ರೀತಿಯ ಕಲೆ ಇರುತ್ತದೆ. ಅದನ್ನು ಸೂಕ್ತ ಸಮಯದಲ್ಲಿ ಗುರುತಿಸಿ ಪ್ರೋತ್ಸಾಹಿಸಿದಾಗ ಮಾತ್ರ ಒಳ್ಳೆ ಸಾಹಿತಿ, ಕಲಾವಿದ, ಸಂಗೀತಗಾರ, ಚಿತ್ರಕಲಾಕರ, ನಾಟಕಕಾರ ಉದಯಿಸಲು ಸಾಧ್ಯ. ಪೋಷಕರು ಮತ್ತು ಸಮಾಜದ ಜವಾಬ್ದಾರಿ ಇದ್ದು ಎಲ್ಲರೂ ಕಲೆ ಬಗ್ಗೆ ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸುವ ಕೆಲಸ ಮಾಡಬೇಕು. ಇದರಿಂದ ಮಕ್ಕಳು ಶೈಕ್ಷಣಿಕ ಜೊತೆಗೆ ಸಾಂಸ್ಕೃತಿಕವಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೆಚ್. ತಿಮ್ಮನಗೌಡ ವಹಿಸಿದ್ದರೆ, ಮುಖ್ಯ ಅತಿಥಿಗಳಾಗಿ ಎಚ್.ಆರ್ ಮಲ್ಲಿಕಾರ್ಜುನಗೌಡ, ಭೀಮರೆಡ್ಡಿ, ಚಂದ್ರಶೇಖರ್, ಕೇಶವ, ಪಿ.ಗವಿಸಿದ್ದಪ್ಪ, ಬಿ.ಎಂ ಪಾಟೀಲ್, ಯಲ್ಲಪ್ಪ ನಾಯಕ, ಕರ್ನಾಟಕ ಕಲಾಶ್ರೀ ಪ್ರಶಸ್ತಿ ಪುರಸ್ಕೃತ ಎಸ್. ಕೆ. ಜಿಲಾನಿ ಭಾಷಾ, ಬಯಲಾಟ ಅಕಾಡೆಮಿ ಮಾಜಿ ಸದಸ್ಯ ಹೆಚ್.ತಿಪ್ಪೇಸ್ವಾಮಿ ಹಾಗೂ ಊರಿನ ಹಿರಿಯ ಮುಖಂಡರು ಗ್ರಾಮ ಪಂಚಾಯತ್ ಮಾಜಿ ಸದಸ್ಯರು ಭಾಗವಹಿಸಿದ್ದರು.

ವೇದಿಕೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಜನಪದ ಗಾಯನ ಎಚ್.ಜಿ.ಸುಂಕಪ್ಪ ಎರಗುಡಿ ತಂಡ, ಸಮೂಹ ನೃತ್ಯ ಕುಮಾರಿ ಹೆಚ್. ಜೆ. ಸುಶ್ಮಿತಾ ಬಳ್ಳಾರಿ ತಂಡ, ಸುಗಮ ಸಂಗೀತ ದಳವಾಯಿ ಅಂಬಣ್ಣ ಸಿರುಗುಪ್ಪ ತಂಡ. ರಂಗಗೀತೆ ಅನ್ನಪೂರ್ಣ ಬಳ್ಳಾರಿ ತಂಡ ಮತ್ತು ಹಾಸ್ಯ ನಗೆ ನಾಟಕ ಹೆಚ್.ಹನುಮಂತಪ್ಪ ತಂಡದಿಂದ ದನ ಕಾಯೋರ ದೊಡ್ಡಾಟ ಎಂಬ ನಗೆ ನಾಟಕವು ನೆರೆದಿದ್ದ ಪ್ರೇಕ್ಷಕರನ್ನು ಹೊಟ್ಟೆ ಹುಣ್ಣಾಗಿಸುವಂತೆ ಮನರಂಜಿಸಿದವು.

ಶ್ರೀ ಮಾರುತಿ ತೊಗಲು ಗೊಂಬೆ ಕಲಾ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಸುಬ್ಬಣ್ಣ ನಿರ್ವಹಿಸಿದರೆ, ವೀರೇಶ್ ದಳವಾಯಿ ನಿರೂಪಿಸಿ, ಕಾರ್ಯಕ್ರಮ ನಡೆಸಿಕೊಟ್ಟರು.



Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy